**ಸಂಪುಟ:** 04 **ಸಂಚಿಕೆ:** 274 **ಪುಟಗಳು:** 08 ಮಂಗಳವಾರ 17 ಡಿಸೆಂಬರ್ 2024 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**
ವಿಸ್ತಾರವಾಗುತ್ತ ಹೋಗುವುದು ಜೀವನ. ಸಂಕುಚಿತವಾಗುತ್ತ ಸಾಗುವುದೇ ಸಾವು. ಪ್ರೀತಿಯೇ ಜೀವನ, ದ್ವೇಷವೇ ಸಾವು.

## 66ನೇ ವರ್ಷಕ್ಕೆ ಕಾಲಿಟ್ಟ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ

• ಉದಯವಾಹಿನಿ, ನವದೆಹಲಿ

**ಪ್ರಧಾನಿ ಮೋದಿ ಸೇರಿ ಗಣ್ಯರಿಂದ ಶುಭಾಶಯ**

66 ನೇ ವರ್ಷಕ್ಕೆ ಕಾಲಿಟ್ಟ ಕೇಂದ್ರದ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರಿಗೆ ಉಪ ರಾಷ್ಟ್ರಪತಿ ಜಗದೀಪ್ ಧನಕರ್, ಪ್ರಧಾನಿ ನರೇಂದ್ರ ಮೋದಿಲೋಕಸಭೆ ಸ್ಪೀಕರ್ ಓಂ ಬಿರ್ಲಾ, ಗೃಹ ಸಚಿವ ಅಮಿತ್ ಶಾ ಸೇರಿದಂತೆ ರಾಷ್ಟ್ರದ ಅನೇಕ ಗಣ್ಯರು ಶುಭಾಶಯ ಕೋರಿದ್ದಾರೆ.

ಉಪ ರಾಷ್ಟ್ರಪತಿ ಜಗದೀಪ್ ಧನಕರ್ ಅವರು ಬೆಳಗ್ಗೆ ಸಚಿವರಿಗೆ ದೂರವಾಣಿ ಕರೆ ಮಾಡಿ ಶುಭ ಕೋರಿದರು. ಈ ವೇಳೆ ಸಚಿವರು ಉಪ ರಾಷ್ಟ್ರಪತಿಗಳಿಗೆ ಧನ್ಯವಾದಗಳನ್ನು ತಿಳಿಸಿದರು. ಪ್ರಧಾನಿ ನರೇಂದ್ರ ಮೋದಿ ಅವರು ಸಚಿವರಿಗೆ ಭಾನುವಾರವೇ ಜನ್ಮದಿನ ಶುಭಾಶಯ ಪತ್ರ ಕಳಿಸಿ ಶುಭ ಕೋರಿದ್ದರು. ಸೋಮವಾರ ಬೆಳಗ್ಗೆಯೂ ಪ್ರಧಾನಿಗಳು ಸಚಿವರಿಗೆ ಶುಭ ಕೋರಿದ್ದಾರೆ.

ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್, ಗೋವಾ ಮುಖ್ಯಮಂತ್ರಿ ಡಾ.ಪ್ರಮೋದ್ ಸಾವಂತ್, ಅಸ್ಸಾಂ ಮುಖ್ಯಮಂತ್ರಿ ಹಿಮಂತ್ ಬಿಸ್ವಾಸ್ ಸರ್ಮ, ಆಂಧ್ರ ಪ್ರದೇಶದ ಉಪ ಮುಖ್ಯಮಂತ್ರಿ ಪವನ್ ಕಲ್ಯಾಣ್ ಅವರು ಹೆಚ್ಚಿಕೆ ಅವರಿಗೆ ಹಾರೈಸಿದ್ದಾರೆ. ಮಾಜಿ ಮುಖ್ಯಮಂತ್ರಿಗಳಾದ ಬಿ.ಎಸ್.ಯಡಿಯೂರಪ್ಪ, ಬಸವರಾಜ ಬೊಮ್ಮಾಯಿ, ಪ್ರತಿಪಕ್ಷ ನಾಯಕ ಅಶೋಕ್, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಡಾ.ಕೆ.ಸುಧಾಕರ್, ಸಂಸದ ಬಿ.ವೈ.ರಾಘವೇಂದ್ರ, ತೇಜಸ್ವಿಸೂರ್ಯ, ರಾಜ್ಯದ ಕೈಗಾರಿಕೆ ಸಚಿವರಾದ ಎಂ.ಬಿ.ಪಾಟೀಲ್ ಸೇರಿದಂತೆ ಅನೇಕರು ಸಚಿವರಿಗೆ ಜನ್ಮದಿನ ಶುಭಾಶಯ ಕೋರಿದ್ದಾರೆ.



**ಜ.22 ಕ್ಕೆ ವಿಚಾರಣೆ ಮುಂದೂಡಿಕೆ**

ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ಎಕ್ಸ್ ಖಾತೆಯ ಮೂಲಕ ಬೆಳಗ್ಗೆಯೇ ಸಚಿವರನ್ನು ಆಶೀರ್ವದಿಸಿದ್ದರು. ನನ್ನ ಪುತ್ರ ಹೆಚ್.ಡಿ.ಕುಮಾರಸ್ವಾಮಿ ಅವರಿಗೆ ಜನ್ಮದಿನದ ಪ್ರೀತಿಪೂರ್ವಕ ಶುಭಾಶಯಗಳು. ಭಗವಂತ ನಿಮಗೆ ಇನ್ನೂ ಹೆಚ್ಚಿನ ಆಯುರಾರೋಗ್ಯ ಕರುಣಿಸಿ ಇನ್ನಷ್ಟು ದೀರ್ಘ ಕಾಲ ಜನಸೇವೆ ಮಾಡುವ ಶಕ್ತಿ, ಚೈತನ್ಯ ನೀಡಲಿ ಎಂದು ಹಾರೈಸುತ್ತೇನೆ ಎಂದು ತಿಳಿಸಿದ್ದಾರೆ.

ಸೋಮವಾರ ಬೆಳಗ್ಗೆಯೇ ಸಚಿವ ಕುಮಾರಸ್ವಾಮಿ ಅವರು ನವದೆಹಲಿಯಲ್ಲಿರುವ ಹೌಜ್ ಕಾಸ್‌ನಲ್ಲಿರುವ ಶ್ರೀ ಶಿವ ದೇವಾಲಯಕ್ಕೆ ತೆರಳಿ ಪೂಜೆ ಸಲ್ಲಿಸಿದರು. ಅಭಿಷೇಕ ಮತ್ತು ಪೂಜೆಯಲ್ಲಿ ಪಾಲ್ಗೊಂಡ ಸಚಿವರು, ವಿಶೇಷ ಪೂಜೆ ಸಲ್ಲಿಸಿದರು. ಬಳಿಕ ಆರ್.ಕೆ. ಪುರಂ ಸೆಕ್ಟರ್ 5ರಲ್ಲಿರುವ ರಾಷ್ಟ್ರೀಯ ವಿಶೇಷ ಚೇತನ ಮಕ್ಕಳ ಶಾಲೆಗೆ ತೆರಳಿ ಮಕ್ಕಳ ಜತೆ ತಮ್ಮ ಹುಟ್ಟುಹಬ್ಬವನ್ನು ಸರಳವಾಗಿ ಆಚರಿಸಿಕೊಂಡರು. ಈ ಸಂದರ್ಭದಲ್ಲಿ ಸಚಿವರು ಮಕ್ಕಳಿಗೆ ಸ್ವೆಟರ್‌ಗಳನ್ನು, ಸಿಹಿಯನ್ನು ಹಂಚಿ ಕೆಲ ಸಮಯ ಅಲ್ಲಿಯೇ ಕಳೆದರು.

## ಆಸ್ತಿ ಗಳಿಕೆ ಕೇಸ್ ಜ.22 ಕ್ಕೆ ವಿಚಾರಣೆ ಮುಂದೂಡಿಕೆ

• ಉದಯವಾಹಿನಿ, ನವದೆಹಲಿ

ಡಿಸಿಎಂ ಡಿ.ಕೆ.ಶಿವಕುಮಾರ್ ವಿರುದ್ಧದ ಆದಾಯ ಮೀರಿ ಆಸ್ತಿ ಗಳಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಅರ್ಜಿ ವಿಚಾರಣೆಯನ್ನು ಜ.22 ಕ್ಕೆ ಸುಪ್ರೀಂ ಕೋರ್ಟ್ ಮುಂದೂಡಿದೆ. ಸುಪ್ರೀಂ ಕೋರ್ಟ್, ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅರ್ಜಿ ವಿಚಾರಣೆ ನಡೆಸಿತು. ವಿಚಾರಣೆ ವೇಳೆ, ಕೌಂಟರ್ ಅಫಿಡವಿಟ್ ಸಲ್ಲಿಸಲು ರಾಜ್ಯ ಸರ್ಕಾರಕ್ಕೆ ಸುಪ್ರೀಂ ಕೋರ್ಟ್ ಸೂಚಿಸಿತು. ಡಿಕೆಶಿ ಮೇಲಿನ ಸಿಬಿಐ ತನಿಖೆಯನ್ನು ರಾಜ್ಯ ಸರ್ಕಾರ ವಾಪಸ್ ಪಡೆದಿತ್ತು. ಸರ್ಕಾರದ ನಿರ್ಧಾರ ಪ್ರಶ್ನಿಸಿ ಯತ್ನಾಳ್ ಹಾಗೂ ಸಿಬಿಐ ಇಬ್ಬರೂ ಹೈಕೋರ್ಟ್ ಮೊರೆ ಹೋಗಿದ್ದರು. ಆದರೆ, ಅರ್ಜಿಯನ್ನು ಹೈಕೋರ್ಟ್ ವಜಾಗೊಳಿಸಿತ್ತು. ಕೊನೆಗೆ ಹೈಕೋರ್ಟ್ ಆದೇಶ ಪ್ರಶ್ನಿಸಿ ಯತ್ನಾಳ್ ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ್ದರು.

## ಕೇಂದ್ರದ ವಿರುದ್ಧ ಸುಳ್ಳು ಮಾಹಿತಿ ವಿಶ್ವನಾಥ್ ಕೆಂಡಾಮಂಡಲ

• ಉದಯವಾಹಿನಿ, ಬೆಳಗಾವಿ

ಸಿಎಂ ಸಿದ್ದರಾಮಯ್ಯ ಸದನಕ್ಕೆ ಸುಳ್ಳು ಹೇಳಿದ್ದಾರೆ. ಇಂತಹ ಸಿಎಂ ನಾನು ನೋಡಿಲ್ಲ ಅಂತ ಸಿಎಂ ಸಿದ್ದರಾಮಯ್ಯ ವಿರುದ್ಧ ಬಿಜೆಪಿ ಸದಸ್ಯ ಹೆಚ್.ವಿಶ್ವನಾಥ್ ವಿಧಾನ ಪರಿಷತ್ ಕಲಾಪದಲ್ಲಿ ವಾಗ್ದಾಳಿ ನಡೆಸಿದ ಘಟನೆ ನಡೆಯಿತು. ಪ್ರಶ್ನೋತ್ತರ ಅವಧಿ ವೇಳೆ ಗ್ರಂಥಾಲಯಗಳ ಬಗ್ಗೆ ವಿಶ್ವನಾಥ್ ಪ್ರಶ್ನೆ ಕೇಳಿದ್ರು. ಇದಕ್ಕೆ ಸಚಿವ ಮಧು ಬಂಗಾರಪ್ಪ ಉತ್ತರ ನೀಡಿದರು. ಈ ವೇಳೆ ಸಿಎಂ ವಿರುದ್ಧ ವಿಶ್ವನಾಥ್ ವಾಗ್ದಾಳಿ ನಡೆಸಿದ್ರು.

## ವಕ್ಫ್ ಪ್ರಶ್ನೆಗಳಿಗೂ ಉತ್ತರ ನೀಡಲೂ ಸಿದ್ಧವಿದೆ : ಸಿಎಂ ಸಿದ್ದರಾಮಯ್ಯ

• ಉದಯವಾಹಿನಿ, ಬೆಳಗಾವಿ

ಸರ್ಕಾರ ಉತ್ತರ ಕರ್ನಾಟಕದ ಚರ್ಚೆಗೂ ಸಿದ್ಧವಿದೆ. ವಕ್ಫ್ ಮಂಡಳಿ ಕುರಿತ ವಿರೋಧ ಪಕ್ಷಗಳ ಪ್ರಶ್ನೆಗಳಿಗೂ ಉತ್ತರ ನೀಡಲೂ ಸಿದ್ಧವಿದೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸ್ವತಃ ಅನ್ವರ್ ಮಾಣಿಪ್ಪಾಡಿ ಅವರೇ ಹಿಂದೆ ವಿಜಯೇಂದ್ರ ತಮಗೆ 150 ಕೋಟಿ ಹಣದ ಆಮಿಷ ಒಡ್ಡಿದ್ದರು ಎಂದು ಹೇಳಿದ್ದರ ಮೇಲೆ ನಾವು ಪ್ರತಿಕ್ರಿಯೆ ನೀಡಿದ್ದೇವೆ. ಈಗ ಬಹಳ ವರ್ಷಗಳ ನಂತರ ಹಿಂದೆ ಹಾಗೆ ಹೇಳಿಯೇ ಇಲ್ಲ ಎನ್ನುತ್ತಿದ್ದಾರೆ. ಅವರು ಹೇಳಿಕೆ ಬದಲಿಸಿದರೆ ಏನು ಮಾಡಬೇಕು ಪಂಚಮಸಾಲಿ ಸಮುದಾಯಕ್ಕೆ ಪ್ರವರ್ಗ 2ಎ ಮೀಸಲಾತಿ ನೀಡುವ ಸಂಬಂಧ ಯಾರು ಸಮಸ್ಯೆಯನ್ನು ಇತ್ಯರ್ಥ ಮಾಡಿಲ್ಲವೋ ಅವರೇ ಕ್ಷಮ ಕೇಳಬೇಕು. ನಿಜವಾಗಿ ಅವರು ಸಮುದಾಯದ ಕ್ಷಮೆ ಕೇಳಬೇಕು ಎಂದು ಹೇಳಿದ್ದಾರೆ.



# ₹ ಆಮಿಷ 150 ಕೋಟಿ ಕೈ, ಕಮಲ ಜಟಾಪಟಿ

1 ವಕ್ಫ್ ಹಗರಣ ಮುಚ್ಚಿ ಹಾಕಲು ಅಲ್ಪಸಂಖ್ಯಾತ ಆಯೋಗದ ಮಾಜಿ ಅಧ್ಯಕ್ಷರಿಗೆ 150 ಕೋಟಿ ರೂ. ಆಮಿಷ ಒಡ್ಡಿದ ಆರೋಪ

2 ಅನ್ವರ್ ಮಾಣಿಪ್ಪಾಡಿ ಆಮಿಷ ಒಡ್ಡಿದ ಆರೋಪವನ್ನು ಬೆಂಬಲಿಸಿದ ಸಿಎಂ ಸಿದ್ದರಾಮಯ್ಯ

3 ಸಿದ್ದರಾಮಯ್ಯ ಬಗ್ಗೆ ಮರುಕ ಬರುತ್ತಿದೆ ಎಂದು ಲೇವಡಿ

• ಉದಯವಾಹಿನಿ, ಬೆಳಗಾವಿ

ಸಿಎಂ ಸಿದ್ದರಾಮಯ್ಯ ಅವರು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರ ಮೇಲೆ ಮಾಡಿದ್ದ 150 ಕೋಟಿ ರೂ. ಆಮಿಷ ಆರೋಪ ವಿಧಾನಸಭೆಯಲ್ಲಿ ಪ್ರಸ್ತಾಪವಾಗಿ ಬಿಜೆಪಿ, ಕಾಂಗ್ರೆಸ್ ಸದಸ್ಯರ ನಡುವೆ ಮಾತಿನ ವಾಕ್ಸಮರಕ್ಕೆ ಕಾರಣವಾಯಿತು. ಕಲಾಪ ಆರಂಭವಾಗುತ್ತಿದ್ದಂತೆಯೇ ಸ್ಪೀಕರ್ ಯು.ಟಿ.ಖಾದರ್ ಅವರು, ಉ. ಕ.ಭಾಗದ ಚರ್ಚೆಗೆ ಅವಕಾಶ ಕೊಟ್ಟರು. ಪ್ರತಿಪಕ್ಷದ ನಾಯಕ ಆರ್.ಅಶೋಕ್ ಅವರು, ವಕ್ಫ್ ವಿಚಾರವನ್ನು ಪ್ರಸ್ತಾಪಿಸಿ ಸಚಿವ ಪ್ರಿಯಾಂಕ್ ಖರ್ಗೆ ಅವರು ನಮ್ಮ ಶಾಸಕ ವಿಜಯೇಂದ್ರ ವಿರುದ್ಧ ಸದನದಲ್ಲಿ ಆರೋಪ ಮಾಡಿದ್ದಾರೆ. ಆದರೆ, ಅವರು ಮಾತನಾಡುವುದಕ್ಕೆ ಮೊದಲೇ ನೋಟಿಸ್ ಕೊಡಬೇಕಿತ್ತು ಎಂದು ಪ್ರಶ್ನೆ ಮಾಡಿದರು. ಆಗ ಸಚಿವ ಪ್ರಿಯಾಂಕ್ ಖರ್ಗೆ ಎದ್ದು ನಿಂತು, ನಾನು ಆರೋಪ ಮಾಡಿಲ್ಲ, ಅನ್ವರ್ ಮಾಣಿಪ್ಪಾಡಿ ಆರೋಪ ಮಾಡಿದ್ದು, ಅದನ್ನೇ ನಾನು ಹೇಳಿದ್ದೇನೆ ಎಂದರು. ಚರ್ಚೆಗೆ ಅವಕಾಶ ನೀಡದ ಸ್ಪೀಕರ್ ಯು.ಟಿ.ಖಾದರ್ ಇದರ ಬಗ್ಗೆ ಸ್ಪಷ್ಟನೆ ನೀಡುವಂತೆ ವಿಜಯೇಂದ್ರ ಅವರಿಗೆ ಸೂಚಿಸಿದರು.

### ₹150 ಕೋಟಿ ಆಮಿಷ ಆರೋಪ ಸಿಬಿಐಗೆ ವಹಿಸಲು ವಿಜಯೇಂದ್ರ ಸವಾಲು

### ಬಿವೈ ವಿಜಯೇಂದ್ರ ಲೇವಡಿ

**ವಿಜಯೇಂದ್ರ ಸ್ಪಷ್ಟನೆ:** ಈ ವೇಳೆ ಬಿ.ವೈ.ವಿಜಯೇಂದ್ರ ಮಾತನಾಡಿ, ''ನನ್ನ ಮೇಲೆ ಸದನದಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ಅವರು ನನ್ನ ಅನುಪಸ್ಥಿತಿಯಲ್ಲಿ ಗುರುತರ ಆರೋಪ ಮಾಡಿದ್ದಾರೆ. ಕಾಂಗ್ರೆಸ್ ಅಧಿಕಾರ ದುರುಪಯೋಗಪಡಿಸಿ ಕೊಂಡಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನನ್ನ ಬಗ್ಗೆ ಹೇಳಿಕೆಯೊಂದನ್ನು ನೀಡಿದ್ದಾರೆ. ಅದಕ್ಕೆ ನನಗೆ ಅವರ ಮೇಲೆ ಆಕ್ರೋಶವಿಲ್ಲ, ಬದಲಿಗೆ ಅನುಕಂಪ ಹುಟ್ಟುತ್ತಿದೆ. ಹಗರಣಗಳ ಸರಮಾಲೆಯಲ್ಲಿ ಸಿಲುಕಿರುವ ಸಿಎಂ ಅವರು ತಮ್ಮನ್ನು ಮತ್ತು ತಮ್ಮ ಕುಟುಂಬವನ್ನು ರಕ್ಷಿಸಲು ಬೇರೆಯವರ ಮೇಲೆ ಗೂಬೆ ಕೂರಿಸುವ ಕೆಲಸ ಮಾಡುತ್ತಿದ್ದಾರೆ'' ಎಂದು ಕಿಡಿಕಾರಿದರು. ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ಸಚಿವ ಕೃಷ್ಣಬೈರೇಗೌಡ, ''ಇಲ್ಲಿ ರಾಜಕೀಯ ಭಾಷಣ ಮಾಡಬೇಡಿ'' ಎಂದರು.

ಆಗ ಮುಂದುವರೆಸಿದ ವಿಜಯೇಂದ್ರ, ''ಹಿಂದಿನ ಅಲ್ಪಸಂಖ್ಯಾತರ ಆಯೋಗದ ಹೆಸರು ಹೇಳಿ ನನ್ನ ಮೇಲೆ ಆರೋಪ ಮಾಡಲಾಗಿದೆ. ವಕ್ಫ್ ಆಸ್ತಿ ದುರುಪಯೋಗ ಕುರಿತು ಮಾಣಿಪ್ಪಾಡಿ ವರದಿ ಕೊಟ್ಟಿದ್ದರು. ನಂತರ ಉಪಲೋಕಾಯುಕ್ತ ನ್ಯಾ.ಆನಂದ್ ಅವರು ವರದಿ ಕೊಟ್ಟಿದ್ದರು. 2016ರಲ್ಲಿ ವಕ್ಫ್ ಆಸ್ತಿ ಕಬಳಿಕೆ ಬಗ್ಗೆ ವರದಿ ನೀಡಿದ್ದರು.

**ರಾಜಕೀಯ ಭಾಷಣ ಮಾಡಬೇಡಿ**

**ಬಿಜೆಪಿ, ಕಾಂಗ್ರೆಸ್ ಸದಸ್ಯರ ನಡುವೆ ವಾಕ್ಸಮರ**

### ವಿಜಯೇಂದ್ರ ಸವಾಲು

**ಅಲ್ಪಸಂಖ್ಯಾತರ ಆಯೋಗದ ಹಿಂದಿನ ಅಧ್ಯಕ್ಷರು ಸರ್ಕಾರಕ್ಕೆ ಶಿಫಾರಸು ಸಲ್ಲಿಸಿದ್ದನ್ನು ಸಿದ್ದರಾಮಯ್ಯ ಸಚಿವ ಸಂಪುಟ ತಿರಸ್ಕರಿಸಿತು. ಸಿಎಂ ಸಿದ್ದರಾಮಯ್ಯ ಅವರಿಗೆ ಸಿಬಿಐ ಬಗ್ಗೆ ಬಹಳ ವಿಶ್ವಾಸವಿದೆ'' ಎಂದರು. ''ನಾನು ಸಿಎಂಗೆ ಸವಾಲು ಹಾಕುತ್ತೇನೆ, 150 ಕೋಟಿ ರೂ. ಆಮಿಷ ಕುರಿತ ಆರೋಪವನ್ನು ಸಿಬಿಐಗೆ ವಹಿಸಲಿ, ಮುಡಾ ಪ್ರಕರಣವನ್ನು ಸಿಬಿಐಗೆ ಕೊಡಲಿ, ಜೊತೆಗೆ ಅನ್ವರ್ ಮಾಣಿಪ್ಪಾಡಿ ವರದಿಯ ತನಿಖೆಯನ್ನೂ ಸಿಬಿಐಗೆ ವಹಿಸಲಿ'' ಎಂದು ವಿಜಯೇಂದ್ರ ಸವಾಲು ಹಾಕಿದರು.**





**ಸಮಯ ವ್ಯರ್ಥ ಮಾಡುವ ಅಗತ್ಯವಿಲ್ಲ**

ವಕ್ಫ್ ವಿಚಾರ ಮಾತನಾಡದಂತೆ ಬಿ.ವೈ. ವಿಜಯೇಂದ್ರ ಅವರು ನನ್ನ ಮೇಲೆ ಒತ್ತಡ ಹೇರಿದ್ದರು. ಅಲ್ಲದೆ, 150 ಕೋಟಿ ರೂ. ಲಂಚದ ಆಮಿಷವೊಡ್ಡಿದ್ದರು ಎಂದು ಸ್ವತಃ ಬಿಜೆಪಿ ಮುಖಂಡ ಅನ್ವರ್ ಮಾಣಿಪ್ಪಾಡಿ ಆರೋಪಿಸಿದ್ದಾರೆ. ವಿಜಯೇಂದ್ರ ಅವರು ಈ ಸಂಬಂಧ ಸ್ಪಷ್ಟೀಕರಣ ನೀಡಲಿ. ಅದನ್ನು ಬಿಟ್ಟು ರಾಜಕೀಯ ಭಾಷಣ ಮಾಡುತ್ತಾ ಸದನದ ಸಮಯ ವ್ಯರ್ಥ ಮಾಡುವ ಅಗತ್ಯವಿಲ್ಲ ಎಂದು ಸಚಿವ ಕೃಷ್ಣ ಬೈರೇಗೌಡ ಹೇಳಿದರು.

**ಏನಿದು ಆರೋಪ..**

**ವಕ್ಫ್ ವಿಚಾರವಾಗಿ ಶುಕ್ರವಾರ ಸದನದಲ್ಲಿ ನಿಯಮ 69 ಅಡಿಯಲ್ಲಿ ನಡೆದ ಚರ್ಚೆಯ ಸಂದರ್ಭದಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ಗಂಭೀರ ಆರೋಪ ಮಾಡಿದ್ದರು. ವಕ್ಫ್ ಪ್ರಕರಣಕ್ಕೆ ಬಿಗ್ ಟ್ವಿಸ್ಟ್ ಕೊಟ್ಟ ಪ್ರಿಯಾಂಕ್ ಖರ್ಗೆ! 150 ಕೋಟಿ ಆಫರ್ ಆರೋಪಕ್ಕೆ ಉತ್ತರ ಕೊಡ್ತಾರಾ ವಿಜಯೇಂದ್ರ, ವಕ್ಫ್ ಹಗರಣದ ಬಗ್ಗೆ ಧ್ವನಿ ಎತ್ತದಂತೆ ಅನ್ವರ್ ಮಾಣಿಪ್ಪಾಡಿಗೆ 150 ಕೋಟಿ ರೂ. ಆಮಿಷವನ್ನು ಬಿಜೆಪಿ ಶಾಸಕ, ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ, ಒಡ್ಡಿದ್ದರು ಎಂದು ಹೇಳಿದ್ದರು.**

**ಸದನದಲ್ಲಿ ಆರೋಪಗಳ ಸುರಿಮಳೆ**

## ಒಂದು ಕುಟುಂಬ ತನ್ನ ಲಾಭಕ್ಕಾಗಿ ಸಂವಿಧಾನ ತಿದ್ದುಪಡಿ ಮಾಡಿತ್ತು: ನಿರ್ಮಲಾ ಸೀತಾರಾಮನ್


• ಉದಯವಾಹಿನಿ, ನವದೆಹಲಿ

**ಮೊದಲು ಸಂವಿಧಾನ ತಿದ್ದುಪಡಿ**

ಒಂದು ಕುಟುಂಬ ತನ್ನ ಲಾಭಕ್ಕಾಗಿ ಸಂವಿಧಾನವನ್ನು ತಿದ್ದುಪಡಿ ಮಾಡಿತ್ತು ಎಂದು ನೆಹರೂ ಕುಟುಂಬ ಹಾಗೂ ಕಾಂಗ್ರೆಸ್ ವಿರುದ್ಧ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಆರೋಪಿಸಿದ್ದಾರೆ.

1951 ರಲ್ಲಿ ವಾಕ್ ಸ್ವಾತಂತ್ರ್ಯವನ್ನು ತಡೆಯಲು ನೆಹರೂ ಅವರು ಮೊದಲು ಸಂವಿಧಾನ ತಿದ್ದುಪಡಿಯನ್ನು ಮಾಡಿದ್ದರು. ಈ ಮೂಲಕ ಕಾಂಗ್ರೆಸ್ ದೇಶದಲ್ಲಿ ಸಂವಿಧಾನ ನೀಡಿದ ವಾಕ್ ಸ್ವಾತಂತ್ರ್ಯವನ್ನು ಕಿತ್ತುಕೊಳ್ಳುವ ಪ್ರಯತ್ನ ಮಾಡಿತ್ತು ಎಂದು ಕಿಡಿಕಾರಿತ್ತು.

ಸಂವಿಧಾನ ಜಾರಿಗೆ 75 ವರ್ಷ ಪೂರ್ಣಗೊಂಡ ಹಿನ್ನೆಲೆ ನಡೆದ ವಿಶೇಷ ಚರ್ಚೆಯಲ್ಲಿ ಮಾತನಾಡಿದ ಅವರು, ನೆಹರೂ ಉತ್ತರಾಧಿಕಾರಿಗಳಾದ ಇಂದಿರಾ ಗಾಂಧಿ ಮತ್ತು ರಾಜೀವ್ ಗಾಂಧಿ ಅವರು ಕುಟುಂಬ ಮತ್ತು ರಾಜವಂಶಕ್ಕೆ ಸಹಾಯವಾಗುವಂತೆ ಸಂವಿಧಾನವನ್ನು ತಿದ್ದುಪಡಿ ಮಾಡುತ್ತಿದ್ದರು.




ಈ ತಿದ್ದುಪಡಿಗಳು ಪ್ರಜಾಪ್ರಭುತ್ವವನ್ನು ಬಲಪಡಿಸಲು ಅಲ್ಲ ಅಧಿಕಾರದಲ್ಲಿರುವವರನ್ನು ರಕ್ಷಿಸಲು ಮಾಡಲಾಯಿತು ಎಂದು ವಾಗ್ದಾಳಿ ನಡೆಸಿದ್ದಾರೆ. ರಾಜೀವ್ ಗಾಂಧಿ ಆಡಳಿತದಲ್ಲಿ ಶಾ ಬಾನೋ ಪ್ರಕರಣದಲ್ಲಿ ಸುಪ್ರೀಂ ಕೋರ್ಟ್ ತೀರ್ಪನ್ನು ರದ್ದುಗೊಳಿಸಿರುವುದನ್ನು ಉಲ್ಲೇಖಿಸಿ, ಕಾಂಗ್ರೆಸ್ ಮಹಿಳಾ ವಿರೋಧಿ ಎಂದು ಜರಿದರು. ರಾಜೀವ್ ಗಾಂಧಿ ಅವರು ಲೋಕಸಭೆಯಲ್ಲಿ 426 ಸದಸ್ಯರನ್ನು ಹೊಂದಿದ್ದರು. ರಾಜ್ಯಸಭೆಯಲ್ಲಿ 159 ಸದಸ್ಯರನ್ನು ಹೊಂದಿದ್ದರು. ಆದರೆ ಮಹಿಳಾ ಮೀಸಲಾತಿ ಮಸೂದೆಯನ್ನು ಅಂಗೀಕರಿಸುವ ದೃಢತೆ ತೋರಲಿಲ್ಲ. ನಾವು ಲೋಕಸಭೆ ಮತ್ತು ರಾಜ್ಯ ವಿಧಾನಸಭೆಗಳಲ್ಲಿ ಒಟ್ಟು ಸ್ಥಾನಗಳ ಮೂರನೇ ಒಂದು ಭಾಗವನ್ನು ಮಹಿಳೆಯರಿಗೆ ಮೀಸಲಿಡಲು ಶಾಸನ ಜಾರಿ ಮಾಡಲಿದ್ದೇವೆ ಎಂದಿದ್ದಾರೆ. ತುರ್ತು ಪರಿಸ್ಥಿತಿ ಉಲ್ಲೇಖಿಸಿದ ಅವರು ರಾಜಕೀಯ ಭಿನ್ನಾಭಿಪ್ರಾಯ ಹೊಂದಿರುವ ನಾಯಕರನ್ನು ಈ ಅವಧಿಯಲ್ಲಿ ಬಂಧಿಸಲಾಗಿತ್ತು ಎಂದ ಇದೇ ವೇಳೆ ಅವರು ಉಲ್ಲೇಖಿಸಿದ್ದಾರೆ.

## ಪರಿಷತ್ ನಲ್ಲಿ ಸದನದ ಬಾವಿಗಳಿದು ಬಿಜೆಪಿ ಧರಣಿ

• ಉದಯವಾಹಿನಿ, ಬೆಳಗಾವಿ

ಕಳೆದ ಕೆಲವು ದಿನಗಳ ಹಿಂದೆ ಪಂಚಮಸಾಲಿ ಸಮುದಾಯಕ್ಕೆ 2ಎ ಮೀಸಲಾತಿ ನೀಡುವ ವಿಚಾರಕ್ಕೆ ಸಂಬಂಧಪಟ್ಟಂತೆ ಬೆಳಗಾವಿಯ ಸುವರ್ಣಸೌಧ ಮುತ್ತಿಗೆ ಹಾಕಲು ಪಂಚಮಸಾಲಿ ಹೋರಾಟಗಾರರು ಯತ್ನಿಸಿದ್ದರು.



ಈ ವೇಳೆ ಪೊಲೀಸರು ಅವರನ್ನು ತಡೆಯಲು ಮುಂದಾಗಿದ್ದರು ಕೂಡ ಹೋರಾಟಗಾರರು ಬ್ಯಾರಿಕೇಡ್ ತಳ್ಳಿ ಸುವರ್ಣಸೌಧ ಮತ್ತಿಗೆಗೆ ಹಾಕಲು ಯತ್ನಿಸಿದಾಗ, ಲಾಠಿ ಚಾರ್ಜ್ ನಡೆಸಿದರು. ಈ ವಿಚಾರವಾಗಿ ಇಂದು ಪರಿಷತ್ ನಲ್ಲಿ ಬಿಜೆಪಿ ಸದಸ್ಯರು ಸದನದ ಬಾವಿಗಿಳಿದು ಧರಣಿ ನಡೆಸಿದರು. ಹೌದು ಪಕ್ಷಿಮಸಾಲಿ ಮೀಸಲಾತಿ ಹೋರಾಟಗಾರರ ಮೇಲೆ ಲಾಟಿಚಾರ್ಜ್ ಮಾಡಿದ್ದನ್ನು ಖಂಡಿಸಿ, ವಿಧಾನ ಪರಿಷತ್ ನಲ್ಲಿ ಸದನದ ಬಾವಿಗಳಿಗೆ ಬಿಜೆಪಿ ಸದಸ್ಯರು ಧರಣಿ ನಡೆಸುತ್ತಿದ್ದಾರೆ. ಪಂಚಮಸಾಲಿ ಸಮಾಜದ ಹೋರಾಟಗಾರರ ಮೇಲೆ ಲಾಠಿಚಾರ್ಜ್ ಆಗಿದೆ. ಮೀಸಲಾತಿ ನೀಡುವ ವಿಚಾರದಲ್ಲಿ ಸದನಕ್ಕೆ ತಪ್ಪು ಮಾಹಿತಿ ನೀಡಿದ್ದಾರೆ. ಸರ್ಕಾರ ಕ್ಷಮೆ ಕೋರಬೇಕು ಎಂದು ಆಗ್ರಹಿಸಿ ಬಿಜೆಪಿ ಸದಸ್ಯರು ಬಾವಿಗಿಳಿದು ಧರಣಿ ಮಾಡುತ್ತಿದ್ದಾರೆ.

## ಅಶೋಕ್ ಕಾರ್ಯವೈಖರಿಗೆ ಬಿಜೆಪಿಯಲ್ಲೇ ಅಪಸ್ವರ!

• ಉದಯವಾಹಿನಿ, ಬೆಳಗಾವಿ

**ಹಳಿ ತಪ್ಪಿಸಲು ಪದೇ ಪದೇ ವಾಗ್ದಾಳಿ**

ವಿಧಾನ ಸಭೆಯ ಪ್ರತಿಪಕ್ಷ ನಾಯಕ ಆರ್ ಅಶೋಕ್ ಕಾರ್ಯವೈಖರಿಗೆ ಬಿಜೆಪಿಯಲ್ಲೇ ಅಪಸ್ವರ ಕೇಳಿಬಂದಿದೆ. ಬಿಜೆಪಿಯ ಕೆಲ ಶಾಸಕರು ಅಶೋಕ್ ಕಳೆದ ವಾರ ನಡೆದ ಕಲಾಪಗಳಲ್ಲಿ ಸರಿಯಾಗಿ ಕಾರ್ಯನಿರ್ವಹಣೆ ಮಾಡಿಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದ್ದಾರೆ.ಮುಖ್ಯವಾಗಿ ಆರ್‌ಎಸ್ ಎಸ್ ಮತ್ತು ಪಂಚಮಸಾಲಿ ಮೀಸಲಾತಿ ವಿಚಾರದಲ್ಲಿ ಅಶೋಕ್ ನಡೆಗೆ ಕಮಲ ಶಾಸಕರು ಅತೃಪ್ತಿ ಹೊಂದಿರುವ ವಿಚಾರ ಮೂಲಗಳಿಂದ ತಿಳಿದುಬಂದಿದೆ.

ಪಂಚಮಸಾಲಿ ಮೀಸಲಾತಿ ಪ್ರತಿಭಟನೆಯ ವೇಳೆ ಆರ್‌ಎಸ್‌ಎಸ್‌ನವರು ಬಂದು ಕಲ್ಲು ಹೊಡೆದರು ಎಂಬ ವಿಜಯಾನಂದ ಕಾಶಪ್ಪನವರ್ ಹೇಳಿಕೆಗೆ ಸಂಘದ ಹಿನ್ನೆಲೆಯ ಶಾಸಕರು ಬೇಸರ ವ್ಯಕ್ತಪಡಿಸಿದ್ದಾರೆ. ಕಾಶಪ್ಪನವರ್ ಹಾಗೂ ಕಾಂಗ್ರೆಸ್ ವಿರುದ್ಧ ಅಶೋಕ್ ಅವರು ಸರಿಯಾಗಿ ಖಂಡಿಸಿ ತಿರುಗೇಟು ನೀಡಬೇಕಿತ್ತು. ಆದರೆ ಅಶೋಕ್ ಸರಿಯಾಗಿ ಹೇಳಿಕೆಯನ್ನು ಖಂಡಿಸಲಿಲ್ಲ.



ಸ್ಪೀಕರ್ ಅವರು ಪಕ್ಷಪಾತಿ ಧೋರಣೆ ತಳೆದಿರುವ ಆರೋಪ ವಿಚಾರದಲ್ಲೂ ಶಾಸಕರಿಗೆ ಅಶೋಕ್ ಸಾಥ್ ಕೊಡಲಿಲ್ಲ. ಸ್ಪೀಕರ್ ಕಚೇರಿಗೆ ಘೇರಾವ್ ಹಾಕಲು ಕೆಲ ಶಾಸಕರು ಮುಂದಾದಾಗ ಅಶೋಕ್ ದ್ವಂದ್ವ ಮನಸ್ಸಿನಿಂದ ಸಹಕಾರ ನೀಡಿದ್ದರು. ಬೆಳಿಗ್ಗೆ ಚರ್ಚೆ ಮಾಡಿ ಬಂದಿರುತ್ತೇವೆ. ಆದರೆ ಸದನ ನಡೆಯುವಾಗ ಬೇರೆಯೇ ಆಗಿರುತ್ತದೆ. ಆಡಳಿತ ಪಕ್ಷದ ಕೆಲವು ಸದಸ್ಯರು ಚರ್ಚೆ ಹಳಿ ತಪ್ಪಿಸಲು ಪದೇ ಪದೇ ವಾಗ್ದಾಳಿ ನಡೆಸುತ್ತಲೇ ಇರುತ್ತಾರೆ. ಅವರ ಬಾಯಿ ಮುಚ್ಚಿಸುವ ಕೆಲಸ ಮಾಡುವುದಿಲ್ಲ. ವಿರೋಧ ಪಕ್ಷದ ನಾಯಕರೆಂಬ ಬೆಲೆ ಕೊಡದೇ ವರ್ತಿಸುತ್ತಾರೆ.

ರಾಜ್ಯಾಧ್ಯಕ್ಷರಾಗಿರುವ ವಿಜಯೇಂದ್ರ ಮತ್ತು ಅಶೋಕ್ ಮಧ್ಯೆಯೂ ಸರಿಯಾದ ಸಮನ್ವಯತೆ ಸೃಷ್ಟಿಯಾಗುತ್ತಿಲ್ಲ. ಸದನದಲ್ಲಿ ಹಾಗೂ ಸದನದ ಹೊರಗೆ ಅಶೋಕ್ ಒಂದು ದಿಕ್ಕು, ವಿಜಯೇಂದ್ರ ಇನ್ನೊಂದು ದಿಕ್ಕು ಎಂಬಂತೆಯಾಗಿದೆ ಎಂದು ಹೇಳಿಕೊಂಡಿದ್ದಾರೆ.

# ಸಿದ್ದರಾಮಯ್ಯನವರು ರಾಜಕೀಯ ಚಕ್ರವ್ಯೂಹದಲ್ಲಿ ಸಿಲುಕಿಕೊಂಡಿದ್ದಾರೆ!

● ಹೊಸ ಸರ್ಕಾರ ಬಂದ ನಂತರ ಈ ಸರ್ಕಾರ ಯಾವುದೇ ಅನುದಾನ ಕೊಟ್ಟಿಲ್ಲ ● ಒಂದೇ ಒಂದು ಗುದ್ದಲಿ ಪೂಜೆಯನ್ನು ಯಾವ ಶಾಸಕರು ಮಾಡಿಲ್ಲ ಎಂದು ಆಕ್ರೋಶ

• ಉದಯವಾಹಿನಿ, ಸುವರ್ಣ ಸೌಧ

**ಸಿಎಂ ವಿರುದ್ಧ ಶಾಸಕ ಕಿಡಿ**

ಬೆಳಗಾವಿಯ ಸುವರ್ಣ ಸೌಧದಲ್ಲಿ ಚಳಿಗಾಲದ ಅಧಿವೇಶನ ನಡೆಯುತ್ತಿದೆ. ಈ ವೇಳೆ ನಿಯಮ 69ರ ಅಡಿಯಲ್ಲಿ ಅನುದಾನದ ಬಗ್ಗೆ ಶಾಸಕ ಸುನಿಲ್ ಕುಮಾರ್ ಪ್ರಸ್ತಾಪಿಸಿದ್ದಾರೆ. ನಾವು ಯಾವುದೇ ಶಾಸಕರು ಗೌರವಯುತವಾಗಿ ಕೆಲಸ ಮಾಡೋಕೆ ಆಗುತ್ತಿಲ್ಲ. ಹೊಸ ಸರ್ಕಾರ ಬಂದ ನಂತರ ಈ ಸರ್ಕಾರ ಯಾವುದೇ ಅನುದಾನ ಕೊಟ್ಟಿಲ್ಲ. ಒಂದೇ ಒಂದು ಗುದ್ದಲಿ ಪೂಜೆಯನ್ನು ಯಾವ ಶಾಸಕರು ಮಾಡಿಲ್ಲ ಎಂದು ಆಕ್ರೋಶ ಹೊರಹಾಕಿದರು.



ಒಂದೇ ಒಂದು ಗುದ್ದಲಿ ಪೂಜೆ ಮಾಡಲಾಗಿಲ್ಲ ನಮಗೆ ಮಾತ್ರವಲ್ಲ ಯಾವುದೇ ಶಾಸಕರಿಗೂ ಒಂದೇ ಒಂದು ಗುದ್ದಲಿ ಪೂಜೆ ಮಾಡಲಾಗಿಲ್ಲ. ಆಡಳಿತ ಪಕ್ಷದ ಶಾಸಕರ ಪರಿಸ್ಥಿತಿ ಕೂಡ ಇದೇ ಆಗಿದೆ. ಸಿದ್ದರಾಮಯ್ಯ ಸರ್ಕಾರದಿಂದ ಝೀರೋ ಡೆವಲಪ್ ಮೆಂಟ್. ಎರಡು ವರ್ಷಗಳಲ್ಲಿ ಈ ಸರ್ಕಾರ ಯಾವ ಯಾವ ಇಲಾಖೆಗೆ ಎಷ್ಟೆಷ್ಟು ಅನುದಾನ ಕೊಟ್ಟಿದೆ ಎಂದು ಪ್ರಶ್ನಿಸಿದರು. 224 ವಿಧಾನಸಭೆ ಕ್ಷೇತ್ರಗಳ ಅಭಿವೃದ್ಧಿಗೆ ಕೊಟ್ಟ ಅನುದಾನದ ಬಗ್ಗೆ ಶ್ವೇತಪತ್ರ ಹೊರಡಿಸಿ ಎಂದು ಆಗ್ರಹಿಸಿದರು.



**ಆಡಳಿತ ಪಕ್ಷದ ಸರ್ಕಾರಕ್ಕೆ ಸಾಲು ಸಾಲು ಪ್ರಶ್ನೆ**

**ಈ ಸರ್ಕಾರ ಬಂದ ನಂತರ ಎಷ್ಟು ರೈತರಿಗೆ ವಿದ್ಯುತ್ ಸಂಪರ್ಕ ಕೊಟ್ಟಿದ್ದೀರಿ. ಎಷ್ಟು ಶಾಲಾ ಕೊಠಡಿಗಳು ಈ ಸರ್ಕಾರದಿಂದ ಆಗಿದೆ ಉಡುಪಿ ಜಿಲ್ಲೆಯಲ್ಲಿ ಕಿಂಡಿ ಅಣೆಕಟ್ಟುಗಳಿಗೆ ಹಲಗೆ ಹಾಕಲಿಕ್ಕೆ ಹಣ ಕೊಟ್ಟಿಲ್ಲ ಈ ಸರ್ಕಾರ. ನಮ್ಮ ಸರ್ಕಾರ ಕೊಟ್ಟ 8000 ಶಾಲೆಗಳನ್ನು ಇನ್ನೂ ಪೂರ್ಣಗೊಳಿಸಿಲ್ಲ. ನೀರಾವರಿ ಯೋಜನೆಗಳನ್ನು ಎಷ್ಟು ಎಕರೆಗೆ ವಿಸ್ತೀರ್ಣ ಮಾಡಿದ್ದೀರಿ ಆಶ್ರಯ ಯೋಜನೆಯಡಿಯಲ್ಲಿ ಒಂದು ಮನೆಯನ್ನು ಕೊಟ್ಟಿಲ್ಲ ಎಂದು ಸಾಲು ಸಾಲು ಪ್ರಶ್ನೆಗಳನ್ನು ಸಿಎಂ ಸಿದ್ದರಾಮಯ್ಯಗೆ ಕೇಳಿದರು. ಡಿಕೆ ಶಿವಕುಮಾರ್‌ಗೂ ಟಾಂಗ್ ಕಾಂಗ್ರೆಸ್ ನಲ್ಲಿ ಶಾಸಕರು ಅನುದಾನ ಕೇಳಿದ್ರೆ ನೋಟಿಸ್ ಕೊಡ್ತೇನೆ ಅಂತಾರೆ. ಜಯನಗರ ಶಾಸಕರು ಅನುದಾನ ಕೇಳಿದ್ರೆ ತಗ್ಗಿ ಬಗ್ಗಿ ಬರಬೇಕು ಅಂತಾ ಹೇಳ್ತಾರೆ. ಶಾಸಕರು ಆದವರಿಗೆ ಈ ರೀತಿಯ ಹೇಳೋದಾ ಸರೀನಾ ಎಂದು ಪರೋಕ್ಷವಾಗಿ ಡಿಸಿಎಂ ಡಿಕೆ ಶಿವಕುಮಾರ್ ಮಾತಿಗೆ ಶಾಸಕ ಸುನೀಲ್ ಕುಮಾರ್ ಆಕ್ರೋಶ ವ್ಯಕ್ತಪಡಿಸಿದರು.**

ಸಿಎಂ ರಾಜಕೀಯ ಚಕ್ರವ್ಯೂಹದಲ್ಲಿ ಸಿಲುಕಿದ್ದಾರೆ ನನ್ನ ಕ್ಷೇತ್ರಕ್ಕೆ ಒಂದೇ ಒಂದು ರೂಪಾಯಿ ಅನುದಾನ ಕೊಟ್ಟಿಲ್ಲ. ಸಿದ್ದರಾಮಯ್ಯನವರ ಮೇಲೆ ಬಹಳ ಗೌರವ ಇದೆ. ಬಜೆಟ್ ಮಂಡಿಸಿ, ಅಭಿವೃದ್ಧಿ ಹಣ ಕೊಟ್ಟಿಲ್ಲ ಅಂದರೆ ಆರ್ಥಿಕ ದಿವಾಳಿಯಾಗಿದೆ ಎಂದು ಕರೆಯಬೇಕಾ, ರಾಜಕೀಯ ಚಕ್ರವ್ಯೂಹದಲ್ಲಿ ಸಿದ್ದರಾಮಯ್ಯನವರು ಸಿಕ್ಕಿ ಹಾಕಿಕೊಂಡಿದ್ದೀರಿ ಎಂದು ಕುಟುಕಿದರು. ಈ ವೇಳೆ ರಾಜಕೀಯ ಚಕ್ರವ್ಯೂಹ ಮಾತಿಗೆ ಕಾಂಗ್ರೆಸ್ ಸದಸ್ಯರ ಆಕ್ಷೇಪ ವ್ಯಕ್ತಪಡಿಸಿದರು. ಸುನಿಲ್ ಮಾತಿಗೆ ಕಾಂಗ್ರೆಸ್ ಶಾಸಕರಿಂದ ಸುನಿಲ್ ಕುಮಾರ್ ಮಾತಿಗೆ ಆಕ್ರೋಶ ಹೊರಹಾಕಿದ ಸಚಿವ ಶಿವರಾಜ್ ತಂಗಡಗಿ, ಸುನೀಲ್ ಕುಮಾರ್ ನಮ್ಮ ಪಕ್ಷದಲ್ಲ, ಅವರ ಪಕ್ಷದಲ್ಲಿ ಆಗಿರುವ ರಾಜಕೀಯ ಚಕ್ರವ್ಯೂದ ಬಗ್ಗೆ ಮಾತಾಡ್ತಿದ್ದಾರೆ. ಒಂದು ಯತ್ನಾಳ್ ಗುಂಪು, ಇನ್ನೊಂದು ವಿಜಯೇಂದ್ರ ಗುಂಪು ಎಂದು ಕಿಡಿಕಾರಿದರು. ಈ ವೇಳೆ ಎರಡು ಪಕ್ಷಗಳ ಸದಸ್ಯರ ನಡುವೆ ಗದ್ದಲ ಜೋರಾಯಿತು. ಗುಂಡಿ ಮುಚ್ಚಲೂ ಹಣ ಕೊಟ್ಟಿಲ್ಲ ಮುಂದುವರೆದು ಮಾತನಾಡಿದ ಶಾಸಕ ಸುನಿಲ್ ಕುಮಾರ್, ರಾಜಕೀಯ ಚಕ್ರ ವ್ಯೂಹದ ಜೊತೆ ಆರ್ಥಿಕ ಚಕ್ರ ವ್ಯೂಹದಲ್ಲಿ ಸಿದ್ದರಾಮಯ್ಯ ಸಿಕ್ಕಿ ಹಾಕಿಕೊಂಡಿದ್ದಾರೆ. ಗುಂಡಿ ಮುಚ್ಚುವುದಕ್ಕೆ ಈ ಸರ್ಕಾರ ಹಣವನ್ನು ಕೊಟ್ಟಿಲ್ಲ. ಎಷ್ಟು ರಸ್ತೆಗಳು ಅಭಿವೃದ್ಧಿಯಾಗಿವೆ ಎಂದು ಪ್ರಶ್ನಿಸಿದರು.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹7,789/Gram24ct ₹7,140/Gram22ct ಬೆಳ್ಳಿ: ₹92.50/Gram



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
**ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ ರಾಮೋಹಳ್ಳಿ**

### ಮಂದಿರಗಳ ಮೇಲೆ ಮುಸ್ಲಿಮರ ದಾಳಿ

ಕಾಶಿ ವಿಶ್ವನಾಥ ಮಂದಿರ ಮುಂತಾದ ಹಿಂದುಗಳ ಅನೇಕ ಪವಿತ್ರ ದೇವಾಲಯಗಳು ಮುಸ್ಲಿಮರಿಂದ ಮಸೀದಿಯಾಗಿ ಪರಿವರ್ತನೆಗೊಂಡರೆ ಹಿಂದುಗಳ ಅನೇಕ ದೇವಾಲಯಗಳು ಮುಸ್ಲಿಮರಿಂದ ದಾಳಿಗೊಳಗಾಗಿ ಹಾನಿ ಧ್ವಂಸಗಳಾಗಿವೆ. ಆ ಪೈಕಿ ಕೆಲವನ್ನು ಇಲ್ಲಿ ಉದಾಹರಿಸಿದೆ. ಮೊದಲನೆಯದಾಗಿ ಮೊಢೇರಾದ ಸೂರ್ಯದೇವಾಲಯ. ಗುಜರಾತಿನ ಮೆಹ್ಸಾನ ಜಿಲ್ಲೆಯ ಪಟ್ಟಣ ಮೊಢೇರಾ. ಕ್ರಿಸ್ತಶಕ ಪೂರ್ವ ಹನ್ನೊಂದನೆಯ ಶತಮಾನದಲ್ಲಿ ಆಳ್ವಿಕೆಯಲ್ಲಿದ್ದ ಸೋಲಂಕಿಗಳ ಆರಾಧ್ಯ ದೈವ ಸೂರ್ಯಭಗವಾನ್. ಕ್ರಿಸ್ತಶಕ ಪೂರ್ವ 1022 ರಿಂದ 1063 ರ ಅವಧಿಯಲ್ಲಿ ರಾಜಾ ಭೀಮದೇವ ಸೋಲಂಕಿ ಮೊಢೇರಾದಲ್ಲಿ ಸೂರ್ಯದೇವಾಲಯವನ್ನು ನಿರ್ಮಿಸಿದ. ಓರಿಸ್ಸಾದ ಕೋನಾರ್ಕ, ಜಮ್ಮುವಿನ ಮಾರ್ತಾಂಡ ಸೂರ್ಯದೇವಾಲಯಗಳನ್ನೊಳಗೊಂಡ ಭಾರತದ ಮೂರು ಸೂರ್ಯ ದೇವಾಲಯಗಳಲ್ಲಿ ಇದು ಒಂದು. ಇಲ್ಲಿ ಕೆತ್ತಿದ ವಿಕ್ರಮ ಸಾಂವತ್ 1083 ಇದು ಕ್ರಿಸ್ತಶಕ ಪೂರ್ವದ್ದು ಎಂಬುದಕ್ಕೆ ಸಾಕ್ಷಿ. ಇದರ ಗೋಪುರದ ಎತ್ತರ 51 ಅಡಿ. ಅಗಲ 25 ಅಡಿ. ಸೂರ್ಯನ ಮೊದಲ ಕಿರಣ ತಾಗುವುದೇ ಈ ಗೋಪುರಕ್ಕೆ. ದೇವಾಲಯದಲ್ಲಿ 52 ಕಂಭಗಳಿದ್ದು ಪ್ರತಿ ಕಂಭದ ಕಲಾ ಕೆತ್ತನೆ ರಾಮಾಯಣ ಮಹಾಭಾರತದ ಕಥೆ ಹೇಳುತ್ತವೆ. ಶಿಲ್ಪಕಲೆಯ ಶ್ರೀಮಂತಿಕೆಗೆ ಇದೊಂದು ದೃಶ್ಯ ಕಾವ್ಯ. ಲೈಮ್ ಪುಡಿಯನ್ನೂ ಬಳಸದೇ ಕಟ್ಟಿದ ದೇವಾಲಯವಿದು. ಮಹಮದ್ ಘಜ್ನಿ ಇದನ್ನು ವಶಪಡಿಸಿಕೊಂಡ. ಚಿನ್ನದ ವಿಗ್ರಹವನ್ನು ಲೂಟಿ ಮಾಡಿದ. ಅಲ್ಲಾವುದ್ದೀನ್ ಖಿಲ್ಜಿ ಇಲ್ಲಿನ ಸೂರ್ಯವಿಗ್ರಹವನ್ನು ಸಂಪೂರ್ಣ ನಾಶಪಡಿಸಿದ. ಇತ್ತೀಚೆಗೆ ದೇವಸ್ಥಾನ ಪುನಃ ನವೀಕೃತಗೊಂಡಿದೆ.

## ಧನುರ್ಮಾಸ ಸಂಗೀತೋತ್ಸವಕ್ಕೆ ಚಾಲನೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನ ಶ್ರೀ ಲಾಲ್ ದಾಸ್ ಭಕ್ತ ಆಂಜನೇಯಸ್ವಾಮಿ ಭಜನಾ ಮಂಡಳಿಯ ವತಿಯಿಂದ ಬಳೇಪೇಟೆಯ ಓಟಿಸಿ ರಸ್ತೆಯಲ್ಲಿರುವ ಶ್ರೀ ಲಾಲ್ ದಾಸ್ ವೆಂಕಟೇಶ್ವರಸ್ವಾಮಿ ದೇವಸ್ಥಾನದಲ್ಲಿ ಏರ್ಪಡಿಸಿರುವ ಧನುರ್ಮಾಸ ಸಂಗೀತೋತ್ಸವ ಕಾರ್ಯಕ್ರಮವು ಡಿಸೆಂಬರ್ 16 ರಿಂದ ಜನವರಿ 14ರ ವರೆಗೆ ಒಂದು ತಿಂಗಳ ಕಾಲ ಪ್ರತಿದಿನ ಬೆಳಗ್ಗೆ 6-30ಕ್ಕೆ ನಾಡಿನ ಹೆಸರಾಂತ ಕಲಾವಿದರುಗಳಿಂದ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಿದ್ದು, ಸೋಮವಾರ ಕು|| ದೀಪ್ತಿ ಮೋಹನ್ ಇವರ ಸಂಗೀತದಿಂದ ಪ್ರಾರಂಭವಾಯಿತು.

ಇವರ ಸಂಗೀತ ಕಾರ್ಯಕ್ರಮಕ್ಕೆ ವಾದ್ಯ ಸಹಕಾರದಲ್ಲಿ ಪಿಟೀಲು ವಾದನದಲ್ಲಿ ಶ್ರೀ ಎಂ.ಎನ್. ಸತ್ಯನಾರಾಯಣ ಮತ್ತು ಮೃದಂಗ ವಾದನದಲ್ಲಿ ಶ್ರೀ ಶ್ರೀನಿವಾಸ್ ಅನಂತರಾಮಯ್ಯ ಸಾಥ್ ನೀಡಿದರು ಎಂದು ಕಾರ್ಯಕ್ರಮ ಸಂಚಾಲಕರಾದ ಖ್ಯಾತ ಮೃದಂಗ ವಾದಕರಾದ ಶ್ರೀ ಶ್ರೀನಿವಾಸ್ ಅನಂತರಾಮಯ್ಯ ತಿಳಿಸಿದ್ದಾರೆ.

## ಒಂದೂವರೆ ತಿಂಗಳ ಬಳಿಕ 'ಬಿಜಿಎಸ್' ಆಸ್ಪತ್ರೆಯಿಂದ ನಟ ದರ್ಶನ್ ಡಿಸ್ಚಾರ್ಜ್

• ಉದಯವಾಹಿನಿ, ಬೆಂಗಳೂರು

ಬಿಜಿಎಸ್ ಆಸ್ಪತ್ರೆಯಿಂದ ಸೋಮವಾರ ನಟ ದರ್ಶನ್ ಡಿಸ್ಚಾರ್ಜ್ ಆಗಿದ್ದಾರೆ. ಕಳೆದ ಒಂದುವರೆ ತಿಂಗಳಿನಿಂದ ನಟ ದರ್ಶನ್ ಬಿಜಿಎಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು. ಸರ್ಜರಿ ಮಾಡಿಸಿಕೊಳ್ಳದೆ ಆಸ್ಪತ್ರೆಯಿಂದ ದರ್ಶನ್ ಡಿಸ್ಚಾರ್ಜ್ ಆಗಿದ್ದಾರೆ. ಮಧ್ಯಂತರ ಜಾಮಿನು ಪಡೆದುಕೊಂಡು ನಟ ದರ್ಶನ್ ಆಸ್ಪತ್ರೆಯಲ್ಲಿ ಟ್ರೀಟ್‌ಮೆಂಟ್ ಪಡೆದುಕೊಂಡಿದ್ದಾರೆ. ಫಿಜಿಯೋಥೆರಫಿ ಮಾಡಿಸಿ ಬೇಲ್ ಸಿಗುತ್ತಿದ್ದಂತೆ ಇದೀಗ ದರ್ಶನ್ ಅವರು ಆಸ್ಪತ್ರೆಯಿಂದ ಡಿಸ್ಚಾರ್ಜ್ ಆಗಿದ್ದಾರೆ.

ಯಾವಾಗ ಬೇಕಾದರೂ ಸರ್ಜರಿ ಮಾಡಿಸಿಕೊಳ್ಳಬಹುದು ಎಂಬ ಅಭಿಪ್ರಾಯ ವ್ಯಕ್ತವಾದ ಹಿನ್ನೆಲೆಯಲ್ಲಿ, ಆಸ್ಪತ್ರೆಯಿಂದ ಡಿಸ್ಚಾರ್ಜ್ ಆಗಿ ಇಂದು ಮನೆಗೆ ತೆರಳುವ ಸಾಧ್ಯತೆ ಇದೆ ಎನ್ನಲಾಗಿದೆ. ವೈದ್ಯರ ಸಲಹೆ ಮೇರೆಗೆ ದರ್ಶನ ಡಿಸ್ಚಾರ್ಜ್ ಮಾಡಲಾಗಿದೆ.ನಟ ದರ್ಶನ್ ಅವರು ಬಿಜಿಎಸ್ ಆಸ್ಪತ್ರೆಯಿಂದ ಬಿಡುಗಡೆ ಯಾಗುತ್ತಾರೆ ಎನ್ನುವ ಸುದ್ದಿ ತಿಳಿದ ತಕ್ಷಣವೇ ರಾಜ್ಯದ ಬೇರೆ ಬೇರೆ ಭಾಗಗಳಿಂದ ನಟ ದರ್ಶನ್ ಅವರ ಅಭಿಮಾನಿಗಳು ಇದೀಗ ಅವರ ನಿವಾಸದ ಮುಂದೆ ಆಗಮಿಸುತ್ತಿದ್ದಾರೆ. ಬೆಂಗಳೂರಿನ ರಾಜರಾಜೇಶ್ವರಿ ನಗರದಲ್ಲಿರುವ ದರ್ಶನ್ ಮನೆಯ ಬಳಿ ರಾಜ್ಯದ ಬೇರೆ ಬೇರೆ ಭಾಗಗಳಿಂದ ಅಭಿಮಾನಿಗಳು ದರ್ಶನ್ ಮನೆ ಎದುರು ಜಮಾಯಿಸುತ್ತಿದ್ದಾರೆ.

## ಮುಂದಿನ 48 ಗಂಟೆಗಳಲ್ಲಿ ಬೆಂಗಳೂರು ಸೇರಿ, ಈ ಜಿಲ್ಲೆಗಳಲ್ಲಿ ಭಾರಿ ಮಳೆ

• ಉದಯವಾಹಿನಿ, ಬೆಂಗಳೂರು

ಕಳೆದ ಹಲವು ದಿನಗಳಿಂದ ಮಳೆರಾಯ ತಣ್ಣಗಾಗಿದ್ದ ಎನ್ನುವಷ್ಟರಲ್ಲಿ ಇದೀಗ ಮತ್ತೆ ವರ್ಣಾರ್ಭಟ ಆರಂಭವಾಗಲಿದ್ದು, ಮುಂದಿನ 48 ಗಂಟೆಗಳಲ್ಲಿ ಬೆಂಗಳೂರು ಸೇರಿದಂತೆ ರಾಜ್ಯದ 20ಕ್ಕೂ ಹೆಚ್ಚು ಜಿಲ್ಲೆಗಳಲ್ಲಿ ಭಾರಿ ಮಳೆ ಆಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಸದ್ಯಕ್ಕೆ ರಾಜ್ಯಾದ್ಯಂತ ಚಳಿಯ ವಾತಾವರಣವಿದೆ. ಆದರೆ ಬೆಂಗಳೂರು ಸೇರಿ ರಾಜ್ಯದ 20ಕ್ಕೂ ಅಧಿಕ ಜಿಲ್ಲೆಗಳಲ್ಲಿ ಡಿಸೆಂಬರ್ 18ರಿಂದ ಮಳೆಯಾಗಲಿದೆ. ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ, ಗದಗ, ಹಾವೇರಿ, ಕೊಪ್ಪಳ, ರಾಯಚೂರು, ಯಾದಗಿರಿ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ದಾವಣಗೆರೆ, ಹಾಸನ, ಕೊಡಗು, ಕೋಲಾರ, ಮಂಡ್ಯ, ಮೈಸೂರು, ರಾಮನಗರ, ಶಿವಮೊಗ್ಗ, ತುಮಕೂರು, ವಿಜಯನಗರದಲ್ಲಿ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮನ್ಸೂಚನೆ ನೀಡಿದೆ.

## ಮೊಬೈಲ್ ಅಂಗಡಿಯ ಶಟರ್ ಮುರಿದು, ಲಕ್ಷಾಂತರ ಮೌಲ್ಯದ ಮೊಬೈಲ್ ಕಳ್ಳತನ

• ಉದಯವಾಹಿನಿ, ಬೆಂಗಳೂರು

ಇತ್ತೀಚಿಗೆ ಬೆಂಗಳೂರಿನಲ್ಲಿ ಮೊಬೈಲ್ ಕಳ್ಳರ ಹಾವಳಿ ಹೆಚ್ಚಾಗುತ್ತಿದ್ದು, ಬೆಂಗಳೂರಿನ ಎಚ್‌ಬಿಆರ್ ಲೇಔಟ್ ಬಳಿ ಕಳ್ಳರಿಬ್ಬರು ಮೊಬೈಲ್ ಕದ್ದುಪರಾರಿಯಾಗಲು ಯತ್ನಿಸಿದಾಗ ಮಾಜಿ ಕಾರ್ಪೊರೇಟರ್ ಗಣೇಶ್ ರೆಡ್ಡಿ ಅವರು ಚೇಸ್ ಮಾಡಿ ಅವರ ಬೈಕ್‌ಗೆ ಗುದ್ದಿ ಬೀಳಿಸಿದ್ದ ಘಟನೆ ನಡೆದಿತ್ತು. ಇದೀಗ ತಡರಾತ್ರಿ ಕೂಡ ಬೆಂಗಳೂರಿನ ಶಿವಾಜಿನಗರದಲ್ಲಿ ಮೊಬೈಲ್ ಅಂಗಡಿ ಶಟರ್ ಮುರಿದು ಲಕ್ಷಾಂತರ ಮೌಲ್ಯದ ಮೊಬೈಲ್ ಕಳ್ಳತನ ಮಾಡಿದ್ದಾರೆ.

ಹೌದು ಬೆಂಗಳೂರಿನ ಶಿವಾಜಿನಗರದ ಬಳಿ ಇರು ವಿಶ್ವಾಸ್ ಕಮ್ಯುನಿಕೇಷನ್ ಎಂಬ ಮೊಬೈಲ್ ಅಂಗಡಿಯ ಶಟರ್ ಮುರಿದ ಬಳಿಕ ಮುಖಕ್ಕೆ ಮಾಸ್ಕ ಧರಿಸಿದ ಖದೀಮರು, ಸಿಸಿಟಿವಿ ಕ್ಯಾಮೆರಾದಲ್ಲಿ ತಮ್ಮ ಮುಖ ಕಾಣಬಾರದೆಂದು ಈ ರೀತಿ ಪ್ಲಾನ್ ಮಾಡಿದ್ದಾರೆ. ಈ ವೇಳೆ ಅವರು ಲಕ್ಷಾಂತರ ಮೌಲ್ಯದ ಮೊಬೈಲ್ ಗಳನ್ನು ಗೋಣಿಚೀಲದಲ್ಲಿ ತುಂಬಿಕೊಂಡು ಹೋಗಿರುವ ದೃಶ್ಯ ಸಿಸಿಟಿವಿ ಕ್ಯಾಮೆರದಲ್ಲಿ ಸೆರೆಯಾಗಿದೆ. ಹೌದು ಬೆಂಗಳೂರಿನಲ್ಲಿ ರಾತ್ರೋರಾತ್ರಿ ಮೊಬೈಲ್ ಕಳ್ಳತನ ಮಾಡಲಾಗಿದೆ. ರಾತ್ರೋರಾತ್ರಿ ಮೊಬೈಲ್ ಅಂಗಡಿ ಲೂಟಿ ಮಾಡಿದ್ದಾರೆ. ಶಟರ್ ಮುರಿದು, ಮುಖ ಕಾಣದಂತೆ ಮಾಸ್ಕ್ ಧರಿಸಿ ಕಳ್ಳರು ಒಳ ನುಗ್ಗಿದ್ದಾರೆ. ಈ ಘಟನೆ ಬೆಂಗಳೂರಿನ ಶಿವಾಜಿನಗರದಲ್ಲಿ ನಡೆದಿದೆ. ವಿಶ್ವಾಸ್ ಕಮ್ಯುನಿಕೇಷನ್ ಎಂಬ ಮೊಬೈಲ್ ಅಂಗಡಿಯಲ್ಲಿ ಕಳ್ಳತನ ನಡೆದಿದ್ದು, ಘಟನೆಗೆ ಸಂಬಂಧಿಸಿದಂತೆ ಶಿವಾಜಿನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಶಾಶ್ವತ ಅಂಗವಿಕಲತೆಯುಳ್ಳ ನೌಕರರಿಗೆ ಮಾತ್ರ ಸೌಲಭ್ಯ

## ವಿಕಲಚೇತನ ಸರ್ಕಾರಿ ನೌಕರರಿಗೆ ಸಂಚಾರಿ ಭತ್ಯೆ ಮಂಜೂರು ಮಾಡಿ ರಾಜ್ಯ ಸರ್ಕಾರ ಮಹತ್ವದ ಆದೇಶ

• ಉದಯವಾಹಿನಿ, ಬೆಂಗಳೂರು

ರಾಜ್ಯ ಸರ್ಕಾರವು ವಿಕಲಚೇತನ ಸರ್ಕಾರಿ ನೌಕರರಿಗೆ ಸಿಹಿಸುದ್ದಿ ನೀಡಿದ್ದು, 7ನೇ ವೇತನ ಆಯೋಗದ ವರದಿಯಂತೆ ಸಂಚಾರಿ ಭತ್ಯ ಮಂ ಜೂರು ಮಾಡಿ ರಾಜ್ಯ ಸರ್ಕಾರ ಮಹತ್ವದ ಆದೇಶ ಹೊರಡಿಸಿದೆ. ರಾಜ್ಯ ಸರ್ಕಾರದ ಆದೇಶದಲ್ಲಿ ಏನಿದೆ? ಈ ಮೊದಲು ಚಾಲ್ತಿಯಲ್ಲಿದ್ದ ರಾಜ್ಯ ಸರ್ಕಾರದ ನೀತಿಯಂತೆ, ಮೇಲೆ (1), (2)ರಲ್ಲಿ ಓದಲಾದ ದಿನಾಂಕ: 14.02.1979, ದಿನಾಂಕ: 17.07.1979ರ ಸರ್ಕಾರಿ ಆದೇಶಗಳಲ್ಲಿ ಅಂಧ ಮತ್ತು ಅಂಗವಿಕಲ ರಾಜ್ಯ ಸರ್ಕಾರಿ ನೌಕರರಿಗೆ ಆದೇಶದ ನಿಬಂಧನೆಗಳ ಪೂರೈಕೆಗೊಳಪಟ್ಟು ಪ್ರಯಾಣ ಭತ್ಯೆಯನ್ನು ಮಂಜೂರು ಮಾಡಿ ಆದೇಶಗಳನ್ನು ಹೊರಡಿಸಲಾಗಿತ್ತು.

ಸದರಿ ಸೌಲಭ್ಯವನ್ನು ನಿರ್ದಿಷ್ಟ ಬದಲಾವಣೆಗಳೊಂದಿಗೆ ಕಾಲದಿಂದ ಕಾಲಕ್ಕೆ ಮುಂದುವರೆಸಿಕೊಂಡು ಬರಲಾಗಿರುತ್ತದೆ. ಮುಂದುವರೆದು, 6ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸುಗಳ ಬೆಳಕಿನಲ್ಲಿ, ಮೇಲೆ (3)ರಲ್ಲಿ ಓದಲಾದ ದಿನಾಂಕ: 11.01.2019ರ ಸರ್ಕಾರಿ ಆದೇಶದಲ್ಲಿ ರಾಜ್ಯ ಸರ್ಕಾರದ ವಿಶೇಷ-ಚೇತನ ನೌಕರರುಗಳಿಗೆ ಸದರಿ ಆದೇಶದಲ್ಲಿನ ನಿಬಂಧನೆಗಳ ಪೂರೈಕೆಗೊಳಪಟ್ಟು ಪ್ರಯಾಣ ಭತ್ಯೆಯನ್ನು ಮಂ ಜೂರು ಮಾಡಲು ವಿಸತ ಆದೇಶಗಳನ್ನು ಹೊರಡಿಸಲಾಗಿರುತ್ತದೆ. ರಾಜ್ಯ ಸರ್ಕಾರದಿಂದ ರಚಿಸಲ್ಪಟ್ಟ 7ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸಿನಂತೆ ಮೇಲೆ (4)ರಲ್ಲಿ ಓದಲಾದ 23.08.2024ರ ಸರ್ಕಾರಿ ಆದೇಶದಲ್ಲಿ 2024ರ ಪರಿಷ್ಕೃತ ವೇತನ ಶ್ರೇಣಿಗಳನ್ನು 01.08.2024 ರಿಂದ ಜಾರಿಗೆ ಬರುವಂತೆ ಅನುಷ್ಠಾನಗೊಳಿಸಲಾಗಿರುತ್ತದೆ. **ಸರ್ಕಾರಿ ಆದೇಶ ಸಂಖ್ಯೆ:** 52 ಎಸ್‌ಆರ್‌ಪಿ 2024 ಬೆಂಗಳೂರು, ದಿನಾಂಕ 16ನೇ ಡಿಸೆಂಬರ್ 2024 ರಾಜ್ಯ ಸರ್ಕಾರದ ವಿಶೇಷ-ಚೇತನ ನೌಕರರುಗಳಿಗೆ 2024ರ ಪರಿಷ್ಕೃತ ವೇತನ ಶ್ರೇಣಿಗಳಲ್ಲಿ ಅವರ ಮೂಲ ವೇತನದ 6% ದರದಲ್ಲಿ ಯಾವುದೇ ಗರಿಷ್ಠ ಮಿತಿ ಇಲ್ಲದೇ 1ನೇ ಡಿಸೆಂಬರ್ 2024 ರಿಂದ ಜಾರಿಗೆ ಬರುವಂತೆ ಮಾಹೆಯಾನ ವಿಶೇಷ ಪ್ರಯಾಣ ಭತ್ಯೆಯನ್ನು ಮಂಜೂರು ಮಾಡಲು ಸರ್ಕಾರವು ಹರ್ಷಿಸುತ್ತದೆ. 2. ಈ ವಿಶೇಷ ಭತ್ಯೆಯ ಮಂಜೂರಾತಿಯ ಉದ್ದೇಶಕ್ಕಾಗಿ ಅಂಗವಿಕಲತೆ ಎಂದರೆ ಅದು ವಿಶೇಷ ಚೇತನರ ಹಕ್ಕುಗಳ ಅಧಿನಿಯಮ, 2016 ರಲ್ಲಿರುವಂತೆ ಇರತಕ್ಕದ್ದು ಮತ್ತು ಅದರಂತೆ ಅರ್ಥೈಸಿಕೊಳ್ಳತಕ್ಕದ್ದು. ಅದರಂತೆ, ಅಂಧ, ಚಲನವಲನ ವೈಕಲ್ಯತೆಯುಳ್ಳ ಹಾಗೂ ವಾಕ್ ಮತ್ತು ಶ್ರವಣ ವೈಕಲ್ಯತೆಯುಳ್ಳ ನೌಕರರನ್ನೂ ಒಳಗೊಂಡಂತೆ ರಾಜ್ಯ ಸರ್ಕಾರದ ಎಲ್ಲಾ ವಿಶೇಷ-ಚೇತನ ನೌಕರರುಗಳು ದಿನಾಂಕ: 01.12.2024 ರಿಂದ ಜಾರಿಗೆ ಬರುವಂತೆ ಈ ಸೌಲಭ್ಯವನ್ನು ಪಡೆಯಲು ಅರ್ಹರಿರುತ್ತಾರೆ. 3. ಈ ಭತ್ಯೆಯನ್ನು ಮಂಜೂರು ಮಾಡಲು ಅನುಸರಿಸಬೇಕಾದ ಕಾರ್ಯವಿಧಾನ ಮತ್ತು ನಿಬಂ ಧನೆಗಳು ಈ ಕೆಳಕಂಡಂತಿರತಕ್ಕದ್ದು. 1. 40% ರಷ್ಟು ಕನಿಷ್ಠ ಶಾಶ್ವತ ಅಂಗವಿಕಲತೆ ಹೊಂದಿರುವ ನೌಕರರು ಈ ಸೌಲಭ್ಯವನ್ನು ಪಡೆಯಲು ಅರ್ಹರಿರುತ್ತಾರೆ. ವಿಶೇಷ ಚೇತನರ ಹಕ್ಕುಗಳ ಅಧಿನಿಯಮ, 2016ರ ಅವಕಾಶಗಳನ್ವಯ ನೇಮಕಗೊಂಡ ವಿಶೇಷ-ಚೇತನ ನೌಕರರುಗಳ ಪ್ರಕರಣಗಳಲ್ಲಿ ವೈದ್ಯಕೀಯ ಪ್ರಮಾಣ ಪತ್ರವನ್ನು ಸಲ್ಲಿಸುವಂತೆ ಒತ್ತಾಯಿಸತಕ್ಕದ್ದಲ್ಲ ಮತ್ತು ಈ ಸೌಲಭ್ಯವನ್ನು ಈ ಮೇಲೆ ತಿಳಿಸಿರುವ ಕನಿಷ್ಠ ಅಂಗವಿಕಲತೆಯ ಮಿತಿಗೊಳಪಟ್ಟು ಮಂಜೂರು ಮಾಡತಕ್ಕದ್ದು. ಯಾವುದೇ ವೈಜ್ಞಾನಿಕ ಉಪಕರಣಗಳ, ಸಾಧನಗಳ ಬಳಕೆಯಿಂದ ಸರಿಪಡಿಸಲಾಗದಂತಹ ಶಾಶ್ವತ ಅಂಗವಿಕಲತೆಯುಳ್ಳ ನೌಕರರಿಗೆ ಮಾತ್ರ ಈ ಸೌಲಭ್ಯವು ಸೀಮಿತವಾಗಿರುತ್ತದೆ. ವೈದ್ಯಕೀಯ ಉಪಕರಣಗಳ ಮುಖಾಂತರ ಸರಿಪಡಿಸಬಹುದಾದ ದೃಷ್ಟಿ ಮತ್ತು ಶ್ರವಣ ದೋಷ ಇರುವ ನೌಕರರುಗಳಿಗೆ ಈ ಸೌಲಭ್ಯವನ್ನು ವಿಸ್ತರಿಸಲು ಬರುವುದಿಲ್ಲ.

**ಸೌಲಭ್ಯವನ್ನು ವಿಸ್ತರಿಸಲು ಬರುವುದಿಲ್ಲ**



### ಚಾಲ್ತಿಯಲ್ಲಿರುವ ಪದ್ಧತಿಗೆ ಕೆಲವು ಬದಲಾವಣೆ

**ರಾಜ್ಯ ಸರ್ಕಾರದ ವಿಶೇಷ-ಚೇತನ ನೌಕರರುಗಳಿಗೆ ಪ್ರಯಾಣ ಭತ್ಯೆಯ ಮಂಜೂರಾತಿ ಕುರಿತಂತೆ ಪ್ರಸ್ತುತ ಚಾಲ್ತಿಯಲ್ಲಿರುವ ಪದ್ಧತಿಗೆ ಕೆಲವು ಬದಲಾವಣೆಗಳನ್ನು ಮಾಡಲು 7ನೇ ರಾಜ್ಯ ವೇತನ ಆಯೋಗವು ಶಿಫಾರಸ್ಸು ಮಾಡಿರುತ್ತದೆ ಮತ್ತು ವಿಶೇಷ-ಚೇತನ ನೌಕರರುಗಳಿಗೆ ಪ್ರಸ್ತುತ ಚಾಲ್ತಿಯಲ್ಲಿರುವ ಮೂಲ ವೇತನದ 6% ರಷ್ಟು ಪ್ರಯಾಣ ಭತ್ಯೆಯ ಸೌಲಭ್ಯವನ್ನು ಮುಂದುವರೆಸಲು ಸಹ ಆಯೋಗವು ಶಿಫಾರಸ್ಸು ಮಾಡಿರುತ್ತದೆ. ರಾಜ್ಯ ಸರ್ಕಾರದ ವಿಶೇಷ-ಚೇತನ ನೌಕರರುಗಳಿಗೆ ಪ್ರಯಾಣ ಭತ್ಯೆ ಸೌಲಭ್ಯ ಮಂಜೂರು ಮಾಡುವುದನ್ನು ಕ್ರಮಬದ್ಧಗೊಳಿಸುವ 7ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸುಗಳನ್ನು ರಾಜ್ಯ ಸರ್ಕಾರವು ಪರಿಗಣಿಸಿರುತ್ತದೆ. ಅದರಂತೆ. ಈ ಕೆಳಕಂಡ ಆದೇಶಗಳನ್ನು ಹೊರಡಿಸಿದೆ.**

## ಕರ್ನಾಟಕ ರಾಜ್ಯ ವಕ್ಫ್‌ಮಂಡಳಿಯ ಅಧ್ಯಕ್ಷರಿಂದಲೇ ಆಸ್ತಿ ಕಬಳಿಕೆ

• ಉದಯವಾಹಿನಿ, ಬೆಂಗಳೂರು

ರಾಜ್ಯಾದ್ಯಂತೆ ವಕ್ಫ್ ಬೋರ್ಡ್, ವಕ್ಫ್ ಆಸ್ತಿ ಕಬಳಿಕೆ ವಿವಾದ ಜೋರಾಗಿ ಸದ್ದು ಮಾಡುತ್ತಿರುವ ಬೆನ್ನಲ್ಲೇ ವಕ್ಫ್ ಮಂಡಳಿಯ ಅಧ್ಯಕ್ಷರ ವಿರುದ್ಧವೂ ಆರೋಪ ಕೇಳಿಬಂದಿದೆ.ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ತಾಲ್ಲೂಕು, ಕಸಬಾ ಹೋಬಳಿ ಅಗಸನಕಲ್ಲು ಗ್ರಾಮದ ಸರ್ವೆ ನಂಬರ್ 11 ರಲ್ಲಿ ಹಿಂದಿನ ವಿಶೇಷ ಜಿಲ್ಲಾಧಿಕಾರಿಗಳು 06 ಎಕರೆ ಜಮೀನನ್ನು ಮುಸ್ಲಿಂ ಜನಾಂಗದ ಖಬರಸ್ಥಾನಕ್ಕೆಂದು ಮಂಜೂರು ಮಾಡಿದ ಜಾಗ ಅಕ್ರಮವಾಗಿ ಕಬಳಿಕೆ ಮಾಡಿದ್ದಾರೆ ಎಂದು ಆರೋಪ ಕೇಳಿಬಂದಿದೆ.

ಮುಸ್ಲಿಂ ಸಮುದಾಯದ ಸ್ಮಶಾನಕ್ಕೆಂದು ಕಾನೂನು ರೀತ್ಯಾ ಸರ್ಕಾರಿ ಅಧಿಸೂಚನೆಯಂತೆ ಮಂಜೂರಾಗಿರುವ ಸುಮಾರು 10 ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ಸ್ವತ್ತನ್ನು ಅತ್ಯಂತ ಜವಾಬ್ದಾರಿಯುತ ಸ್ಥಾನದಲ್ಲಿರುವ ವಕ್ಫ್ ಮಂಡಳಿಯ ಅಧ್ಯಕ್ಷರೇ ಕಬಳಿಸಿರುವುದು ನಿಜಕ್ಕೂ ವಿಪರ್ಯಾಸವಾಗಿರುತ್ತದೆ. ಬೇಲಿಯೇ ಎದ್ದು ಹೊಲವನ್ನು ಮೇಯ್ದಂತೆ ಎಂಬ ಗಾದೆಗೆ ಇದು ಪ್ರತ್ಯಕ್ಷ ಸಾಕ್ಷಿ Central Waqf Board Act, 1923 ರಂತೆ ಮುಸಲ್ಮಾನರ ಖಬರಸ್ಥಾನ, ಮಸೀದಿ ಮತ್ತು ದರ್ಗಾಗಳು ವಕ್ಫ್ ಮಂಡಳಿಯ ಆಸ್ತಿ ಎಂದು ಪರಿಗಣಿಸಲ್ಪಟ್ಟಿರುತ್ತದೆ. ಹಾಗಿದ್ದಾಗ್ಯೂ ಸಹ ಕರ್ನಾಟಕ ರಾಜ್ಯ ವಕ್ಫ್ ಮಂಡಳಿಗೆ ಸೇರಿದ ಅಮೂಲ್ಯ ಆಸ್ತಿಯನ್ನು ಅದೇ ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯ ಅಧ್ಯಕ್ಷರಾಗಿರುವಅನ್ವರ್ ಬಾಷಾ ರವರು ಕಾನೂನಿನ ಎಲ್ಲಾ ನಿಯಮಗಳನ್ನು ಗಾಳಿಗೆ ತೂರಿ ಕಬಳಿಸಿ, ಈ ಸ್ವತ್ತಿನಲ್ಲಿ ತಮ್ಮದೇ ಮಾಲೀಕತ್ವದ ಬೃಹತ್ತಾದ ಖಾಸಗಿ ಶಾಲಾ ಕಟ್ಟಡವನ್ನು ಮತ್ತು ತಮ್ಮ ವಾಸಕ್ಕಾಗಿ ಬೃಹತ್ ಬಂಗಲೆಯನ್ನು ನಿರ್ಮಿಸಿರುತ್ತಾರೆ. ಇವರ ಈ ಭೂ ಕಬಳಿಕೆ ಕಾರ್ಯಕ್ಕೆ ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯ ಅಧಿಕಾರಿಗಳೂ ಸಹ ಎಲ್ಲಾ ರೀತಿಯ ಸಹಕಾರ ನೀಡಿರುವುದು ಅತ್ಯಂತ ಸ್ಪಷ್ಟವಾಗಿರುತ್ತದೆ.


ಉದಯವಾಹಿನಿ ಚಿತ್ರ

**ಸದರಿ ಚಿತ್ರದುರ್ಗ ನಗರದ ಅಗಸನಕಲ್ಲು ಗ್ರಾಮದ ಸರ್ವೆ ನಂಬರ್ 11 ಅನ್ನು ಕಾನೂನು ಬಾಹಿರವಾಗಿ ಹೊಸ ಸರ್ವೆ ನಂಬರ್ 25 ಎಂದು ಪೋಡು ದುರಸ್ತಿ ಮಾಡಿಸಿರುವ ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯ ಅಧ್ಯಕ್ಷರಾದ . ಅನ್ವರ್ ಬಾಷಾ ರವರು ಸಂಪೂರ್ಣ ಸ್ವತ್ತನ್ನು ಅತಿಕ್ರಮಿಸಿಕೊಂಡು ತಮ್ಮ ಮಾಲೀಕತ್ವದ ಬೃಹತ್ ಖಾಸಗಿ ಶಾಲಾ ಕಟ್ಟಡವನ್ನು ಮತ್ತು ತಮ್ಮ ವಾಸಕ್ಕಾಗಿ ಬೃಹತ್ ಬಂಗಲೆಯನ್ನು ನಿರ್ಮಿಸಿದ್ದಾರೆ**

**-ಎನ್.ಆರ್. ರಮೇಶ್**
**ಮಾಜಿ ನಾಯಕರು**

## ನಮ್ಮ ಊರಿಗೆ ನಮ್ಮ ಶಾಸಕರು ಕಾರ್ಯಕ್ರಮ ಪ್ರದೀಪ್ ಈಶ್ವರ್‌ಗೆ ಶುಭ ಹಾರೈಸಿದ ಸಿಎಂ

• ಉದಯವಾಹಿನಿ, ಬೆಂಗಳೂರು

ನಮ್ಮ ಊರಿಗೆ ನಮ್ಮ ಶಾಸಕರು ಕಾರ್ಯಕ್ರಮದ ಯಶಸ್ಸಿಗಾಗಿ ಶಾಸಕರಾದ ಪ್ರದೀಪ್ ಈಶ್ವರ್ ಅವರನ್ನು ಸಿಎಂ ಸಿದ್ದರಾಮಯ್ಯ ಬೆನ್ನು ತಟ್ಟಿ ಶುಭ ಹಾರೈಸಿದ್ದಾರೆ. ಈ ಕುರಿತು ಟ್ವಿಟರ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಸಿಎಂ ಸಿದ್ದರಾಮಯ್ಯ, ತಾಲ್ಲೂಕು ಮಟ್ಟದ ಅಧಿಕಾರಿಗಳ ತಂಡಕಟ್ಟಿಕೊಂಡು, ಗ್ರಾಮಗಳಿಗೆ ತೆರಳಿ ಜನರ ಅಹವಾಲುಗಳನ್ನು ಆಲಿಸಿ, ಸ್ಥಳದಲ್ಲೇ, ಕಾಲಮಿತಿಯಲ್ಲಿ ಅದನ್ನು ಪರಿಹರಿಸುವ ಕಾರ್ಯ ಕೈಗೆತ್ತಿಕೊಂಡಿರುವ ಶಾಸಕ ಪ್ರದೀಪ್ ಈಶ್ವರ್ ಅವರ ವಿನೂತನ ಪ್ರಯತ್ನಕ್ಕೆ ಬೆನ್ನು ತಟ್ಟಿ ಶುಭ ಹಾರೈಸಿದೆ.

ಇಂತಹ ಜನಪರವಾದ ಕಾರ್ಯಗಳಿಗೆ ನನ್ನ, ನಮ್ಮ ಸರ್ಕಾರದ ಬೆಂಬಲ ಸದಾಕಾಲ ಇರಲಿದೆ ಎಂಬ ವಿಶ್ವಾಸವನ್ನು ಅವರಲ್ಲಿ ತುಂಬಿದ್ದೇನೆ ಎಂದರು. ನಮ್ಮ ಊರಿಗೆ ನಮ್ಮ ಶಾಸಕರು ಕಾರ್ಯಕ್ರಮದ ಯಶಸ್ಸಿಗಾಗಿ ಶಾಸಕರಾದ ಪ್ರದೀಪ್ ಈಶ್ವರ್ ಅವರ ಹೆಗಲಿಗೆ ಹೆಗಲಾಗಿ ದುಡಿಯುತ್ತಿರುವ ಚಿಕ್ಕಬಳ್ಳಾಪುರ ತಹಶೀಲ್ದಾರ್ ಅನಿಲ್, ತಾಲ್ಲೂಕಿನ ಕಾರ್ಯನಿರ್ವಾಹಕ ಅಧಿಕಾರಿ ಮಂಜುನಾಥ್, ಮಂಚೇನಹಳ್ಳಿ ತಹಶೀಲ್ದಾರ್ ದೀಪ್ತಿ ಹಾಗೂ ಕಾರ್ಯನಿರ್ವಾಹಕ ಅಧಿಕಾರಿ ಹೊನ್ನಯ್ಯ ಅವರ ಶ್ರಮ ಕೂಡ ಶ್ಲಾಘನೀಯ.

ಇದುವರೆಗೆ ಸುಮಾರು 50 ಹಳ್ಳಿಗಳಿಗೆ ತೆರಳಿ ರಸ್ತೆ, ಚರಂಡಿ, ಬಸ್ ವ್ಯವಸ್ಥೆ, ವಿದ್ಯುತ್ ಸಂಪರ್ಕ, ಪಿಂಚಣಿ, ನಿವೇಶನ ಹೀಗೆ ಸಾರ್ವಜನಿಕರ ನಿತ್ಯ ಬದುಕಿಗೆ ತೊಡಕಾಗಿದ್ದ ಹಲವು ಸಮಸ್ಯೆಗಳನ್ನು ಆಲಿಸಿ, ಪರಿಹರಿಸಿದ್ದಾರೆ. ಈ ಕಾರ್ಯಕ್ರಮ ಇನ್ನಷ್ಟು ಜನರನ್ನು ತಲುಪುವ ಮೂಲಕ ಜನರ ಜೀವನಮಟ್ಟ ಸುಧಾರಿಸಲು ನೆರವಾಗಲಿ ಎಂದು ಆಶಿಸುತ್ತೇನೆ ಎಂದು ಹೇಳಿದ್ದಾರೆ.


ಉದಯವಾಹಿನಿ ಚಿತ್ರ

# ಸಿಸೇರಿಯನ್ ಹೆರಿಗೆಗಳಿಗೆ ಕಡಿವಾಣ ಹಾಕಲು ನೂತನ ಕಾರ್ಯಕ್ರಮ ಜಾರಿ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ 2023-24 ರಿಂದ ಇಲ್ಲಿಯವರೆಗೆ ಭ್ರೂಣಹತ್ಯೆ ಸಂಬಂಧಿಸಿದಂತೆ 8 ಪ್ರಕರಣ ದಾಖಲಿಸಿ 46 ಜನರನ್ನು ಬಂಧಿಸಲಾಗಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಇದೇ ವೇಳೆ ಸದನಕ್ಕೆ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಮಾಹಿತಿ ನೀಡಿದರು.ರಾಜ್ಯದಲ್ಲಿ ಭ್ರೂಣ ಹತ್ಯೆ ತಡೆಯಲು ಸರ್ಕಾರವು ಪಿ.ಸಿ.ಪಿ.ಎನ್.ಡಿ.ಟಿ. ಕಾಯ್ದೆಯಡಿ ಬರುವ ಎಲ್ಲಾ ಶಾಸನಬದ್ಧ ಸಮಿತಿಗಳನ್ನು ರಾಜ್ಯ ಮತ್ತು ಜಿಲ್ಲೆಗಳಲ್ಲಿ ರಚನೆ ಮಾಡಲಾಗಿದೆ. 2018 ರಿಂದ ರಾಜ್ಯದಲ್ಲಿ 'ಬಾಲಿಕಾ' ಆನ್ಲೈನ್ ಸಾಫ್ಟರ್ ಮುಖಾಂತರ ಎಲ್ಲಾ ಸ್ಕ್ಯಾನಿಂಗ್ ಸೆಂಟರ್ಗಳನ್ನು ಕಡ್ಡಾಯವಾಗಿ ನೋಂದಣಿ ಮತ್ತು ನವೀಕರಣ ನಡೆಸಲಾಗುತ್ತಿದೆ. ರಾಜ್ಯ ಮಟ್ಟದಲ್ಲಿ ಶೇ.100 ರಷ್ಟು ಗರ್ಭಿಣಿಯರ ನೊಂದಣಿ ಪ್ರಕ್ರಿಯೆಯು ಚಾಲ್ತಿಯಲ್ಲಿದ್ದು, ಗ್ರಾಮ ಮಟ್ಟದಲ್ಲಿ ಜನನ ಸಮಯದ ಲಿಂಗಾನುಪಾತದ ದತ್ತಾಂಶಗಳನ್ನು ಮಾಹಿತಿ ತಂತ್ರಜ್ಞಾನದ ಮುಖಾಂತರ ಮೇಲ್ವಿಚಾರಣೆ ಮಾಡಲು ಕಲ್ಪಿಸಲಾಗುತ್ತಿದೆ ಎಂದರು.

ರಾಜ್ಯದಲ್ಲಿ ಇದುವರೆಗೂ ಪಿಸಿಪಿಎನ್‌ಡಿಟಿ ಕಾಯ್ದೆಯನ್ನು ಉಲ್ಲಂಘಿಸಿರುವ ಸ್ಕ್ಯಾನಿಂಗ್ ಸೆಂಟರ್, ಮಾಲೀಕರು, ವೈದ್ಯರ ವಿರುದ್ಧ ಒಟ್ಟು 136 ಪ್ರಕರಣಗಳನ್ನು ನ್ಯಾಯಾಲಯದಲ್ಲಿ ದಾವೆ ಹೂಡಲಾಗಿದ್ದು, 74 ಪ್ರಕರಣಗಳು ದಂಡವಿಧಿಸಿ ಖುಲಾಸೆಗೊಂಡಿದ್ದು,ಪ್ರಕರಣಗಳು ನ್ಯಾಯಾಲಯದಲ್ಲಿ ವಿವಿಧ ಹಂತದಲ್ಲಿ ಬಾಕಿಯಿರುತ್ತದೆ ಎಂದು ತಿಳಿಸಿದರು. ಹೆಣ್ಣು ಭ್ರೂಣ ಪತ್ತೆ ಮತ್ತು ಹತ್ಯೆ ಮಾಡುವಂತಹ ಸ್ಕ್ಯಾನಿಂಗ್ ಸೆಂಟರ್, ಆಸ್ಪತ್ರೆ, ವೈದ್ಯರು, ದಲ್ಲಾಳಿಗಳು, ಗರ್ಭಿಣಿಯರ ಸಂಬಂಧಿಕರ ವಿರುದ್ಧ ಮಾಹಿತಿ ನೀಡಿ, ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸಲು ಸಹಕರಿಸುವ ಮಾಹಿತಿದಾರರಿಗೆ ಕರ್ನಾಟಕ ಸರ್ಕಾರದಿಂದ ನೀಡುತ್ತಿದ್ದ ಬಹುಮಾನವನ್ನು ರೂ.50 ಸಾವಿರದಿಂದ ರೂ.1 ಲಕ್ಷದವರೆಗೆ ಹೆಚ್ಚಿಸಲಾಗಿದೆ ಎಂದರು.

ಪಿಸಿಪಿಎನ್‌ಡಿಟಿ ಕಾಯ್ದೆಯ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಆಯುಕ್ತರ ಅಧ್ಯಕ್ಷತೆಯಲ್ಲಿ ರಾಜ್ಯ ಕಾರ್ಯಪಡೆಯನ್ನು ರಚಿಸಲಾಗಿದ್ದು, ರಾಜ್ಯ ಮಟ್ಟದಿಂದ ಬೆಂಗಳೂರು ಗ್ರಾಮಾಂತರ, ಬೆಳಗಾವಿ, ಮಂಡ್ಯ, ಕೋಲಾರ ಜಿಲ್ಲೆಗಳಲ್ಲಿ ಗುಪ್ತ ಕಾರ್ಯಾಚರಣೆ ನಡೆಸಲಾಗಿದೆ ಎಂದರು.


ಉದಯವಾಹಿನಿ ಚಿತ್ರ

**ರಾಜ್ಯದಲ್ಲಿ ಭ್ರೂಣ ಹತ್ಯೆ ವಿರುದ್ಧ ಭರ್ಜರಿ ಕಾರ್ಯಾಚರಣೆ**

### ರೋಗ್ಯ ದೃಷ್ಟಿಯಿಂದ ಇದಕ್ಕೆ ಕಡಿವಾಣ ಹಾಕುವುದು ಅತ್ಯಗತ್ಯ

**ಹೆಣ್ಣು ಭ್ರೂಣ ಹತ್ಯೆ ಮಾಡದಂತೆ ರಾಜ್ಯದಂತ ಜನ ಜಾಗೃತಿ, ಅರಿವು ಮೂಡಿಸುವಂತಹ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ ಸಿಸೇರಿಯನ್ ಗಳಿಂದ ಹೆಚ್ಚು ಆದಾಯ ಬರುತ್ತದೆ, ಸುಲಭವಾಗಿ ಸಿಸೇರಿಯನ್ ಮಾಡಬಹುದು ಎಂಬ ಕಾರಣಕ್ಕೆ ಖಾಸಗಿ ಆಸ್ಪತ್ರೆಗಳು ಸಿಸೇರಿಯನ್ ಹೆರಿಗೆಗಳನ್ನೇ ಹೆಚ್ಚು ಮಾಡುತ್ತಿದ್ದಾರೆ, ತಾಯಿ ಮತ್ತು ಮಗುವಿನ ಆರೋಗ್ಯ ದೃಷ್ಟಿಯಿಂದ ಇದಕ್ಕೆ ಕಡಿವಾಣ ಹಾಕುವುದು ಅತ್ಯಗತ್ಯವಾಗಿದೆ. ಈ ನಿಟ್ಟಿನಲ್ಲಿ ಮಹಿಳೆಯರನ್ನ ಸಹಜ ಹೆರಿಗೆ ಮಾಡಿಸಿಕೊಳ್ಳಲು ಮಾನಸಿಕವಾಗಿ ಸಜ್ಜು ಗೊಳಿಸಬೇಕಿದೆ. ಇದಕ್ಕಾಗಿ ನೂತನ ಕಾರ್ಯಕ್ರಮ ಜಾರಿಗೊಳಿಸುತ್ತಿರುವುದಾಗಿ ಸದನಕ್ಕೆ ತಿಳಿಸಿದರು.**

## ಸಾಲುಮರದ ತಿಮ್ಮಕ್ಕಗೆ ತೀವ್ರ ಅನಾರೋಗ್ಯ ತುರ್ತು ನಿಗಾ ಘಟಕದಲ್ಲಿ ಚಿಕಿತ್ಸೆ

• ಉದಯವಾಹಿನಿ, ಬೆಂಗಳೂರು

ವೃಕ್ಷಮಾತೆ ಎಂದೇ ಹೆಸರಾಗಿರುವಂತ ಸಾಲು ಮರದ ತಿಮ್ಮಕ್ಕ ಅವರು ತೀವ್ರ ಅನಾರೋಗ್ಯಕ್ಕೆ ಒಳಗಾಗಿದ್ದಾರೆ. ಅವರ ಆರೋಗ್ಯದಲ್ಲಿ ಏರುಪೇರು ಆದ ಹಿನ್ನಲೆಯಲ್ಲಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಅವರಿಗೆ ವೈದ್ಯರು ತುರ್ತು ನಿಗಾ ಘಟಕದಲ್ಲಿ ಚಿಕಿತ್ಸೆ ನೀಡುತ್ತಿದ್ದಾರೆ.

ಬೆಂಗಳೂರಿನ ಜಯನಗರದಲ್ಲಿರುವಂತ ಅಪೋಲೋ ಆಸ್ಪತ್ರೆಗೆ ವೃಕ್ಷಮಾತೆಯೆಂದೇ ಹೆಸರಾಗಿರುವಂತ ಸಾಲುಮರದ ತಿಮ್ಮಕ್ಕ ಅವರನ್ನು ತೀವ್ರ ಅನಾರೋಗ್ಯದ ಕಾರಣ ದಾಖಲಿಸಲಾಗಿದೆ. ಕಳೆದ 17 ದಿನಗಳಿಂದ ಆಸ್ಪತ್ರೆಯಲ್ಲಿ ಸಾಲುಮರದ ತಿಮ್ಮಕ್ಕ ಅವರು ಚಿಕಿತ್ಸೆ ಪಡೆಯುತಿದ್ದಾರೆ. ಇದೀಗ ಅವರು ತೀವ್ರ ಅನಾರೋಗ್ಯಕ್ಕೆ ಒಳಗಾಗಿದ್ದಾರೆ ಎಂಬುದಾಗಿ ತಿಳಿದು ಬಂದಿದೆ. ಉಸಿರಾಟದ ಸಮಸ್ಯೆಯಿಂದ ಬಳಲುತ್ತಿರುವಂತ ತಿಮ್ಮಕ್ಕ ಅವರಿಗೆ ವೈದ್ಯರು ಐಸಿಯುನಲ್ಲಿ ಚಿಕಿತ್ಸೆ ಮುಂದುವರೆಸಿದ್ದಾರೆ.

ಸಾಲುಮರದ ತಿಮ್ಮಕ್ಕ ಅವರಿಗೆ 113 ವರ್ಷಗಳು, ವೃಕ್ಷಮಾತೆ ಸಾಲುಮರದ ತಿಮ್ಮಕ್ಕ ಬಹು ಬೇಗ ಗುಣಮುಖರಾಗಿ ಬರಲಿ ಅಂತ ಅವರ ಹಿತೈಷಿಗಳು, ಅಭಿಮಾನಿಗಳು, ಕುಟುಂಬಸ್ಥರು ಕೋರಿದ್ದಾರೆ.

## ದಾವಣಗೆರೆಯಲ್ಲಿ ರ‍್ಯಾಲಿ ನಡೆಸಲು ರಾಜ್ಯಾಧ್ಯಕ್ಷ ವಿಜಯೇಂದ್ರ ವಿರೋಧ

• ಉದಯವಾಹಿನಿ, ಬೆಂಗಳೂರು

ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ನೇತೃತ್ವದ ಪಕ್ಷದ ನಾಯಕರು ಮುಂದಿನ ವರ್ಷ ಫೆಬ್ರವರಿಯಲ್ಲಿ ದಾವಣಗೆರೆಯಲ್ಲಿ ಬೃಹತ್ ರ‍್ಯಾಲಿ ನಡೆಸಲು ಯೋಜಿಸಿದ್ದಾರೆ ಎಂದು ಕರ್ನಾಟಕ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದ್ದಾರೆ.

ನಮ್ಮ ಪಕ್ಷದ ಕೆಲವು ನಾಯಕರು ದಾವಣಗೆರೆಯಲ್ಲಿ ರ‍್ಯಾಲಿ ಆಯೋಜಿಸಲು ಯೋಜಿಸುತ್ತಿದ್ದಾರೆ ಎಂಬ ಮಾಧ್ಯಮ ವರದಿಗಳನ್ನು ನಾನು ನೋಡಿದ್ದೇನೆ. ಪಕ್ಷದಲ್ಲಿ ಯಾರಿಂದಲೂ ಇಂತಹ ಯಾವುದೇ ನಡೆಯನ್ನು ನಾನು ಒಪ್ಪುವುದಿಲ್ಲ. ಈಗಾಗಲೇ ಪಕ್ಷದ ಕಾರ್ಯಕರ್ತರು ಗೊಂದಲದಲ್ಲಿದ್ದಾರೆ ಮತ್ತು ನಮ್ಮ ಯಾವುದೇ ನಡೆಗಳು ಪರಿಸ್ಥಿತಿಯನ್ನು ಮತ್ತಷ್ಟು ಉಲ್ಬಣಗೊಳಿಸಬಾರದು. ಆದ್ದರಿಂದ, ಅಂತಹ ಪ್ರಯತ್ನವನ್ನು ಮಾಡುವವರು ತಮ್ಮ ಕಾರ್ಯಸೂಚಿಯನ್ನು ಮುಂದುವರಿಸದಂತೆ ನಾನು ಮನವಿ ಮಾಡುತ್ತೇನೆ ಎಂದು ವಿಜಯೇಂದ್ರ ಹೇಳಿದರು.

ಅವರು ಇಲ್ಲಿ ಸುದ್ದಿಗಾರರೊಂದಿಗೆ ಮಾತನಾಡುತ್ತಿದ್ದರು. ಅಂತಹ ಯಾವುದೇ ರ‍್ಯಾಲಿ ಮತ್ತು ಸಮಾವೇಶವನ್ನು ನಡೆಸಲು ಯೋಜಿಸುತ್ತಿರುವವರಿಗೆ ಪಕ್ಷದ ಔಪಚಾರಿಕ ಅನುಮೋದನೆಯಿಲ್ಲದೆ ಮುಂದುವರಿಯದಂತೆ ನಾನು ಮನವಿ ಮಾಡುತ್ತಿದ್ದೇನೆ ಎಂದು ಅವರು ಹೇಳಿದರು.

ರಾಜ್ಯದಲ್ಲಿ ಪಕ್ಷದ ಕಾರ್ಯಕ್ರಮಗಳನ್ನು ರೂಪಿಸಲು ಶೀಘ್ರದಲ್ಲೇ ಹಿರಿಯ ನಾಯಕರ ಸಭೆ ಕರೆಯುವುದಾಗಿ ವಿಜಯೇಂದ್ರ ಹೇಳಿದರು.


ಉದಯವಾಹಿನಿ ಚಿತ್ರ

**ಬಿಜೆಪಿ ರಾಜ್ಯ ಘಟಕವು ಒಂದು ಕುಟುಂಬದಂತೆ ಮತ್ತು ಯಾರಾದರೂ ಯೋಜಿಸುವ ಯಾವುದೇ ಸಮಾವೇಶ ಅಥವಾ ರ‍್ಯಾಲಿಯನ್ನು ಪಕ್ಷದ ಚೌಕಟ್ಟಿನೊಳಗೆ ಮಾಡಬೇಕು**

**- ಬಿ.ವೈ.ವಿಜಯೇಂದ್ರ, ಬಿಜೆಪಿ ಅಧ್ಯಕ್ಷ**

# ಸಮಗ್ರ ಆಸ್ತಿಗಳಿಗೆ ಇ-ಖಾತಾ ಮಾಡಿಸುವುದು ಕಡ್ಡಾಯ

## ನಿಯಮ ಮೀರಿದ ಅಪಾರ್ಟ್‌ಮೆಂಟ್‌ಗಳಿಗೆ, ಮನೆಗಳಿಗೆ, ಇತರ ಕಟ್ಟಡಗಳಿಗೆ ಇ- ಖಾತಾ ಸಿಕ್ಕಲ್ಲ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನ ಸಮಗ್ರ ಆಸ್ತಿಗಳಿಗೆ ಇ-ಖಾತಾ ಮಾಡಿಸುವುದು ಈಗ ಕಡ್ಡಾಯ. ಆದರೀಗ, ಇ- ಖಾತಾಕ್ಕೆ ನಾನಾ ರೀತಿಯ ನಿಬಂಧನೆಗಳನ್ನು ವಿಧಿಸಿರುವುದು, ಕೆಲವಾರು ತಾಂತ್ರಿಕ ಸಮಸ್ಯೆಗಳಿ ದಾಗಿ ಇ - ಖಾತೆಯ ಪ್ರಮಾಣ ಪತ್ರ ಅನೇಕರಿಗೆ ಸಿ ಗುತ್ತಿಲ್ಲ. ಅತ್ತ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಪಿಎಂ) ಮಾತ್ರ ದಿನೇ ದಿನೇ ತನ್ನ ನಿಯಮಗಳನ್ನು ಬಿಗಿಗೊಳಿಸುತ್ತಿದೆ. ಮುಂಬರುವ ದಿನಗಲ್ಲಿ ಬಿಬಿ ಎಂಪಿ ಕೈಗೊಳ್ಳಲಿರುವ ಆ ಒಂದು ನಿರ್ಧಾರದಿಂದ ಮನೆಗಳು ಮಾತ್ರವಲ್ಲ, ಅಪಾರ್ಟ್‌ಮೆಂಟ್ ಫ್ಲ್ಯಾಟ್‌ಗಳ ಮಾಲೀಕರಿಗೂ ಇ - ಖಾತೆ ಸಿಗುವುದು ಕಷ್ಟ ಎಂದು ಹೇಳಲಾಗುತ್ತಿದೆ.

ಅವುಗಳಲ್ಲಿ ಬಹುಮುಖ್ಯವಾಗಿ, ಕಟ್ಟಡದ ಪ್ಲ್ಯಾನ್‌ಗೆ ಸಂಬಂಧಿಸಿದಂತೆ ಯಾವುದೇ ನಿಯಮಗಳ ಉಲ್ಲಂಘನೆಯಾಗಿದ್ದರೆ ಇ - ಖಾತಾ ಸಿಗುವುದು ಅನುಮಾನವಾಗಲಿದೆ. ಅಂದರೆ, ಕೆಲವು ಮನೆಗಳಿಗೆ ಪ್ಲ್ಯಾನ್‌ಗೆ ಸಂಬಂಧಿಸಿದ ಪ್ರಾಧಿಕಾರದಿಂದ ಒಪ್ಪಿಗೆ ಪತ್ರವನ್ನು ಪಡೆಯದೇ ಇರುವುದು ಅಥವಾ ಕಟ್ಟಡಗಳನ್ನು ಪ್ಲ್ಯಾನ್‌ಗೆ ಅನುಗುಣವಾಗಿ ಕಟ್ಟದೇ ಇರುವುದು ಮುಂತಾದ ತಪ್ಪುಗಳಾಗಿದ್ದರೆ ಇ- ಖಾತಾ ಸಿಗುವುದು ಅನು ಮಾನವಾಗಲಿದೆ.

ಅಪಾರ್ಟ್ ಮೆಂಟ್‌ಗಳ ವಿಚಾರಕ್ಕೆ ಬರುವುದಾದರೆ, ಬಿಲ್ಡರ್‌ಗಳು ಎಷ್ಟು ಅಂತಸ್ತುಗಳಿಗೆ ಅನುಮತಿ ಪಡೆದಿರುತ್ತಾರೋ ಅಷ್ಟೇ ಸಂಖ್ಯೆಯಲ್ಲಿ ಅಂತ ಸ್ತುಗಳನ್ನು ನಿರ್ಮಿಸಿರಬೇಕು. ಅದನ್ನು ಮೀರಿದರೆ ಆ ಅಪಾರ್ಟ್ ಮೆಂಟ್ ಗಳಲ್ಲಿರುವ ಫ್ಲ್ಯಾಟ್‌ಗಳಿಗೆ ಇ- ಖಾತಾ ಸಿಗುವುದು ಅನುಮಾನವಾಗಲಿದೆ. ಉದಾಹರಣೆಗೆ, ಒಂದು ಅಪಾರ್ಟ್‌ಮೆಂಟ್‌ಗೆ 10 ಅಂತಸ್ತುಗಳನ್ನು ಕಟ್ಟಲು ಅನು ಮತಿ ಪಡೆದಿರುತ್ತಾರೆ ಎಂದಿಟ್ಟುಕೊಳ್ಳೋಣ. ಆದರೆ, ಅವರು ಅದನ್ನು ಮೀರಿ 11 ಅಥವಾ 12 ಫ್ಲೋರ್ ಗಳನ್ನು ಕಟ್ಟಿರುತ್ತಾರೆ. ಅಂಥ ಅಪಾರ್ಟ್‌ಮೆಂಟ್ ಗಳಲ್ಲಿನ ಫ್ಲ್ಯಾಟ್ ಗಳಿಗೆ ಇ - ಖಾತಾ ಸಿಗುವುದು ಅನುಮಾನವಾಗಲಿದೆ.

ಫ್ಲ್ಯಾಟ್ ಗಳಿಗೆ ಪ್ರತ್ಯೇಕವಾಗಿ ಇ -ಖಾತಾ ನೀಡುವ ಜವಾಬ್ದಾರಿ ಆಯಾ ಬಿಲ್ಡರ್ ಗಳದ್ದೇ ಆಗಿರುತ್ತದೆ ಎಂದು ಹೇಳಿರುವ ಅವರು, ಕಟ್ಟಡ ಕಟ್ಟಿದ ನಂತರ ಆತ (ಬಿಲ್ಡರ್) ತನ್ನ ಕಟ್ಟಡದಲ್ಲಿರುವ ಎಲ್ಲಾ ಫ್ಲ್ಯಾಟ್ ಗಳಿಗೆ ಪ್ರತ್ಯೇಕವಾಗಿ ಇ-ಖಾತೆಗಳನ್ನು ಮಾಡಿಸಲು ಆತ ಬಿಬಿಎಂಪಿ ಇ-ಖಾತಾ ವ್ಯವಸ್ಥೆಗೆ ಅರ್ಜಿ ಸಲ್ಲಿಸಬೇಕು.

ಆ ಸಂದರ್ಭದಲ್ಲಿ ಅರ್ಜಿಯ ಜೊತೆಗೆ, ಅನೇಕ ದಾಖಲೆಗಳನ್ನು ಆತ ಒದಗಿಸಬೇಕಾಗುತ್ತದೆ. ಅದರಲ್ಲಿ ಬಿಲ್ಡಿಂಗ್ ಪ್ಲ್ಯಾನ್ ಗೆ ಪಡೆದಿರುವ ಅಪ್ರೂವಲ್ ದಾಖಲೆಯೂ ಕಡ್ಡಾಯ.

ಆತ ಸಲ್ಲಿಸಿದ ಬಿಲ್ಡಿಂಗ್ ಅಪ್ರೂವಲ್ ಪ್ರಮಾಣಪತ್ರವನ್ನು ಬ್ಯಾಕ್ ಎಂಡ್ ನಲ್ಲಿ ಪರಿಶೀಲಿಸಲಾಗುತ್ತದೆ. ಆ ನಿಯಮ ಉಲ್ಲಂಘನೆಯಾಗಿದ್ದರೆ, ಆ ಇ-ಖಾತಾ ಅರ್ಜಿಯನ್ನು ರಿಜೆಕ್ಟ್ ಮಾಡಲಾಗುತ್ತದೆ ಎಂದು ಮೂಲಗಳು ತಿಳಿಸಿವೆ.



ಉದಯವಾಹಿನಿ ಚಿತ್ರ

**ಇ- ಖಾತಾ ವ್ಯವಸ್ಥೆಗೆ ಅರ್ಜಿ**

- **ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ) ಇ-ಖಾತಾ ನೀಡುವ ವ್ಯವಸ್ಥೆಯನ್ನು ಕಟ್ಟಡಗಳ ಪ್ಲ್ಯಾನ್ ಅಪ್ರೂವಲ್ ವ್ಯವಸ್ಥೆಗೆ ಲಿಂಕ್ ಮಾಡುವುದಾಗಿ ತಿಳಿಸಿದೆ.**
- **ಅಪಾರ್ಟ್ ಮೆಂಟ್ ಗಳಲ್ಲಿ ಕಟ್ಟಡದ ಪ್ಲ್ಯಾನ್ ಗೆ ಸಂಬಂಧಿಸಿದ ನಿಯಮಗಳ ಉಲ್ಲಂಘನೆಯಾಗಿದ್ದರೆ, ಫ್ಲ್ಯಾಟ್ ಗಳಿಗೆ ಇ-ಖಾತಾ ಸಿಗುವುದು ಅನುಮಾನವಾಗಲಿದೆ.**
- **ಬಿಲ್ಡರ್ ಗಳು ತಮ್ಮ ಕಟ್ಟಡಗಳಲ್ಲಿ ಇದ್ದ ಎಲ್ಲಾ ಫ್ಲ್ಯಾಟ್ ಗಳಿಗೆ ಪ್ರತ್ಯೇಕವಾಗಿ ಇ-ಖಾತೆಗಳನ್ನು ಪಡೆಯಲು ಬಿಬಿಎಂಪಿ ಇ-ಖಾತಾ ವ್ಯವಸ್ಥೆಗೆ ಅರ್ಜಿ ಸಲ್ಲಿಸಬೇಕು.**

**ಈ ಕುರಿತಂತೆ ಪ್ರತಿಕ್ರಿಯಿಸಿರುವ ಬಿಬಿಎಂಪಿಯ ವಿಶೇಷ ಆಯುಕ್ತರಾದ (ರೆವಿನ್ಯೂ), ಮುನೀಶ್ ಮೌದ್ಗಿಲ್, ಸದ್ಯದಲ್ಲೇ ಇ- ಖಾತಾ ನೀಡುವ ವ್ಯವಸ್ಥೆಯನ್ನು ಕಟ್ಟಡಗಳ ಪ್ಲ್ಯಾನ್ ಅಪ್ರೂವಲ್ ವ್ಯವಸ್ಥೆಯೊಂದಿಗೆ ಲಿಂಕ್ ಮಾಡಲು ಚಿಂತನೆ ನಡೆಸಲಾಗಿದೆ. ಈ ಮೂಲಕ, ಪ್ಲ್ಯಾನ್ ಅಪ್ರೂವಲ್ ಸಂದರ್ಭದಲ್ಲಿ ಒಂದು ದಾಖಲೆ ಸಲ್ಲಿಸಿ, ಆನಂತರ ತಮ್ಮಿಷ್ಟ ಬಂದಂತೆ ಕಟ್ಟಿರುವ ಕಟ್ಟಡಗಳನ್ನು ಪತ್ತೆ ಹಚ್ಚಲು, ಅಂಥ ಕಟ್ಟಡಗಳನ್ನು ನಿರ್ಮಿಸಿದ ಬಿಲ್ಡರ್‌ಗಳ ವಿರುದ್ಧ ಕ್ರಮ ಕೈಗೊಳ್ಳಲು ಅದು ನೆರವಾಗಲಿದೆ ಎಂದು ಹೇಳಿದ್ದಾರೆ.**

# ಬೆಳೆ ನಷ್ಟ: ಎಕರೆಗೆ 3 ಲಕ್ಷ ರೂ. ಪರಿಹಾರ ನೀಡುವಂತೆ ಮನವಿ

## ರೈತರ ಬಾಳಿಗೆ ವಾಯುಭಾರ ಕುಸಿತ ಬೆಂಕಿ ಇಟ್ಟು ಜಡಿ ಮಳೆಯಿಂದ ಸಂಪೂರ್ಣವಾಗಿ ಕಣ್ಣುಂದೆಯೇ ಬೆಳೆ ಫಸಲು ನಾಶ

• **ಉದಯವಾಹಿನಿ ಮುಳಬಾಗಿಲು**


ಚಂಡಮಾರುತ ಜಡಿ ಮಳೆಯಿಂದ ನಷ್ಟವಾಗಿರುವ ಬೆಳೆ ಸಮೀಕ್ಷೆ ಮಾಡಲು ವಿಶೇಷ ತಂಡ ರಚನೆ ಮಾಡಿ, ಪ್ರತಿ ಎಕರೆಗೆ 3 ಲಕ್ಷ ರೂ. ಪರಿಹಾರ ವಿತರಿಸಬೇಕೆಂದು ರೈತ ಸಂಘದಿಂದ ತೋಟಗಾರಿಕೆ ಅಧಿಕಾರಿ ಶ್ರೀನಿವಾಸ್ ಮೂಲಕ ತೋಟಗಾರಿಕೆ ಸಚಿವರಿಗೆ ಮನವಿ ಪತ್ರ ರವಾನಿಸಲಾಯಿತು.

**ರೈತರ ಬದುಕು ದಿನೇ ದಿನೆ ದುಸ್ತರ**

ರೈತರ ಬದುಕು ದಿನೇ ದಿನೆ ದುಸ್ತರವಾಗುತ್ತಿದೆ. ಲಕ್ಷಾಂತರ ರೂ. ಬಂಡವಾಳ ಹಾಕಿ ಬೆಳೆಯುತ್ತಿರುವ ಬೆಳೆಗೆ ರೋಗ ಒಂದು ಕಡೆಯಾದರೆ, ಮತ್ತೊಂದು ಕಡೆ ರೋಗ ನಿಯಂತ್ರಣಕ್ಕೆ ಬಂದರೆ ಅತಿವೃಷ್ಟಿ ಅನಾವೃಷ್ಟಿ ಹಾವಳಿಗೆ ಸಿಲುಕಿ ರೈತರ ನೆಮ್ಮದಿಯನ್ನು ಕಸಿದುಕೊಳ್ಳುತ್ತಿದ್ದರು. ಸಮಸ್ಯೆಗೆ ಶಾಶ್ವತ ಪರಿಹಾರ ನೀಡುವಲ್ಲಿ ಸರಕಾರ ವಿಫಲವಾಗಿದೆ ಎಂದು ರೈತ ಸಂಘದ ರಾಜ್ಯ ಉಪಾಧ್ಯಕ್ಷ ಕೆ. ನಾರಾಯಣಗೌಡ ಸರಕಾರಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

90 ದಿನಗಳ ಪರಿಶ್ರಮ ರಾತ್ರಿ ಹಗಲು ನಿದ್ದೆ ಇಲ್ಲದೆ ಮನೆ ಮಕ್ಕಳಂತೆ ಬೆಳೆಸಿದ್ದ ಟೊಮೊಟೊ, ಕ್ಯಾಪ್ಸಿಕಂ, ಮತ್ತಿತರ ಸಾವಿರಾರು ಹೆಕ್ಟೇರ್ ವಾಣಿಜ್ಯ ಬೆಳೆಗಳು ಸಮೃದ್ಧವಾಗಿ ಉತ್ತಮ ಪಸಲು ಬಂದು ಮಾರುಕಟ್ಟೆಯಲ್ಲಿ ಉತ್ತಮ ಬೆಲೆ ಇದೆ.

ತಮ್ಮ ಕಷ್ಟವೆಲ್ಲಾ ಪರಿಹಾರವಾಗುತ್ತಿದೆ ಎಂಬ ನೀರೀಕ್ಷೆಯಲ್ಲಿದ್ದ ರೈತರ ಬಾಳಿಗೆ ಬಂಗಾಳಕೊಲ್ಲಿ ವಾಯುಭಾರ ಕುಸಿತ ಬೆಂಕಿ ಇಟ್ಟು ಜಡಿ ಮಳೆಯಿಂದ ಸಂಪೂರ್ಣವಾಗಿ ಕಣ್ಣುಂದೆಯೇ ಬೆಳೆ ಪಸಲು ನಾಶವಾಗಿ ಹಾಕಿದ ಬಂಡವಾಳ ಕೈಗೆ ಸಿಗುತ್ತಿಲ್ಲ. ಮಾಡಿದ ಸಾಲ ತೀರಿಸಲಾಗದೆ ಸರಕಾರ ನೀಡುವ ಪರಿಹಾರಕ್ಕಾಗಿ ಚಾತಕ ಪಕ್ಷಿಗಳಂತೆ ಕಾಯುತ್ತಿರುವ ಅನ್ನದಾತರ ರಕ್ಷಣೆಗೆ ಜಿಲ್ಲಾಡಳಿತ ಸರಕಾರ ನಿಲ್ಲಬೇಕೆಂದು ಒತ್ತಾಯಿಸಿದರು. ಹದಗೆಟ್ಟಿರುವ ಕೃಷಿ ಉದ್ಯಮದಲ್ಲಿ 1 ಎಕರೆ ಬೆಳೆ ಮಾಡಬೇಕಾದರೆ ಕನಿಷ್ಠ 3 ಲಕ್ಷ ರೂ. ಬಂಡವಾಳ ಬೀಳುತ್ತಿದೆ. ಸರಕಾರ ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸದೆ ಪ್ರತಿ ಹೆಕ್ಟರ್‌ಗೆ ರೂ. 6500 ನೀಡುವ ಮೂಲಕ ರೈತರ ಸ್ವಾಭಿಮಾನವನ್ನು ಅವಮಾನ ಮಾಡುತ್ತಿದೆ. ಅಂಕಿ ಅಂಶಗಳ ಪ್ರಕಾರ ಮಾಹಿತಿಯನ್ನು ಅಧಿಕಾರಿಗಳಿಂದ ಪಡೆದು ಕನಿಷ್ಟ ಪ್ರತಿ ಎಕರೆಗೆ 3 ಲಕ್ಷ ನಷ್ಟ ಪರಿಹಾರ ವಿತರಣೆ ಮಾಡಿ ಸಂಕಷ್ಟದಲ್ಲಿರುವ ರೈತರನ್ನು ರಕ್ಷಣೆ ಮಾಡಬೇಕು. ಇಲ್ಲವಾದರೆ ಮುಂದಿನ ದಿನಗಳಲ್ಲಿ ರೈತರ ಉಳಿವಿಗಾಗಿ ರೈತರೇ ಬೀದಿಗಿಳಿದು ಸರಕಾರದ ವಿರುದ್ಧ ದಂಗೆ ಏಳುವ ಕಾಲ ದೂರವಿಲ್ಲಎಂದು ಎಚ್ಚರಿಕೆ ನೀಡಿದರು.


ಉದಯವಾಹಿನಿ ಚಿತ್ರ

- ಮಳೆಯಿಂದ ನಷ್ಟವಾಗಿರುವ ಬೆಳೆ ಸಮೀಕ್ಷೆ ಮಾಡಲು ವಿಶೇಷ ತಂಡ ರಚನೆ ಮಾಡಬೇಕು
- ಪ್ರತಿ ಎಕರೆಗೆ 3 ಲಕ್ಷ ರೂ. ಪರಿಹಾರ ವಿತರಿಸಬೇಕೆಂದು ರೈತ ಸಂಘದಿಂದ ಮನವಿ
- ಸಮಸ್ಯೆಗೆ ಶಾಶ್ವತ ಪರಿಹಾರ ನೀಡುವಲ್ಲಿ ಸರಕಾರ ವಿಫಲ ಎಂದು ಆಕ್ರೋಶ

**ತೋಟಗಾರಿಕೆ ಅಧಿಕಾರಿಗೆ ಮನವಿ**

ಈ ಬಾರಿಯ ಅತಿಯಾದ ಮಳೆ, ಗಾಳಿ, ಚಂಡಮಾರುತದಿಂದ ಅಪಾರ ಪ್ರಮಾಣದಲ್ಲಿ ಬೆಳೆ ಹಾನಿಯಾಗಿದೆ. ಮಳೆಯಿಂದ ಹೇಗೋ ಉಳಿದ ಬೆಳೆಯನ್ನು ಕಟಾವು ಮಾಡುವ ಸಂದರ್ಭದಲ್ಲಿ ಚಂಡಮಾರುತದಿಂದ ಮಳೆಯಾಗಿ ಆಗಲೂ ಬೆಳೆ ಹಾನಿಯಾಗಿದೆ. ಮಳೆಯಿಂದ ನಷ್ಟವಾಗಿರುವ ಬೆಳೆ ಸಮೀಕ್ಷೆ ಮಾಡಲು ವಿಶೇಷ ತಂಡ ರಚನೆ ಮಾಡಿ, ಪ್ರತಿ ಎಕರೆಗೆ 3 ಲಕ್ಷ ರೂ. ಪರಿಹಾರ ವಿತರಿಸಬೇಕೆಂದು ರೈತ ಸಂಘದಿಂದ ತೋಟಗಾರಿಕೆ ಅಧಿಕಾರಿಗೆ ಮನವಿ ಸಲ್ಲಿಸಲಾಯಿತು.

> ಚಂಡ ಮಾರುತಗಳ ಹಾವಳಿಯಿಂದ ನಷ್ಟವಾಗಿರುವ ರೈತರ ಬೆಳೆ ಸಮೀಕ್ಷೆ ಮಾಡಲು ಜಿಲ್ಲಾಡಳಿತ ವಿಶೇಷ ಕಂದಾಯ ಹಾಗೂ ತೋಟಗಾರಿಕಾ ಅಧಿಕಾರಿಗಳನ್ನು ನೇಮಿಸಬೇಕು ರೈತರ ಸಮಸ್ಯೆಗಳಿಗೆ ಸ್ಪಂದಿಸದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಂಡು ಯಾವುದೇ ತಾರತಮ್ಯವಿಲ್ಲದೆ ಪ್ರತಿಯೊಬ್ಬ ರೈತರ ತೋಟಗಳಿಗೂ ಭೇಟಿ ಕೊಟ್ಟು ಪರೀಶೀಲನೆ ಮಾಡಿ ವರದಿ ನೀಡಿಬೇಕೆಂದು ಒತ್ತಾಯಿಸಿದರು
>
> -ಹೆಬ್ಬಣಿ ಆನಂದ್‌ರೆಡ್ಡಿ, ಜಿಲ್ಲಾಕಾರ್ಯಧ್ಯಕ್ಷ

ಮನವಿ ಸ್ವೀಕರಿಸಿ ಮಾತನಾಡಿದ ತೋಟಗಾರಿಕೆ ಅಧಿಕಾರಿ ಶ್ರೀನಿವಾಸ್ ಅವರು ಜಡಿ ಮಳೆಯಿಂದ ನಷ್ಟವಾಗಿರುವ ಬೆಳೆ ಸಮೀಕ್ಷೆ ಮಾಡಲು ಜಿಲ್ಲಾಧಿಕಾರಿಗಳು ಈಗಾಗಲೇ ಕಿರಿಯ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಪರಿಹಾರ ಹೆಚ್ಚಳದ ಬಗ್ಗೆ ಸರಕಾರಕ್ಕೆ ಅಂಕಿ ಅಂಶಗಳ ಪ್ರಕಾರ ಪತ್ರ ಬರೆಯುವ ಭರವಸೆಯನ್ನು ನೀಡಿದರು.

# ಜನಪ್ರತಿನಿಧಿಗಳ ನಿರ್ಲಕ್ಷ್ಯ: ಕಲುಷಿತ ತಾಣವಾಗುತ್ತಿದೆ ಕೊರ್ಲಕುಂಟೆ

• **ಉದಯವಾಹಿನಿ ಬಾಗೇಪಲ್ಲಿ**

ಬ್ರಿಟಿಷರು ನಿರ್ಮಿಸಿದ ಚಿತ್ರಾವತಿ ಒಡ್ಡು, ಕಣಜದಲ್ಲಿನ ನೀರನ್ನು ರಾಜಕಾಲುವೆಗಳ ಮೂಲಕ ಹರಿಸಿದ ಕೊರ್ಲಕುಂಟೆ ಇದೀಗ ಊರಿನ ಕಲು ಷಿತ ನೀರು ಹರಿಸುವ ಗುಂಡಿಯಾಗಿದೆ. ಕಸ, ತ್ಯಾಜ್ಯ, ಕಲುಷಿತಗೊಂಡು ವಿನಾಶದ ಅಂಚಿಗೆ ಸರಿದರೂ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ನಿರ್ಲಕ್ಷ್ಯ ಮಾಡುತ್ತಿದ್ದಾರೆ.

ಪಟ್ಟಣದ ಹುಸೇನ್ ಷಾ ವಲಿ ದರ್ಗಾದ ಮೂಲಕ ಕೊಡಿಕೊಂಡ ಕಡೆಗೆ ಸಂಚರಿಸುವ ಮಾರ್ಗದಲ್ಲಿ ಕೊರ್ಲಕುಂಟೆ ಇದೆ. ಪಟ್ಟಣಕ್ಕೆ ಕುಂಟೆ ಅಂಟಿಕೊಂಡಿದೆ. ಈ ಹಿಂದೆ ಇದೇ ಕೊರ್ಲಕುಂಟೆಯಲ್ಲಿ ನೀರಿನ ಸಂಗ್ರಹದ ಸಾಮರ್ಥ್ಯ ಹೆಚ್ಚಿಸಿತ್ತು.

ಕೊಳವೆಬಾವಿಗಳನ್ನು ಕೊರೆಸಿ ಪಟ್ಟಣಕ್ಕೆ ನೀರು ಸರಬರಾಜು ಮಾಡಲಾಗಿತ್ತು. 100 ರಿಂದ 200 ಅಡಿಗೆ ನೀರು ಸಿಗುತ್ತಿತ್ತು. ಕೊರ್ಲಕುಂಟೆ ಇಂದು ಅಕ್ಷರಶಃ ಊರಿನ ಕಲುಷಿತ ತಾಣವಾಗಿದೆ. ಅಧಿಕಾರಿಗಳ ಹಾಗೂ ಜನಪ್ರತಿನಿಧಿಗಳ ನಿರ್ಲಕ್ಷ್ಯದಿಂದ ಮುಳ್ಳಿನ ಹಾಗೂ ಕಳ, ಗಿಡಗಂಟಿಗಳು ಬೆಳೆದಿವೆ. ಊರಿನ ಚರಂಡಿ ನೀರು ಕಾಲುವೆ ಮೂಲಕ ಕುಂಟೆಗೆ ಹರಿಸಲಾಗಿದೆ. ಹಳೆ ಮನೆಗಳ ಕಟ್ಟಡಗಳ ಅವಶೇಷಗಳನ್ನು ಕೋಳಿಗಳ ರೆಕ್ಕೆಗಳನ್ನು ಚೀಲಗಳಲ್ಲಿ ತುಂಬಿಸಿ ಹಾಕಲಾಗಿದೆ.

ಕುಂಟೆಯ ಕಟ್ಟೆಯ ಮೂಲಕ ಸಂಪಂಗಿ ಬಡಾವಣೆಗೆ, ಈದ್ಗಾ ಮೈದಾನ, ಗೌನಿಪಲ್ಲಿ, ಯಗವಬಂಡ್ಲ ಕೆರೆ ಗ್ರಾಮಗಳು ಸೇರಿದಂತೆ ನೆರೆಯ ಆಂಧ್ರಪ್ರದೇಶದ ಕೊಡಿಕೊಂಡ ಕಡೆಗೆ ಹಾದು ಹೋಗುವ ಸಂಪರ್ಕ ಹೊಂದಿದೆ. ಬೀದಿನಾಯಿಗಳು, ಹಂದಿಗಳು ತ್ಯಾಜ್ಯಗಳನ್ನು ಚಲ್ಲಾಪಿಲ್ಲಿ ಮಾಡುತ್ತಿವೆ.

ದಾರಿಹೋಕರು ಮಲಿನದ ಹಾಗೂ ತ್ಯಾಜ್ಯದ ದುರ್ವಾಸನೆಯಿಂದ ಮೂಗು ಮುಚ್ಚಿಕೊಂಡು ಸಂಚರಿಸಬೇಕಾಗಿದೆ. ಪಟ್ಟಣದ ಕೊಳವೆಬಾವಿಗಳ ಅಂತರ್ಜಲ ಮಟ್ಟ ಹೆಚ್ಚಿಸಿತ್ತು. ಪ್ರಾಣಿ ಹಾಗೂ ಪಕ್ಷಿಗಳಿಗೆ ಕುಡಿಯುವ ನೀರಿಗೆ ಆಸರೆಯಾಗಿತ್ತು.

ಮುಳ್ಳಿನ, ಕಳೆ ಗಿಡಗಳಿಂದ ಮುಚ್ಚಿವೆ. 33 ಅಡಿಯಷ್ಟಿದ್ದ ರಾಜಕಾಲುವೆ ಇದೀಗ 3 ಅಡಿ ಮಾತ್ರ ಉಳಿದಿದೆ. 15 ರಿಂದ 20 ಎಕರೆ ಪ್ರದೇಶ ಹೊಂದಿದ್ದ ಕೊರ್ಲಕುಂಟೆ ಸುತ್ತಲೂ ಒತ್ತುವರಿಯಾಗಿದೆ. ಅದರ ವಿಸ್ತೀರ್ಣ ದಾಖಲೆಗಳಲ್ಲಿ ಮಾತ್ರ ಇದೆ.

ಕೆಲ ರಿಯಲ್ ಎಸ್ಟೇಟ್ ದಂಧೆಕೋರರು ನಕಲಿ ದಾಖಲೆಗಳನ್ನು ತೋರಿಸಿ, ಕೊರ್ಲಕುಂಟೆ ಜಾಗವನ್ನು ಮಾರಾಟ ಮಾಡಿದ್ದಾರೆ. ಕೆಲವರು ಮನೆ ಕಟ್ಟಿಕೊಂಡು ವಾಸವಿದ್ದಾರೆ. ಈ ಹಿಂದೆ ಕಂದಾಯ, ಸಣ್ಣನೀರಾವರಿ ಇಲಾಖೆ ಅಧಿಕಾರಿಗಳು ಸುತ್ತಲೂ ಕಂಬಗಳನ್ನು ಹಾಕಿದ್ದರು. ನಂತರ ಸೂಕ್ತ ನಿರ್ವಹಣೆ ಮಾಡಿಲ್ಲ. ಕೊರ್ಲಕುಂಟೆ ಸ್ವಚ್ಛಗೊಳಿಸುವ ಕೆಲಸ ಮೊದಲು ಆಗಬೇಕು. ಕುಂಟೆಗೆ ಮಳೆಯ ನೀರನ್ನು ರಾಜಕಾಲುವೆ, ಕಾಲುವೆ ಮೂಲಕ ಹರಿಸಬೇಕು ಎಂದು ಪಟ್ಟಣದ ನಿವಾಸಿ ಮೆಕಾನಿಕ್ ಬಾಬು ತಿಳಿಸಿದರು.


ಉದಯವಾಹಿನಿ ಚಿತ್ರ

> ಕೊರ್ಲಕುಂಟೆಗೆ ನೀರು ಹರಿಸುವ ರಾಜಕಾಲುವೆ ಸ್ವಚ್ಛಗೊಳಿಸಬೇಕು. ಕಲುಷಿತ ನೀರನ್ನು ಕೆರೆಗೆ ಹರಿಸಬಾರದು ಎಂದು ಸ್ಥಳೀಯ ನಿವಾಸಿ ನವೀದ್ ಹೇಳಿದರು. ಕೊರ್ಲಕುಂಟೆ ಪಕ್ಕದಲ್ಲಿ ಕಸ, ತ್ಯಾಜ್ಯ ಹಾಕದಂತೆ ಪುರಸಭೆ ಅಧಿಕಾರಿಗಳಿಗೆ ಸೂಚನೆ ನೀಡುತ್ತೇನೆ
>
> -ಎ. ಶ್ರೀನಿವಾಸ್, ಪುರಸಭೆ ಅಧ್ಯಕ್ಷ

# ಸರ್ಕಾರದ ಲಾಂಛನ ಬಳಸಿ ನಕಲಿ ಮದ್ಯ ಮಾರಾಟ

• **ಉದಯವಾಹಿನಿ ಮಂಡ್ಯ**

ಮಂಡ್ಯದಲ್ಲಿ ಒಂದು ಬೆಚ್ಚಿ ಬೆಳಿಸುವ ಘಟನೆ ನಡೆದಿದ್ದು, ದುಷ್ಕರ್ಮಿಗಳು ಸರ್ಕಾರದ ಲಾಂಛನ ಹಾಗೂ ಅಬಕಾರಿ ಇಲಾಖೆಯ ಚಿನ್ಹೆಯನ್ನು ಬಳಸಿ ನಕಲಿ ಮದ್ಯ ತಯಾರಿಸಿ ಮಾರಾಟ ಮಾಡುತ್ತಿರುವುದು ಇದೀಗ ಬೆಳಕಿಗೆ ಬಂದಿದೆ. ಹೌದು ಮಂಡ್ಯದಲ್ಲಿ ಪ್ರತಿಷ್ಠಿತ ಕಂಪನಿ ಹೆಸರಿನಲ್ಲಿ ನಕಲಿ ಮದ್ಯ ತಯಾರಿಕೆ ಮಾಡುತ್ತಿರುವುದು ಬೆಳಕಿಗೆ ಬಂದಿದೆ.

ಮಂಡ್ಯ ನಗರದಲ್ಲಿ ನಕಲಿ ಮದ್ಯದ ದಂಧೆ ಬೆಳಕಿಗೆ ಬಂದಿದೆ. ದುಷ್ಕರ್ಮಿಗಳು ಸರ್ಕಾರದ ಲಾಂಛನ ಜಗು ಅಬಕಾರಿ ಇಲಾಖೆಯ ಚಿಹ್ನೆ ಬಳಸಿ ನಕಲಿ ಮದ್ಯ ತಯಾರಿಸುತ್ತಿದ್ದರು ಎಂದು ಆರೋಪಿಸಲಾಗಿದೆ. ಈ ವೇಳೆ ದಾಳಿ ಮಾಡಿದ ಪೊಲೀಸರು ಸುಮಾರು 20 ಲಕ್ಷಕ್ಕೂ ಹೆಚ್ಚು ಮೌಲ್ಯದ ನಕಲಿ ಮದ್ಯವನ್ನು ವಶಪಡಿಸಿಕೊಂಡಿದ್ದಾರೆ. ಗ್ಯಾಂಗೊಂದು ಮನೆಯೊಂದನ್ನು ಬಾಡಿಗೆ ಪಡೆದು 'ಕಾಮಧೇನು ಕಂಫರ್ಟ್ಸ್ ಅನ್ನೋ ಹೆಸರಲ್ಲಿ ಪ್ರತಿಷ್ಠಿತ ಕಂಪನಿಗಳ ಹೆಸರಲ್ಲಿ ನಕಲಿ ಮದ್ಯ ತಯಾರಿಕೆ ದಂಧೆ ನಡೆಸುತ್ತಿತ್ತು. ಮನೆಯಲ್ಲೇ ಮದ್ಯದ ಸ್ಯಾಚೆಟ್, ಸ್ಟಿಕ್ಕರ್ ತಯಾರಿಸುವ ಯಂತ್ರ ಇಟ್ಟುಕೊಂಡಿದ್ದರು. ಕರ್ನಾಟಕ ಸರ್ಕಾರದ ಲಾಂಛನ, ಅಬಕಾರಿ ಇಲಾಖೆ ಚಿಹ್ನೆಯನ್ನೂ ಬಳಕೆ ಮಾಡುತ್ತಿದ್ದರು ಎಂದು ಅಬಕಾರಿ ಡಿವೈಎಸ್‌ಪಿ ಸೋಮಶೇಖರ್ ತಿಳಿಸಿದ್ದಾರೆ.

ಪಕ್ಕಾ ಮಾಹಿತಿ ಮೇರೆಗೆ ಅಬಕಾರಿ ಇಲಾಖೆ ಅಧಿಕಾರಿಗಳು ದಾಳಿ ನಡೆಸಿದ್ದರು.

ಹಂಡ್ರೆಡ್ ಪೈಪರ್ಸ್, ಎಂಸಿ ವಿಸ್ಕಿ, ಬ್ಲಾಕ್ ಆಯಂಡ್ ವೈಟ್, ಟೀಚರ್ಸ್ ಸ್ಕಾಚ್, ಇಂಪೀರಿಯಲ್ ಬ್ಲೂ, ಹಂಡ್ರೆಡ್ ಪೈಪರ್ಸ್, ಎಂಸಿ ವಿಸ್ಕಿ, ಸಿಲ್ವರ್ ಕಪ್ ಸ್ಯಾಚೆಟ್ ಪತ್ತೆಯಾಗಿವೆ. ದಾಳಿ ವೇಳೆ 35 ಲೀಟರ್ ನಕಲಿ ಮದ್ಯದ .500 ಲೀಟರ್ ಸ್ಪಿರಿಟ್ , 30 ನಕಲಿ ಮದ್ಯ. ಸ್ಟಿಕ್ಕರ್ ತಯಾರಿಸುವ ಯಂತ್ರ, ಕಚ್ಚಾ ಸಾಮಗ್ರಿಯನ್ನ ಸೀಜ್ ಮಾಡಲಾಗಿದೆ. ಒಬ್ಬ ಆರೋಪಿ ಸೆರೆಸಿಕ್ಕಿದ್ದು ಉಳಿದವರು ಪರಾರಿಯಾಗಿದ್ದಾರೆ.


ಉದಯವಾಹಿನಿ ಚಿತ್ರ

**ಮದ್ಯ ಪ್ರಿಯರೇ ಹುಷಾರ್**

# 2027ರ ಮಾರ್ಚ್ ನಂತರವೇ ಜಿಲ್ಲೆಗೆ ಎತ್ತಿನಹೊಳೆ

• **ಉದಯವಾಹಿನಿ ಚಿಕ್ಕಬಳ್ಳಾಪುರ**

ಹಾಸನ ಜಿಲ್ಲೆಯ ಸಕಲೇಶಪುರ ತಾಲ್ಲೂಕಿನ ಹೆಬ್ಬನಹಳ್ಳಿ ಬಳಿ ಸೆ.6ರಂದು ಎತ್ತಿನಹೊಳೆ ನೀರಾವರಿ ಯೋಜನೆಯ ಮೊದಲ ಹಂತಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಚಾಲನೆ ನೀಡಿದ್ದಾರೆ. ಹೀಗೆ ಮೊದಲ ಹಂತದ ಯೋಜನೆಗೆ ಚಾಲನೆ ನೀಡಿದ್ದರೂ ಜಿಲ್ಲೆಗೆ ಎತ್ತಿನಹೊಳೆ ನೀರು ಬರಲು ಇನ್ನೂ ಎರಡು ವರ್ಷ ಬೇಕಿದೆ. ಎತ್ತಿನಹೊಳೆ ನೀರನ್ನು ಚಿಕ್ಕಬಳ್ಳಾಪುರ ಜಿಲ್ಲೆಗೆ ಯಾವಾಗ ಹರಿಸಲಾಗುತ್ತದೆ' ಎಂದು ಬಾಗೇಪಲ್ಲಿ ಶಾಸಕ ಎಸ್.ಎನ್.ಸುಬ್ಬಾರೆಡ್ಡಿ, ಜಲಸಂಪನ್ಮೂಲ ಸಚಿವರೂ ಆಗಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಬೆಳಗಾವಿಯಲ್ಲಿ ನಡೆಯುತ್ತಿರುವ ಅಧಿವೇಶನದಲ್ಲಿ ಪ್ರಶ್ನೆ ಕೇಳಿದ್ದಾರೆ.

ಡಿ.ಕೆ.ಶಿವಕುಮಾರ್ ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯನ್ನು 2027ರ ಮಾರ್ಚ್ ಅಂತ್ಯಕ್ಕೆ ಅನುದಾನದ ಲಭ್ಯತೆ ಮೇರೆಗೆ ಸಂಪೂರ್ಣಗೊಳಿಸಲು ಯೋಜಿಸಲಾಗಿದೆ. ತದನಂತರ ಚಿಕ್ಕಬಳ್ಳಾಪುರ ಜಿಲ್ಲೆಗೆ ಉದ್ದೇಶಿತ ನೀರನ್ನು ಪೂರೈಸಲಾಗುವುದು' ಎಂದು ಉತ್ತರಿಸಿದ್ದಾರೆ. 2027ರ ಮಾರ್ಚ್ ಅಂತ್ಯಕ್ಕೆ ಅನುದಾನದ ಲಭ್ಯತೆ ಮೇರೆಗೆ ಪೂರ್ಣಗೊಳಿಸಲು ಯೋಜಿಸಲಾಗಿದೆ ಎಂದು ಸಚಿವರೇ ತಿಳಿಸಿದ್ದಾರೆ. ಮತ್ತೊಂದೆಡೆ ಜಿಲ್ಲೆಯಲ್ಲಿ ಯೋಜನೆಯಡಿ ಪೈಪ್‌ಲೈನ್ ಕಾಮಗಾರಿ ಇಂದಿಗೂ ಆರಂಭವಾಗಿಲ್ಲ. 'ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಕಾಲುವೆ ಕಾಮಗಾರಿ ಪೈಪ್‌ಲೈನ್ ಪ್ರಾರಂಭಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಎಂದು ಸುಬ್ಬಾರೆಡ್ಡಿ ಪ್ರಶ್ನಿಸಿದ್ದಾರೆ. ಸಚಿವರು 'ಹೌದು' ಎಂದು ಉತ್ತರಿಸಿದ್ದಾರೆ.


ಉದಯವಾಹಿನಿ ಚಿತ್ರ

# ಅತಿವೃಷ್ಟಿ, ಕೋವಿಡ್: 3 ಕೋಟಿ ದುರುಪಯೋಗ ತನಿಖಾ ವರದಿಯಲ್ಲಿ ಆರೋಪ ಸಾಬೀತು

• **ಉದಯವಾಹಿನಿ ಮಂಡ್ಯ**

ಜಿಲ್ಲೆಯ ನಾಗಮಂಗಲ ತಾಲ್ಲೂಕಿನಲ್ಲಿ ಪ್ರಕೃತಿ ವಿಕೋಪ ಮತ್ತು ಕೋವಿಡ್-19 ನಿರ್ವಹಣೆಯಲ್ಲಿ 3 ಕೋಟಿಗೂ ಅಧಿಕ ಹಣ ದುರುಪಯೋಗವಾಗಿದೆ' ಎಂಬುದು ತನಿಖಾ ವರದಿಯಲ್ಲಿ ಸಾಬೀತಾಗಿದೆ. ಹಿಂದಿನ ತಹಶೀಲ್ದಾರ್ ಕುಂಞ ಅಹಮದ್ ಎನ್.ಎ ಮತ್ತು ಹಿಂದಿನ ದ್ವಿತೀಯ ದರ್ಜೆ ಸಹಾಯಕಿ ಉಮಾ ವಿರುದ್ಧ ಸಾಮಾಜಿಕ ಕಾರ್ಯಕರ್ತ ಮಂಡ್ಯದ ಕೆ.ಆರ್. ರವೀಂದ್ರ ಲೋಕಾಯುಕ್ತಕ್ಕೆ 2023ರ ಫೆಬ್ರುವರಿಯಲ್ಲಿ ದೂರು ಸಲ್ಲಿಸಿದ್ದರು.

ಅದನ್ನು ಆಧರಿಸಿ, ತಾಲ್ಲೂಕು ಕಚೇರಿಯಲ್ಲಿ ದಾಖಲೆಗಳನ್ನು ಪರಿಶೀಲಿಸಿ, ವಾಸ್ತವಾಂಶಗಳ ಬಗ್ಗೆ ವರದಿ ನೀಡುವಂತೆ ಜಿಲ್ಲಾಧಿಕಾರಿ ತನಿಖಾ ತಂಡವನ್ನು ರಚಿಸಿದ್ದರು. ಜಿಲ್ಲಾಧಿಕಾರಿ ಕಚೇರಿಯ ಸಹಾಯಕ ನಿರ್ದೇಶಕ ಚೇತನ್, ಶಿರಸ್ತೇದಾರ್ ಎಲ್.ಲಕ್ಷ್ಮಿ, ಎಫ್‌ಡಿಎ ಚೈತ್ರಾ, ಮತ್ತು ಎಸ್‌ಡಿಎ ಲಾವಣ್ಯ ಅವರನ್ನು ಒಳಗೊಂಡ ತಂಡವು ವರದಿ ಸಲ್ಲಿಸಿದ್ದು, ಆರೋಪಗಳು ಮೇಲ್ನೋಟಕ್ಕೆ ಸಾಬೀತಾಗಿವೆ ಎಂದು ವಿವರಿಸಲಾಗಿದೆ.

202 ವಾಹನಗಳ ವಿವರಗಳು ಲಭ್ಯವಿಲ್ಲ' ಎಂದು ವರದಿಯಲ್ಲಿ ತಿಳಿಸಲಾಗಿದೆ.ಕೋವಿಡ್-19 ಲಸಿಕಾ ಸಂಬಂಧ ಬಾಡಿಗೆ ಕರಾರು ವಾಹನಕ್ಕೆ 5.40 ಲಕ್ಷ ಪಾವತಿಸಿರುವ ಬಗ್ಗೆ ದೂರು ಸಲ್ಲಿಕೆಯಾಗಿತ್ತು.

ದಾಖಲೆಗಳ ಪ್ರಕಾರ 6 ವಾಹನಗಳಿಗೆ ತಲಾ 90 ಸಾವಿರ ಪಾವತಿಸಲಾಗಿದೆ. ಆದರೆ, ಪಾವತಿಯಾಗಿರುವ ವಾಹನಗಳ ಸಂಖ್ಯೆಗಳು ಮತ್ತು ಮಾಲೀಕರ ವಿವರಗಳ ಬಗ್ಗೆ ತಂಡಕ್ಕೆ ತಾಲ್ಲೂಕು ಆರೋಗ್ಯಾಧಿಕಾರಿಗಳಿಂದ ಪೂರಕ ದಾಖಲೆಗಳೇ ಸಿಕ್ಕಿಲ್ಲ. ಅನುದಾನ ಬಳಕೆ ಬಗ್ಗೆ, ದಾಖಲೆಗಳ ಸಮರ್ಪಕ ನಿರ್ವಹಣೆ ಮಾಡಿಲ್ಲ. ಅನುದಾನ ದುರುಪಯೋಗವಾಗಿರುವುದು ಮೇಲ್ನೋಟಕ್ಕೆ ಕಂಡುಬಂದಿದೆ' ಎಂದು ತನಿಖಾ ತಂಡ ವರದಿಯಲ್ಲಿ ಸ್ಪಷ್ಟವಾಗಿ ತಿಳಿಸಿದೆ.



ಉದಯವಾಹಿನಿ ಚಿತ್ರ

**202 ವಾಹನಗಳ ವಿವರ ಅಲಭ್ಯ**

'ಬಾಡಿಗೆ ವಾಹನಗಳ ಏಜೆಂಟ್ ಖಾತೆಗೆ 5.08 ಲಕ್ಷ ಪಾವತಿಸಿದ್ದು, ಚೆಕ್ ವಿತರಣೆ ಪುಸ್ತಕದಲ್ಲಿ 242 ವಾಹನಗಳಿಗೆ ಅಷ್ಟು ಮೊತ್ತ ಪಾವತಿಯಾಗಿದೆ ಎಂಬ ವಿವರ ಸಿಕ್ಕಿದೆ. ಆದರೆ, ತಾಲ್ಲೂಕು ಆರೋಗ್ಯಾಧಿಕಾರಿಗಳು 40 ಲಸಿಕಾ ವಾಹನಗಳ ಮಾಲೀಕರಿಗೆ ಹಣ ಪಾವತಿಸುವಂತೆ ಕೋರಿರುವ ಪತ್ರವಷ್ಟೇ ಲಭ್ಯವಾಗಿದೆ.

# ಶೌಚಗುಂಡಿಯಲ್ಲಿ ನವಜಾತ ಶಿಶುವಿನ ಶವ ಪತ್ತೆ ಪ್ರಕರಣ ನೇಪಾಳ ಮೂಲದ ಜೋಡಿ ಅರೆಸ್ಟ್

• **ಉದಯವಾಹಿನಿ ರಾಮನಗರ**

ನಗರದ ದಯಾನಂದ ಸಾಗರ ಆಸ್ಪತ್ರೆಯ ಶೌಚ ಗುಂಡಿಯಲ್ಲಿ ನವಜಾತ ಶಿಶುವಿನ ಶವ ಪತ್ತೆ ಪ್ರಕರಣಕ್ಕೆ ಸಂಬಂಧಿಸಿದಂತೆ ನೇಪಾಳ ಮೂಲದ ಇಬ್ಬರು ಆರೋಪಿಗಳನ್ನು ಹಾರೋಹಳ್ಳಿ ಪೊಲೀಸರು ಬಂಧಿಸಿದ್ದಾರೆ.

ಬಂಧಿತ ಆರೋಪಿಗಳನ್ನು ಅಮೃತ ಕುಮಾರಿ (21) ಹಾಗೂ ಸುರೇಂದ್ರ ಮೆಹ್ರಾ (22) ಎಂದು ಗುರುತಿಸಲಾಗಿದೆ. ನ.24ರಂದು ದಯಾನಂದ ಸಾಗರ ಆಸ್ಪತ್ರೆಯ ಶೌಚಗುಂಡಿಯಲ್ಲಿ ನವಜಾತ ಶಿಶುವಿನ ಶವ ಪತ್ತೆಯಾಗಿತ್ತು.

ಆಗ ತಾನೆ ಹುಟ್ಟಿದ ಮಗುವನ್ನ ಟಾಯ್ಲೆಟ್ ಕಮೋಡ್‌ಗೆ ಹಾಕಿ ಆರೋಪಿಗಳು ಫ್ಲಶ್ ಮಾಡಿದ್ದರು. ಬಳಿಕ ಅಲ್ಲಿಂದ ಪರಾರಿಯಾಗಿದ್ದರು. ಶೌಚಾಲಯ ಬ್ಲಾಕ್ ಆಗಿದ್ದ ಪರಿಣಾಮ ಆಸ್ಪತ್ರೆ ಸಿಬ್ಬಂದಿ ಪರಿಶೀಲನೆ ನಡೆಸಿದಾಗ ಶೌಚಗುಂಡಿಯಲ್ಲಿ ಮಗು ಪತ್ತೆಯಾಗಿತ್ತು. ಈ ಸಂಬಂಧ ಹಾರೋಹಳ್ಳಿ ಪೊಲೀಸ್ ಠಾಣೆಗೆ ದಯಾನಂದ ಸಾಗರ ಆಸ್ಪತ್ರೆ ವೈದ್ಯರು ದೂರು ದಾಖಲಿಸಿದ್ದರು. ಪ್ರಕರಣ ತನಿಖೆ ನಡೆಸಿದ್ದ ಪೊಲೀಸರು ಆರೋಪಿಗಳನ್ನ ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಹಾರೋಹಳ್ಳಿ ಕಾರ್ಖಾನೆಯೊಂದರಲ್ಲಿ ಕೆಲಸ ಮಾಡ್ತಿದ್ದ ಯುವಕ ಹಾಗೂ ಯುವತಿ ಕಳೆದ ಎರಡು ವರ್ಷಗಳಿಂದ ಮದುವೆ ಆಗದೇ ಜೊತೆಯಲ್ಲಿ ವಾಸವಾಗಿದ್ದರು. ಗರ್ಭಿಣಿ ಆಗಿದ್ದ ಯುವತಿಗೆ ಹೊಟ್ಟೆನೋವು ಕಾಣಿಸಿಕೊಂಡ ಹಿನ್ನೆಲೆ ಆಸ್ಪತ್ರೆಗೆ ಬಂದಿದ್ದರು.

ಈ ವೇಳೆ ಟಾಯ್ಲೆಟ್‌ನಲ್ಲಿ ಮಗು ಜನಿಸಿದೆ. ಬಳಿಕ ಇಬ್ಬರೂ ಸೇರಿ ಯಾರಿಗೂ ತಿಳಿಯದಂತೆ ಟಾಯ್ಲೆಟ್ ಕಮೋಡ್‌ಗೆ ಮಗು ಹಾಕಿ ಫ್ಲಶ್ ಮಾಡಿ ಎಸ್ಕೇಪ್ ಆಗಿದ್ದರು. ಪೊಲೀಸರು ಸಿಸಿಟಿವಿ ವಿಡಿಯೋ ಆಧರಿಸಿ ಆರೋಪಿಗಳನ್ನು ಬಂಧಿಸಿ, ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.


ಉದಯವಾಹಿನಿ ಚಿತ್ರ

# ಡ್ರೋನ್ ಪ್ರತಾಪ್‌ಗೆ ಹೆಚ್ಚಿದ ಸಂಕಷ್ಟ

• **ಉದಯವಾಹಿನಿ, ತುಮಕೂರು**

ಕೃಷಿಹೊಂಡದಲ್ಲಿ ಸೋಡಿಯಂ ಮೆಟಲ್ ಸ್ಫೋಟಿಸಿ ಸದ್ಯ ಜೈಲು ಪಾಲಾಗಿರುವ ಡ್ರೋನ್ ಪ್ರತಾಪ್‌ಗೆ ಇದೀಗ ಮತ್ತೊಂದು ಸಂಕಷ್ಟ ಎದುರಾಗಿದೆ.

ಈ ಒಂದು ಸೋಡಿಯಂ ಸ್ಫೋಟ ಪ್ರಕರಣಕ್ಕೆ ಸಂಬಂಧಪಟ್ಟಂತೆ ಇದೀಗ ಮುಖ್ಯಮಂತ್ರಿಗಳ ಕಚೇರಿ ಸಂಪೂರ್ಣ ವರದಿ ನೀಡಲು ಸೂಚನೆ ನೀಡಿದೆ ಎಂದು ತಿಳಿದುಬಂದಿದೆ. ಹೌದು ಸೋಡಿಯಂ ಮೆಟಲ್ ಸ್ಫೋಟ ಪ್ರಕರಣಕ್ಕೆ ಸಂಬಂಧಪಟ್ಟಂತೆ ಮಧುಗಿರಿ ಸಿಪಿಐ ಕಚೇರಿಗೆ ಇದೀಗ ಮಾಲಿನ್ಯ ನಿಯಂತ್ರಣ ಮಂಡಳಿ ಅಧಿಕಾರಿಗಳು ಆಗಮಿಸಿದ್ದಾರೆ. ಸಂಪೂರ್ಣ ವರದಿಗೆ ಸಿಎಂ ಕಚೇರಿ ಸೂಚನೆ ನೀಡಿದ ಹಿನ್ನೆಲೆಯಲ್ಲಿ ಈಗ ಮಾಲಿನ್ಯ ನಿಯಂತ್ರಣ ಮಂಡಳಿ ಅಧಿಕಾರಿಗಳು ಪೊಲೀಸರನ್ನು ಭೇಟಿಯಾಗಿದ್ದರೆ. ಸಿಎಂ ಕಚೇರಿಯಿಂದ ಸಂಪೂರ್ಣ ವರದಿ ನೀಡಲು ಸೂಚನೆ ನೀಡಿದ್ದರ ಹಿನ್ನೆಲೆಯಲ್ಲಿ ಮಧುಗಿರಿ ಸಿಪಿಐ ಅವರನ್ನು ಮಾಲಿನ್ಯ ನಿಯಂತ್ರಣ ಅಧಿಕಾರಿಗಳು ಭೇಟಿಯಾದರು. ಹೆಚ್ಚಿನ ಮಾಹಿತಿ ಸಂಗ್ರಹಿಸಲು ಮಂಡಳಿ ಅಧಿಕಾರಿಗಳು ಆಗಮಿಸಿದ್ದಾರೆ. ಸಂಪೂರ್ಣ ವರದಿ ನೀಡಲು ಸಿಎಂ ಕಚೇರಿ ಸೂಚನೆ ನೀಡಿದೆ.


ಉದಯವಾಹಿನಿ ಚಿತ್ರ

# ನಿರ್ಮಾಣ ಕಾರ್ಯ ನನೆಗುದಿಗೆ: ಶಿಥಿಲ ಸ್ಥಿತಿಯಲ್ಲಿ ಗಾಂಧೀಜಿ ನೆನಪಿನ ಕಟ್ಟಡ

## ನಗರದ ಹೃದಯ ಭಾಗದಲ್ಲಿ ನಿರ್ಮಾಣವಾಗಿದ್ದ ಗಾಂಧಿ ಸ್ಮಾರಕ ಭವನ ಶಿಥಿಲಗೊಂಡು ನಿರ್ಲಕ್ಷ್ಯಕ್ಕೆ ತುತ್ತಾಗಿದೆ

• **ಉದಯವಾಹಿನಿ, ಚನ್ನಪಟ್ಟಣ**

ಸ್ವಾತಂತ್ರ್ಯ ಹೋರಾಟದ ವೇಳೆ ಮಹಾತ್ಮ ಗಾಂಧೀಜಿ ಅವರು ಚನ್ನಪಟ್ಟಣಕ್ಕೆ ಭೇಟಿ ನೀಡಿದ್ದರ ಸವಿ ನೆನಪಿಗಾಗಿ ಕಳೆದ 70 ವರ್ಷಗಳ ಹಿಂದೆ ಬೆಂಗಳೂರು ಮೈಸೂರು ಹೆದ್ದಾರಿಗೆ ಹೊಂದಿಕೊಂಡಂತೆ ನಗರದ ಹೃದಯ ಭಾಗದಲ್ಲಿ ನಿರ್ಮಾಣವಾಗಿದ್ದ ಗಾಂಧಿ ಸ್ಮಾರಕ ಭವನ ಶಿಥಿಲಗೊಂಡು ನಿರ್ಲಕ್ಷ್ಯಕ್ಕೆ ತುತ್ತಾಗಿದೆ. ಮಹಾತ್ಮ ಗಾಂಧೀಜಿ ಅವರು 1936ರಲ್ಲಿ ಚನ್ನಪಟ್ಟಣಕ್ಕೆ ಭೇಟಿ ನೀಡಿದ್ದರು.

**1950ರಲ್ಲಿ ಮುಖ್ಯಮಂತ್ರಿ ಕೆ.ಸಿ.ರೆಡ್ಡಿ ಶಿಲಾನ್ಯಾಸ**

ಈ ಜಾಗದಲ್ಲಿ ಅಂದು ಮಹಾತ್ಮ ಗಾಂಧೀಜಿ ಅವರು ತಾಲ್ಲೂಕಿನ ಸ್ವಾತಂತ್ರ ಹೋರಾಟಗಾರರನ್ನು ಒಟ್ಟುಗೂಡಿಸಿ ಸಭೆಯೊಂದನ್ನು ನಡೆಸಿದ್ದರು. ಅದರ ನೆನಪಿಗಾಗಿ ಗಾಂಧಿ ಸ್ಮಾರಕ ಭವನ ನಿರ್ಮಿಸಲಾಗಿದೆ. 1950ರಲ್ಲಿ ಅಂದಿನ ಮುಖ್ಯಮಂತ್ರಿ ಕೆ.ಸಿ.ರೆಡ್ಡಿ ಭವನ ನಿರ್ಮಾಣಕ್ಕೆ ಶಿಲಾನ್ಯಾಸ ನೆರವೇರಿಸಿದ್ದರು. ನಗರದ ಕುವೆಂಪು ನಗರದ ಸ್ವಾತಂತ್ರ್ಯ ಹೋರಾಟಗಾರರಾಗಿದ್ದ ಆರ್ಯಪುತ್ರ ಎಂಬುವರು ಈಗಿರುವ ಗಾಂಧಿ ಭವನ ಇರುವ ಸರ್ಕಾರಿ ಜಾಗದಲ್ಲಿ ಗುಡಿಸಲೊಂದನ್ನು ಹಾಕಿಕೊಂಡು ಗಾಂಧೀಜಿ ಅವರ ಬರುವಿಕೆಗಾಗಿ ಕಾದಿದ್ದರು. ಆಗ ಗಾಂಧೀಜಿ ಅವರು ಕರ್ನಾಟಕ ಪ್ರವಾಸ ಮಾಡಿಕೊಂಡು ಮೈಸೂರು ಮಾರ್ಗವಾಗಿ ಚನ್ನಪಟ್ಟಣಕ್ಕೆ ಬಂದು ಮೊದಲು ಆರ್ಯಪುತ್ರ ಅವರ ನಿವಾಸಕ್ಕೆ ಭೇಟಿ ನೀಡಿ ಅವರ ಜತೆ ಮಾತುಕತೆ ನಡೆಸಿ ನಂತರ ಖಾಲಿ ಜಾಗದಲ್ಲಿ ಹಾಕಿದ್ದ ಗುಡಿಸಿಲಿನವರೆಗೆ ಪಾದಯಾತ್ರೆ ನಡೆಸಿದ್ದರು.

ನಂತರ ತಾಲ್ಲೂಕಿನಲ್ಲಿ ಸ್ವಾತಂತ್ರ್ಯ ಹೋರಾಟದಲ್ಲಿ ಮುಂಚೂಣಿಯಲ್ಲಿದ್ದ ತಿಟ್ಟಮಾರನಹಳ್ಳಿ ವಿ.ವೆಂಕಟಪ್ಪ, ಕೆಂಗಲ್ ಹನುಮಂತಯ್ಯ, ಅಬ್ಬೂರು ಗೋಪಣ್ಣ, ಮತ್ತೀಕೆರೆ ಡಿ.ಲಿಂಗಯ್ಯ, ನಾಗವಾರ ಎನ್.ತಿಮ್ಮಯ್ಯ, ಅಬೂರು ಕೃಷ್ಣಮೂರ್ತಿ, ಸಿಂಗರಾಜಿಪುರದ ಎಸ್.ಸಿ.ಲಿಂಗಪ್ಪ ಸೇರಿದಂತೆ ಹೋರಾಟಗಾರರ ಜತೆ ಸಭೆ ನಡೆದಿತ್ತು.

ಆ ಜಾಗದಲ್ಲಿ ಗಾಂಧೀಜಿ ಹೆಸರಿನಲ್ಲಿ ಸ್ಮಾರಕ ಭವನ ನಿರ್ಮಾಣ ಮಾಡಲಾಯಿತು. ಕಟ್ಟಡದ ನಿರ್ಮಾಣ ಉಸ್ತುವಾರಿಯನ್ನು ಹಿರಿಯ ಸ್ವಾತಂತ್ರ್ಯ ಹೋರಾಟಗಾರ ತಿಟ್ಟಮಾರನಹಳ್ಳಿ ವಿ.ವೆಂಕಟಪ್ಪ ಅವರಿಗೆ ವಹಿಸಲಾಗಿತ್ತು. ಕಟ್ಟಡ ನಿರ್ಮಾಣವಾದ ನಂತರ ಕಟ್ಟಡ ನಿರ್ವಹಣೆ ಹೊಣೆಯನ್ನು ನಗರದ ವೆಂಕಟೇಶ ಅಯ್ಯಂಗಾರ್ ಎಂಬುವರಿಗೆ ವಹಿಸಿದ್ದರು. ಸರ್ಕಾರಿ ಜಾಗವನ್ನು ಗಾಂಧಿ ಭವನದ ಹೆಸರಿಗೆ ದಾಖಲಾತಿ ಮಾಡಲಾಗಿತ್ತು. ಆರಂಭದಲ್ಲಿ ಈ ಸ್ಮಾರಕವನ್ನು ಕಲೆ, ಸಾಂಸ್ಕೃತಿಕ ಕಾರ್ಯಕ್ರಮ ನಡೆಸಲು ಉಪಯೋಗಿಸಲಾಗುತ್ತಿತ್ತು. ನಂತರ ಕೇಂದ್ರ, ಗ್ರಂಥಾಲಯವನ್ನಾಗಿ ಮಾರ್ಪಾಡು ಮಾಡಿ, ಓದುಗರಿಗೆ, ಸಾಹಿತ್ಯಾಭಿಮಾನಿಗಳಿಗೆ ಅನುಕೂಲ ಮಾಡಿಕೊಡಲಾಗಿತ್ತು.

ಈ ಜಾಗದಲ್ಲಿ ಗಾಂಧೀಜಿ ಹೆಸರಿನಲ್ಲಿ ಮೂರು ಅಂತಸ್ತಿನ ಸುಸಜ್ಜಿತ ಭವನ ನಿರ್ಮಾಣ ಮಾಡಬೇಕು ಎನ್ನುವುದು ಹೋರಾಟ ಸಮಿತಿ ಪದಾಧಿಕಾರಿಗಳ ಆಶಯ. ಶೀಘ್ರ ಕಟ್ಟಡ ನಿರ್ಮಾಣವಾಗಲಿ ಎನ್ನುವುದು ಎಲ್ಲರ ಒತ್ತಾಯವಾಗಿದೆ.


ಉದಯವಾಹಿನಿ ಚಿತ್ರ

**ಶಿಥಿಲವಾಗಿರುವ ಕಟ್ಟಡ**

ಗಾಂಧೀಜಿ ಅವರ ಸವಿ ನೆನಪಿಗಾಗಿ ನಿರ್ಮಾಣ ಮಾಡಿರುವ ಈ ಕಟ್ಟಡ ಈಗ ಶಿಥಿಲಾವಸ್ಥೆ ತಲುಪಿದೆ. ಕುಸಿದು ಬೀಳುವ ಆತಂಕ ಎದುರಿಸುತ್ತಿದೆ. ಕಟ್ಟಡದ ಗೋಡೆಗಳು ಬಿರುಕು ಬಿಟ್ಟಿವೆ. ಬೆಳೆದು ನಿಂತಿರುವ ಗಿಡಗಂಟಿ, ಬೆಂಗಳೂರಿಗೆ ತೆರಳುವ ಕೆಲವರ ಬೈಕ್ ನಿಲ್ಲಿಸುವ ಜಾಗವಾಗಿರುವ ಈ ಭವನದ ಆವರಣ ಇದರ ದುಸ್ಥಿತಿ ಸಾರುತ್ತಿದೆ. ಕಟ್ಟಡ ಶಿಥಿಲವಾದ ನಂತರ ಭವನದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಗ್ರಂಥಾಲಯವನ್ನು ಈಗ ಸ್ಥಳಾಂತರ ಮಾಡಲಾಗಿದೆ. ಕಟ್ಟಡದ ಮೇಲ್ಛಾವಣಿ ಅಲ್ಲಲ್ಲಿ ಕಿತ್ತು ಬಿದ್ದಿದೆ. ಕಟ್ಟಡ ಕೆಡವಿ ಇಲ್ಲಿ ಸುಸಜ್ಜಿತವಾದ ಭವನ ನಿರ್ಮಾಣ ಮಾಡಬೇಕು ಎನ್ನುವ ಕೂಗು ಎದ್ದಿದೆ. ಈ ಬಗ್ಗೆ ಹೋರಾಟಗಳೂ ನಡೆದಿವೆ.

**3ಕೋಟಿ ಬಿಡುಗಡೆ**

ಗಾಂಧಿಭವನ ಶಿಥಿಲವಾಗಿ ಬೀಳುವ ಹಂತ ತಲುಪಿರುವ ಕಾರಣ ಕಟ್ಟಡ ಕೆಡವಿ ಸುಸಜ್ಜಿತವಾದ ಕಟ್ಟಡ ನಿರ್ಮಾಣ ಮಾಡಲು ಸರ್ಕಾರದಿಂದ 13ಕೋಟಿ ಅನುದಾನ ಬಿಡುಗಡೆಯಾಗಿದೆ. ಅದು ಜಿಲ್ಲಾಧಿಕಾರಿ ಬ್ಯಾಂಕ್ ಖಾತೆಗೆ ಜಮಾವಣೆಗೊಂಡಿದೆ ಎಂದು ಗಾಂಧಿ ಭವನ ನಿರ್ಮಾಣ ಹೋರಾಟ ಸಮಿತಿಯ ಗೋ.ರಾ.ಶ್ರೀನಿವಾಸ್ ತಿಳಿಸಿದ್ದಾರೆ. ಆದರೆ, ಕೆಲವು ತಾಂತ್ರಿಕ ಕಾರಣದಿಂದ ಕಟ್ಟಡ ನಿರ್ಮಾಣ ಕಾರ್ಯ ನನೆಗುದಿಗೆ ಬಿದ್ದಿದೆ. ಈ ಬಗ್ಗೆ ಜಿಲ್ಲಾಧಿಕಾರಿ ಅವರಿಗೆ ಮನವಿ ಪತ್ರ ನೀಡಿದ್ದೇವೆ. ಆದರೂ, ಯಾವುದೇ ಬೆಳವಣಿಗೆ ಮಾತ್ರ ಆಗಿಲ್ಲ ಎಂದು ತಿಳಿಸುತ್ತಾರೆ.

# ಮಿನಿ ನ್ಯೂಸ್

## ಅಗ್ನಿ ದುರಂತ : ಹೊತ್ತಿ ಉರಿದ ಮಳಿಗೆಗಳು

• **ಉದಯವಾಹಿನಿ, ತುಮಕೂರು**

ತುಮಕೂರಿನಲ್ಲಿ ಬೆಳ್ಳಂಬೆಳಗ್ಗೆ ಅಗ್ನಿ ಅವಘಡ ಸಂಭವಿಸಿದ್ದು ಮಳಿಗೆಗಳು ಹೊತ್ತಿ ಉರಿದಿರುವ ಘಟನೆ ತುಮಕೂರು ನಗರದ ವಿಶ್ವವಿದ್ಯಾಲಯದ ಬಳಿಯ ಮಳಿಗೆಗಳಲ್ಲಿ ಬೆಳಗಿನ ಜಾವ ಬೆಂಕಿ ಕಾಣಿಸಿ ಕೊಂಡಿದ್ದು ಮೊಬೈಲ್ ಅಂಗಡಿ ಸೇರಿದಂತೆ ಮೂರು ಮಳಿಗೆಗಳು ಸುಟ್ಟು ಭಸ್ಮವಾಗಿವೆ.

ಈ ಒಂದು ಘಟನೆ ಶಾರ್ಟ್ ಸರ್ಕ್ಯೂಟ್ ನಿಂದ ಆಗಿದೆ ಎಂದು ಶಂಕೆ ವ್ಯಕ್ತಪಡಿಸಲಾಗಿದ್ದು, ಮೊದಲಿಗೆ ಮೊಬೈಲ್ ಅಂಗಡಿಯಲ್ಲಿ ಕಾಣಿಸಿಕೊಂಡ ಬೆಂಕಿ ಪಕ್ಕದ ಸೌತ್ ಹೋಳಿಗೆ ಮನೆಗೂ ವ್ಯಾಪಿಸಿದೆ.

ಆ ನಂತರ ಸಮೀಪದ ಎಸ್‌ಎಂಎಲ್ ತರಕಾರಿ ಅಂಗಡಿಗೂ ಬೆಂಕಿ ಹಬ್ಬಿದೆ. ಅಗ್ನಿ ಅವಘಡದಲ್ಲಿ ಸಿಸಿ ಕ್ಯಾಮರಾ, ಮೊಬೈಲ್, ಫ್ರಿಜ್ ಸೇರಿದಂತೆ ಅಪಾರ ಪ್ರಮಾಣದ ವಸ್ತುಗಳು ನಾಶವಾಗಿವೆ. ಹೊಸ ಬಡಾವಣೆ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ಸಂಭವಿಸಿದ್ದು, ಈಗಾಗಲೇ ಅಗ್ನಿಶಾಮಕ ಸಿಬ್ಬಂದಿ ಸ್ಥಳಕ್ಕಾಗಮಿಸಿ ಬೆಂಕಿ ನಂದಿಸುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ತಿಳಿದುಬಂದಿದೆ.

## ವೇಶ್ಯವಾಟಿಕೆ ಅಡ್ಡೆಮೇಲೆ ಪೊಲೀಸರ ದಾಳಿ

• **ಉದಯವಾಹಿನಿ, ಮೈಸೂರು**

ಮನೆಯ ಒಂದರಲ್ಲಿ ವೇಶ್ಯಾವಾಟಿಕೆ ದಂಧ ನಡೆಸುತ್ತಿದ್ದ ಖಚಿತ ಮಾಹಿತಿಯ ಮೇರೆಗೆ ಪೊಲೀಸರು ದಾಳಿ ಮಾಡಿದ್ದು, ಈ ಒಂದು ಕಾರ್ಯಾಚರಣೆಯಲ್ಲಿ ಐವರು ಮಹಿಳೆಯರನ್ನು ರಕ್ಷಣೆ ಮಾಡಿದ್ದು ಅಲ್ಲದೆ ಇಬ್ಬರು ಆರೋಪಿಗಳನ್ನು ಬಂಧಿಸಿರುವ ಘಟನೆ ಮೈಸೂರಿನ ಬಸವ ಗುಡಿಯ ಬಳಿ ನಡೆದಿದೆ. ಹೌದು ಮೈಸೂರಿನ ಹೆಬ್ಬಾಳು ಪೊಲೀಸ್ ಠಾಣೆಯ ಬಳಿ ಬಸವನಗುಡಿ ವೃತ್ತದ ಮನೆಯೊಂದರಲ್ಲಿ ವೇಶ್ಯಾವಾಟಿಕೆ ನಡೆಯುತ್ತಿತ್ತು, ಈ ಕುರಿತಂತೆ ಒಡನಾಡಿ ಸಂಸ್ಥೆ ಮುಖ್ಯಸ್ಥ ಸ್ಟ್ಯಾನ್ ಪರುಶು ಪೊಲೀಸರಿಗೆ ಮಾಹಿತಿ ನೀಡಿದರು. ಕೊಡಲೇ ಕಾರ್ಯಪ್ರವೃತ್ತರಾದ ಪೊಲೀಸರು ಎಸಿಪಿ ಗಜೇಂದ್ರ ಪ್ರಸಾದ ನೇತೃತ್ವದಲ್ಲಿ ಮನೆಯ ಮೇಲೆ ದಾಳಿ ಮಾಡಿದರು.

ಈ ವೇಳೆ ಹಾಸನ, ಮೈಸೂರು ಹಾಗೂ ಕೆ ಆರ್ ನಗರದ ಮೂಲದ ಐವರು ಮಹಿಳೆಯರನ್ನು ರಕ್ಷಣೆ ಮಾಡಿ, ವೇಶ್ಯಾವಾಟಿಕೆ ನಡೆಸುತ್ತಿದ್ದ ಮಹಿಳೆ ಹಾಗೂ ಓರ್ವ ಗ್ರಾಹಕರನ್ನು ಅರೆಸ್ಟ್ ಮಾಡಿದ್ದಾರೆ. ಈ ಕುರಿತು ಹೆಬ್ಬಾಳ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಕೂನೂರು ಬಳಿ ಬೀಡುಬಿಟ್ಟ ಜೋಡಿ ಕಾಡಾನೆ: ರೈತರಲ್ಲಿ ಆತಂಕ

• **ಉದಯವಾಹಿನಿ, ಕನಕಪುರ**

ತಾಲ್ಲೂಕಿನ ಕೂನೂರು ಬಳಿ ಜೋಡಿ ಆನೆಗಳು ಕಾಣಿಸಿಕೊಂಡು ಭತ್ತ, ರಾಗಿ, ಬಾಳೆ ಗಿಡಗಳನ್ನು ನಾಶಗೊಳಿಸಿವೆ. ಇದು ರೈತರಲ್ಲಿ ಆತಂಕ ಸೃಷ್ಟಿಸಿದೆ. ಕಳೆದ ಒಂದು ವಾರದಿಂದ ಆನೆಗಳು ಜಮೀನಿನಲ್ಲಿ ಕಾಣಿಸಿಕೊಂಡಿದ್ದು ಕೂನೂರು, ಸಿದ್ದೇಶ್ವರನದೊಡ್ಡಿ, ಹುಲಿಬೆಲೆ ಬೆಕ್ಕಗುಡದ ದೊಡ್ಡಿ ಕರಿರಾಯರದೊಡ್ಡಿ ಭಾಗದಲ್ಲಿ ಓಡಾಡುತ್ತಿವೆ. ಸಂಜೆ 6ಗಂಟೆ ಆಗುತ್ತಿದ್ದಂತೆ ಜಮೀನು ಕಡೆ ಓಡಾಡುವುದು ಕಷ್ಟವಾಗಿದೆ. ಯಾವ ಸಂದರ್ಭದಲ್ಲಿ ದಾಳಿ ನಡೆಸುತ್ತವೆ ಎಂಬ ಭಯದಲ್ಲಿ ಗ್ರಾಮಸ್ಥರಿದ್ದಾರೆ. ಶ್ರೀನಿವಾಸನಹಳ್ಳಿ, ತೇರಿನದೊಡ್ಡಿ, ನಿಡಗಲ್ಲು, ಒರಳಗಲ್ಲು ಗ್ರಾಮದಲ್ಲಿ ಆನೆ ದಾಳಿಯಿಂದ ಒಬ್ಬೊಬ್ಬರು ರೈತರು ಸಾವನ್ನಪ್ಪಿದ್ದಾರೆ. ಕೂನೂರು ಬಳಿ ರೈತರು ಒಬ್ಬರ ಮೇಲೆ ಆನೆ ದಾಳಿ ಮಾಡಿ ಕಾಲು ಕೈ ಕಳೆದುಕೊಂಡಿದ್ದಾರೆ.

ರಾತ್ರಿ ಲಕ್ಷ್ಮಮ್ಮ ನಾಗರಾಜು ಅವರ ಭತ್ತದ ಗದ್ದೆ ಹಾಗ ಹುಲಿಬಲೆ ಸಮೀಪದ ಹನುಮಗೌಡ ಅವರ ಜಮೀನಿನಲ್ಲಿ ಭತ್ತದ ಫಲಸು ಹಾಳು ಮಾಡಿವೆ.ಕಾಡಾನೆಗಳು ನಿರಂತರವಾಗಿ ದಾಳಿ ನಡೆಸಿ ಬೆಳೆಗಳನ್ನು ನಾಶಗೊಳಿಸುತ್ತಿದ್ದರೂ ಅರಣ್ಯ ಇಲಾಖೆ ಅಧಿಕಾರಿಗಳು ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಸಂತ್ರಸ್ತೆ ಲಕ್ಷ್ಮಮ್ಮ ನಾಗರಾಜು ಆರೋಪಿಸಿದರು. ಸರ್ಕಾರದಿಂದ ಸಿಗುವ ಸಣ್ಣ ಪರಿಹಾರದಿಂದ ರೈತರಿಗೆ ಯಾವುದೇ ಲಾಭ ಸಿಗುತ್ತಿಲ್ಲ. ಅರಣ್ಯ ಇಲಾಖೆ ಕಾಡಾನೆಗಳನ್ನು ಶಾಶ್ವತವಾಗಿ ಅರಣ್ಯಕ್ಕೆ ಓಡಿಸಬೇಕು ಎನ್ನುತ್ತಾರೆ ಹುಲಿಬೆಲೆ ನರಸಿಂಹೇಗೌಡ.

## ಬಡ ವಿದ್ಯಾರ್ಥಿಗಳ ವಿಮಾನಯಾನ ಕನಸು ನನಸಾಗಿಸಿದ ಶಿಕ್ಷಕ

• **ಉದಯವಾಹಿನಿ, ತುಮಕೂರು**

ವಿಮಾನದಲ್ಲಿ ಹಕ್ಕಿಯಂತೆ ಹಾರಾಡುವ ಕನಸು ಕಂಡಿದ್ದ ಶಾಲಾ ಮಕ್ಕಳನ್ನು ತಮ್ಮ ಸ್ವಂತ ಖರ್ಚಿನಲ್ಲಿ ಪಕ್ಕದ ಮಹಾರಾಷ್ಟ್ರ ಪ್ರವಾಸಕ್ಕೆ ವಿಮಾನದಲ್ಲಿ ಕರೆದೊಯ್ಯುವ ಮೂಲಕ ಹಳ್ಳಿಯ ಬಡ ಮಕ್ಕಳ ಕನಸನ್ನು ಶಿಕ್ಷಕರೊಬ್ಬರು ನನಸಾಗಿಸಿದ್ದಾರೆ. ಈ ಮೂಲಕ ಮಕ್ಕಳ ಪ್ರವಾಸವನ್ನು ಸ್ಮರಣೀಯವಾಗಿಸಿದ್ದಾರೆ.

ಹಳ್ಳಿಯೊಂದರ ಬಡ ಕುಟುಂಬದಲ್ಲಿನ ಶಾಲಾ ಮಕ್ಕಳನ್ನು ಮುಖ್ಯ ಶಿಕ್ಷಕರೊಬ್ಬರು ತಮ್ಮ ಸ್ವಂತ ಖರ್ಚಿನಲ್ಲಿ ಪ್ರವಾಸಕ್ಕೆ ಕರೆದೊಯ್ದಿದ್ದಾರೆ. ಅದು ಬಸ್‌ನಲ್ಲಿ ಅಲ್ಲ, ರೈಲಿನಲ್ಲಿಯೂ ಅಲ್ಲ, ಬಡವರಿಗೆ, ಬಹುತೇಕ ಮಧ್ಯಮ ವರ್ಗದವರಿಗೆ ಕೈಗೆಟುಕದಂಥ ತೀರಾ ದುಬಾರಿ ಎನ್ನಬಹುದಾದ ವಿಮಾನದಲ್ಲಿ. ಒಟ್ಟು ಐದು ದಿನಗಳ ಶಾಲೆಯ ಶೈಕ್ಷಣಿಕ ಪ್ರವಾಸವನ್ನು ಅವಿಸ್ಮರಣೀಯಗೊಳಿಸಿ ಮಕ್ಕಳ ಮನಸ್ಸಿನಲ್ಲಿ ಅಚ್ಚಳಿಯದಂತೆ ಉಳಿಯುವಂತಹ ಪ್ರವಾಸವನ್ನಾಗಿಸಿದ್ದಾರೆ. ತುಮಕೂರು ತಾಲ್ಲೂಕಿನ ಹರಳೂರು ಗ್ರಾಮದ ಶ್ರೀ ಸಿದ್ದಗಂಗಾ ವಿದ್ಯಾಸಂಸ್ಥೆಯ ಶ್ರೀ ವೀರಭದ್ರೇಶ್ವರ ಗ್ರಾಮಾಂತರ ಅನುದಾನಿತ ಶಾಲೆಯ ಮುಖ್ಯಶಿಕ್ಷಕ ರಾಜಣ್ಣ, ತಮ್ಮ ಶಾಲೆಯ ಮಕ್ಕಳಿಗೆ ಉಚಿತ ವಿಮಾನ ಪ್ರಯಾಣ ಮಾಡಿಸಿದ ಮಾದರಿಯ ಶಿಕ್ಷಕ. ಅವರ ಈ ಅಮೋಘ ಸೇವೆಗೆ ಗ್ರಾಮೀಣ ಶಾಲಾ ಮಕ್ಕಳು ಮತ್ತು ಪೋಷಕರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ತಾನು ಕೆಲಸ ನಿರ್ವಹಿಸುವ ಶಾಲೆಯ 51 ಮಕ್ಕಳನ್ನು ಮತ್ತು 7 ಶಾಲಾ ಸಿಬ್ಬಂದಿಯನ್ನು ಶಿಕ್ಷಕ ರಾಜಣ್ಣ ತಮ್ಮ ಸ್ವಂತ ಹಣದಲ್ಲಿ ವಿಮಾನ ಪ್ರಯಾಣ ಮಾಡಿಸಿದ್ದಾರೆ. ಈ ಮೂಲಕ ಅನೇಕ ಶಿಕ್ಷಕರಿಗೆ ಮಾದರಿ ಶಿಕ್ಷಕರೆನಿಸಿದ್ದಾರೆ. ಈ ಐದು ದಿನಗಳ ಪ್ರವಾಸದಲ್ಲಿ ಶಾಲೆಯ 51 ಮಕ್ಕಳು, ಐವರು ಶಿಕ್ಷಕರು, ಇಬ್ಬರು ಅಡುಗೆ ಸಿಬ್ಬಂದಿ ಸೇರಿ ಒಟ್ಟು 58 ಮಂದಿಗೆ ಶಿಕ್ಷಕ ರಾಜಣ್ಣ ಮೊದಲ ಬಾರಿಗೆ ಮಹಾರಾಷ್ಟ್ರದ ಪುಣೆಗೆ ವಿಮಾನದಲ್ಲಿ ಪ್ರವಾಸಕ್ಕಾಗಿ ಕರೆದೊಯ್ದಿದ್ದಾರೆ. ಪ್ರಯಾಣದ ವೆಚ್ಚ ಒಬ್ಬರಿಗೆ 4,675 ರೂ. ಗಳಂತೆ ಒಟ್ಟು 2,71,150 ರೂ. ವೆಚ್ಚ ಮಾಡಿದ್ದಾರೆ. ಒಟ್ಟಾರೆ ತಾವು ಚಿಕ್ಕಂದಿನಲ್ಲಿ ಆಗಸದಲ್ಲಿ ಹಾರುವ ವಿಮಾನವನ್ನು ಕಂಡ ಕನಸನ್ನು ಮಕ್ಕಳಿಗೆ ನನಸು ಮಾಡಲು, ತಮ್ಮ ಸಂಬಳದ ಉಳಿತಾಯದ ಹಣದಲ್ಲಿ ಕನ್ನಡ ಮಾಧ್ಯಮದ 8, 9, 10ನೇ ತರಗತಿಯ ಮಕ್ಕಳನ್ನು ಸದಾ ಸ್ಮರಣೆಯಲ್ಲಿ ಉಳಿಯುವ ವಿಮಾನಯಾನ ಪ್ರವಾಸಕ್ಕೆ ಕರೆದೊಯ್ದಿದ್ದು ಮಕ್ಕಳ ಪಾಲಿಗೆ ಅಚ್ಚುಮೆಚ್ಚಿನ ಶಿಕ್ಷಕರಾಗಿದ್ದಾರೆ.


ಉದಯವಾಹಿನಿ ಚಿತ್ರ

# ದ್ವಿಚಕ್ರ ವಾಹನ ಮೆಕ್ಯಾನಿಕರ ಸಂಘದ ಉದ್ಘಾಟನೆ ಕಾರ್ಯಕ್ರಮ

## ಆಸ್ಪತ್ರೆಯ ವೈದ್ಯರ ತರಹ ಮೆಕ್ಯಾನಿಕ್‌ಗಳು ಸಹ ವಾಹನಗಳ ವೈದ್ಯರು,ಗರ್ವದಿಂದ ಜೀವನ ಸಾಧಿಸಿ: ಪ್ರಸನ್ನಕುಮಾರ ಗೌಡ

• ಉದಯವಾಹಿನಿ,ಚಿಂಚೋಳಿ





ಉದಯವಾಹಿನಿ ಚಿತ್ರ

ಮೆಕ್ಯಾನಿಕ ಎಂಬುದು ನಮ್ಮನ್ನು ನಾವೆ ದೋಷಿಸಿಕೊಳ್ಳದೆ ಆಸ್ಪತ್ರೆಯ ವೈದ್ಯರ ತರಹ ನಾವು ಕೂಡ ವಾಹನಗಳ ವೈದ್ಯರು ಎಂದು ಭಾವಿಸಿ ಗರ್ವದಿಂದ ಉತ್ತಮ ಜೀವನ ಸಾಧಿಸಬೇಕು ಎಂದು ಕರ್ನಾಟಕ ದ್ವಿಚಕ್ರ ವಾಹನ ಕಾರ್ಯಗಾರ ಮಾಲಿಕರ ತಂತ್ರಜ್ಞರ ಸಂಘದ ರಾಜ್ಯಾಧ್ಯಕ್ಷ ಕೆ.ಎಸ್.ಪ್ರಸನ್ನಕುಮಾರ ಗೌಡ ಹೇಳಿದರು.

ಪಟ್ಟಣದ ಮಹಾಂತೇಶ್ವರ ಕಲ್ಯಾಣ ಮಂಟಪದಲ್ಲಿ ಕರ್ನಾಟಕ ದ್ವಿಚಕ್ರ ವಾಹನ ಕಾರ್ಯಗಾರ ಮಾಲಿಕರ ತಂತ್ರಜ್ಞರ ಸಂಘ ಹಾಗೂ ತಾಲ್ಲೂಕಾ ದ್ವಿಚಕ್ರ ವಾಹನ ಮೆಕ್ಯಾನಿಕರ ಸಂಘದ ಉಧ್ಘಾಟನೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸಂಘ ಎಂದರೆ ಒಂದು ಶಕ್ತಿ, ಈಗಾಗಲೇ ನಾವೆಲ್ಲರೂ ಹಳೆಯ ಎಲ್ಲಾ ದ್ವಿಚಕ್ರ ವಾಹನಗಳು ರಿಪೇರಿ ಮಾಡುತ್ತೇವೆ ಆದರೆ ಈಗ ಬಿಎ-6 ವಾಹನಗಳು ಬಂದಿವೆ ಯಾರು ತಲೆ ಕೆಡಿಸಿಕೊಳ್ಳಬೇಡಿ ಹಳೆಯ ವಾಹನಕ್ಕಿಂತ ಬಿಎ-6 ವಾಹನ ರಿಪೇರಿ ಮಾಡುವುದು ಅತ್ಯಂತ ಸುಲಭದ ಕೆಲಸವಾಗಿದೆ ತಮ್ಮ ಬುದ್ಧಿಶಕ್ತಿ ಉಪಯೋಗಿಸಿದರೆ ಸಾಕು ವಾಹನ ರಿಪೇರಿ ಆಗುತ್ತದೆ ಎಂದರು.

ದಿವ್ಯ ಸಾನ್ನಿಧ್ಯ ವಹಿಸಿದ ಚಂದನಕೇರಾದ ಷ.ಬ್ರ.ಅಭಿನವ ರಾಚೋಟೇಶ್ವರ ಶಿವಾಚಾರ್ಯರು ಮಾತನಾಡಿ ಇಂದಿನ ಯುಗದಲ್ಲಿ ದ್ವಿಚಕ್ರ ವಾಹನ ಇಲ್ಲದೆ ಸ್ಮಾರ್ಟ್ ಪೋನ್ ಇಲ್ಲದೆ ಯಾರು ಇರುವುದಿಲ್ಲ ಹಾಗೆಯೇ ವಾಹನ ಜೀವನಕ್ಕೆ ಎಷ್ಟೆ ಮುಖ್ಯವೋ ವಾಹನಗಳಿಂದ ಜನರ ಜೀವನಕ್ಕೆ ಅಷ್ಟೆ ಅಪಾಯವಿದೆ.

ಮೆಕ್ಯಾನಿಕಗಳಲ್ಲಿರುವ ಸೇಟ್ ಪಾನಾಗಳು ಕಟಿಂಗ್ ಪ್ಲೆಯರ್ ಸರಿಯಾದ ರೀತಿಯಲ್ಲಿ ಸದ್ಬಳಕೆ ಮಾಡಿಕೊಂಡು ದುಶ್ಚಟಗಳಿಗೆ ಬಲಿಯಾಗದೆ ದೂರವಿದ್ದು ಉತ್ತಮ ಜೀವನ ನಿರ್ವಹಿಸಿ,ಆಗ ತಾವು ಉನ್ನತಮಟ್ಟಕ್ಕೆ ಬೆಳೆಯಲು ಸಾಧ್ಯ,ಹಳೆ ವಾಹನಗಳ ಬಂದ್ ಆಗಿ ಇಗ ಹೊಸ ವಾಹನಗಳು ಬಂದಿವೆ ಹಾಗೆಯೇ ಮೆಕ್ಯಾನಿಕಗಳು ಸಹ ಮೊಬೈಲ್ ಅಪ್ಡೇಡ್ ಆಗುವ ತರಹ ಮೆಕ್ಯಾನಿಕಗಳು ಸಹ ಅಪ್ಡೇಡ್ ಬದಲಾವಣೆ ಆಗಬೇಕು, ತಾವು ಮೆಕ್ಯಾನಿಕ್ ವೃತ್ತಿಯ ಜೋತೆ ನಂಬಿಕೆ ವಿಶ್ವಾಸ ಬೆಳೆಸಿಕೊಂಡರೆ ಉತ್ತಮ ಸಾಧನೆ ಮಾಡಲು ಸಾಧ್ಯವಾಗುತ್ತದೆ.
- ದೊಡ್ಡೆಂದ್ರ ಮಹಾಸ್ವಾಮಿಗಳು ಸುಲೇಪೇಟ.

ದ್ವಿಚಕ್ರ ವಾಹನ ಮೆಕ್ಯಾನಿಕಗಳು ಸ್ವಚ್ಚತೆ ಕಾಪಾಡಿಕೊಂಡು ಯಾವುದೇ ದುಶ್ಚಟಗಳಿಗೆ ಬಲಿಯಾಗದೆ ಉತ್ತಮ ಜೀವನ ಸಾಧಿಸಬೇಕು ಆಗ ತಮ್ಮ ತಮ್ಮ ಮಕ್ಕಳಿಗೆ ಉತ್ತಮವಾದ ಶಿಕ್ಷಣ ನೀಡಿ ಜೀವನ ಸುಗಮವಾಗಿ ಸಾಧಿಸಲು ಸಾಧ್ಯವಾಗುತ್ತದೆ.

ಮೆಕ್ಯಾನಿಕಗಳು ನಿಮ್ಮ ಬುದ್ಧಿವಂತಿಕೆ ಯಿಂದ ವಾಹನಗಳು ದುರಸ್ತಿ ಮಾಡುವ ಜೋತೆ ಅತ್ಯಂತ ಶ್ರಮ ಜೀವಿಗಳು ತಮ್ಮ ಶ್ರಮದ ಹಣ ಸಂಪಾದನೆ ಮಾಡುತ್ತೀರಿ ಆದ ಕಾರಣ ಯಾವುದೇ ಕೆಟ್ಟ ಚಟಗಳಿಗೆ ಬಲಿಯಾಗದೆ ಸುಗಮ ಜೀವನ ಸಾಧಿಸಿ ಎಂದ ಆಶೀರ್ವಚನ ನೀಡಿದರು.

ಮೆಕ್ಯಾನಿಕಗಳು ಅಪ್ಡೇಡ್ ಆಗಬೇಕು

ದ್ವಿಚಕ್ರ ವಾಹನ ಮೆಕ್ಯಾನಿಕ್ ಸಂಘದ ಅಧ್ಯಕ್ಷ ಮಹೇಶ ಪತ್ತಾರ ಸ್ವಾಗತಿಸಿದರು, ಸಂತೋಷ ಗಡಂತಿ ನಿರೂಪಿಸಿದರು,ಸಂತೋಷ ಗುಣಾಜೀ ವಂದಿಸಿದರು. ಈ ಸಂದರ್ಭದಲ್ಲಿ ಸುಲೇಪೇಟ ದೊಡೆಂದ್ರ ಮಹಾಸ್ವಾಮಿಗಳು, ಸಂಘದ ರಾಜ್ಯ ಉಪಾಧ್ಯಕ್ಷ ಎನ್.ಜಗದಿಶ,ಜಿಲ್ಲಾಧ್ಯಕ್ಷ ಕಮಲಾಕರ ಧನ್ನಿ, ತಾಲ್ಲೂಕಾ ಗೌರವಧ್ಯಕ್ಷ ಮನೋಹರ ಪತ್ತಾರ, ಶರಣು ದೇವಣಗಾಂವ, ಡಿಸಿಸಿ ಬ್ಯಾಂಕ್ ನಿರ್ದೆಶಕ ಗೌತಮ್ ಪಾಟೀಲ, ರಾಘವೇಂದ್ರ ಮರತೂರ, ಲಕ್ಷ್ಮಿಕಾಂತ, ಸುನೀಲ ಸುಗಂಧಿ, ಮಹೇಬೂಬ ಕಲಬುರ್ಗಿ, ಆರೀಫ್, ವಿಶ್ವನಾಥ ಬೀರನಳ್ಳಿ, ಮಹ್ಮದ್ ರಫೀಕ್, ಗಫೂರಶಾ, ಅಮರ ಲೋಡನೂರ,ಸೋಮಶೇಖರ ಹುಲಿ, ಶಂಕರಜೀ ಹೂವಿನಹಿಪ್ಪರ್ಗಿ, ಮುಜೀಬ್, ರಂಗಣ್ಣ ಪೂಜಾರಿ, ಸತಿಶ, ರವಿಕುಮಾರ, ರತ್ನಾಕರಸ್ವಾಮಿ, ವಿಠ್ಠಲಸಿಂಗ್ ಠಾಕೂರ್, ಸುರೇಶ, ಅರವಿಂದ, ನಂದಿಕುಮಾರ, ಬಾಬು ಸಕಂದ, ಈರಪ್ಪ, ಸಂಗು,ಇಸ್ಮಾಯಿಲ್,ವಿನೋಧ ಅನೇಕರಿದ್ದರು.

# 12 ನೇ ಶತಮಾನ ವಚನಗಳು ಜೀವನದ ಅನುಭವಗಳ ನಾಡಿಗೆ ಸಂದೇಶ ಸಾರುವುದು

• ಉದಯವಾಹಿನಿ, ಸಿಂಧನೂರು



ಉದಯವಾಹಿನಿ ಚಿತ್ರ

ಅಕ್ಕಮಹಾದೇವಿ, ಅಕ್ಕನಾಗಮ್ಮ, ಮುಕ್ತಾಯಕ್ಕ, ಸೇರಿದಂತೆ ಬಹಳಷ್ಟು ಜನ ಮಹಿಳಾ ಸಾಹಿತಿಗಾರರು 12 ನೇ ಶತಮಾನದಲ್ಲಿ ನಮಗೆ ವಚನಗಳ ರೂಪದಲ್ಲಿ ಜೀವನದ ಅನುಭವಗಳ ಮೂಲಕ ನಾಡಿಗೆ ಸಂದೇಶ ಸಾರಿದವರು ಎಂದು ಉಪನ್ಯಾಸಕಿ ಅರುಣಾ ಹಿರೇಮಠ ಹೇಳಿದರು. ನಗರದ ಅಕ್ಕಮಹಾದೇವಿ ವಸತಿ ನಿಲಯದಲ್ಲಿ ಜಿಲ್ಲಾ ಮತ್ತು ತಾಲ್ಲೂಕು ಕಸಾಪದಿಂದ ಎಸ್. ಸರಗುಣಮ್ಮ ಸೋಮನಗೌಡ, ನಿಂಗಮ್ಮ ಭೀಮಪ್ಪ ಗುಡ್ಲಮನಿ, ಜಿ.ಜೆ.ದೇವಿರಮ್ಮ ಜಯಣ್ಣಗೌಡ, ಚನ್ನಬಸವಸ್ವಾಮಿ ಹಿರೇಮಠ ಇವರ ದತ್ತಿ ಉಪನ್ಯಾಸ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಈ ಕಾರ್ಯಕ್ರಮದಲ್ಲಿ ಸಸಿಗೆ ನೀರು ಹಾಕುವ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು, ವಿದ್ಯಾರ್ಥಿನಿಯರು ಪಠ್ಯ ಪಾಠದ ಅಭ್ಯಾಸದ ಜೊತೆಗೆ ಸಾಹಿತ್ಯಾಸಕ್ತಿ ಬೆಳಸಿಕೊಳ್ಳಬೇಕು ಎಂದರು.

ನಂತರ ವಿಜಯಲಕ್ಷ್ಮಿ ಗುರಿಕಾರ್ ಮಾತನಾಡಿ, ಹೆಣ್ಣು ಜಗದ ಕಣ್ಣು, ಅನ್ನೋ ಹಾಗೆ ತಾಯಿ ಜಗದ ಕಣ್ಣು, ಜಗದ್ದೋದಾರಕಿ, ತಾಯಿ ಎಂದರೆ ದೇವರು, ಸಕಲ ದೇವತೆಗಳನ್ನ ಪೂಜಿಸುವುದಕ್ಕಿಂತ ಎತ್ತ ತಾಯಿಯನ್ನು ಪೂಜಿಸು ಅಂತ ನಮ್ಮ ಹಿರಿಯರು ಅನುಭವದ ನುಡಿ ನುಡಿಯುವ ಮೂಲಕ ತಾಯಿಗೆ ವಿಶೇಷ ಸ್ಥಾನ ಕಲ್ಪಿಸಿದ್ದಾರೆ ಎಂದು ತಾಯಿ (ಅವ್ವ) ಕುರಿತು ವಿಷಯ ಮಂಡನೆ ಮಾಡಿದರು. ದತ್ತಿ ದಾನಿಗಳಾದ ಶಕುಂತಲಾ ಪಾಟೀಲ್, ರಮಾದೇವಿ ಶಂಭೋಜಿ, ದೇವಿರಮ್ಮ, ಶಿವಮೂರ್ತಿ ಹಿರೇಮಠ, ಉಪಸ್ಥಿತರಿದ್ದರು. ಅಧ್ಯಕ್ಷತೆಯನ್ನು ಕಸಾಪ ತಾಲ್ಲೂಕು ಅಧ್ಯಕ್ಷ ಪಂಪಯ್ಯಸ್ವಾಮಿ ಸಾಲಿಮಠ ವಹಿಸಿಕೊಂಡು ಪ್ರಾಸ್ತಾವಿಕವಾಗಿ ಮಾತನಾಡಿದರು.

12 ನೇ ಶತಮಾನದಲ್ಲಿ 770 ಜನರು ರಚಿಸಿದ ಶರಣ ಸಾಹಿತ್ಯದಲ್ಲಿ 33 ಮಹಿಳಾ ಸಾಹಿತ್ಯಕಾರರು ಇದ್ದರು. ಅದರಲ್ಲಿ ಶರಣೇ ಅಕ್ಕಮಹಾದೇವಿ ಮೊದಲಿಗರಾಗಿ ನಿಲ್ಲುತ್ತಾರೆ
- ಈರಮ್ಮ ಹಿರೇಮಠ, ಉಪನ್ಯಾಸಕಿ

ಈ ಕಾರ್ಯಕ್ರಮದಲ್ಲಿ ಎನ್.ಅಕ್ಕಮ್ಮ ಶಿವನಾಗಪ್ಪ, ಸುನಿತಾ, ಬೀರಪ್ಪ ಶಂಭೋಜಿ, ಶೇಖ ಬಶೀರ ಎತ್ಕಾರಿ, ಹಾಗೂ ವಸತಿ ನಿಲಯದ ವಿದ್ಯಾರ್ಥಿನಿಯರು ಇದ್ದರು.

# ಆರೋಗ್ಯ ಇಲಾಖೆಯಲ್ಲಿ ಖಾಲಿ ಹುದ್ದೆ ಭರ್ತಿಗೆ ಕ್ರಮ

• ಉದಯವಾಹಿನಿ ಬೆಳಗಾವಿ



ಆರೋಗ್ಯ ಇಲಾಖೆಯಲ್ಲಿ ಖಾಲಿ ಇರೋ ಹುದ್ದೆ ಭರ್ತಿಗೆ ಕ್ರಮವಹಿಸೋದಾಗಿ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ವಿಧಾನ ಪರಿಷತ್ ಪ್ರಶ್ನೋತ್ತರ ಕಲಾಪದಲ್ಲಿ ಬಿಜೆಪಿ ಸದಸ್ಯ ಎಂ.ಜಿ. ಮೂಳೆ ಪ್ರಶ್ನೆ ಕೇಳಿದ್ರು. ರಾಜ್ಯದಲ್ಲಿ ಆರೋಗ್ಯ ಇಲಾಖೆಯಲ್ಲಿ 32,870 ಹುದ್ದೆಗಳು ಖಾಲಿ ಇವೆ. ಇಲಾಖೆಯಲ್ಲಿ 50% ಹುದ್ದೆ ಖಾಲಿ ಇವೆ. ಹುದ್ದೆ ಖಾಲಿ ಇರೋದ್ರಿಂದ ಆರೋಗ್ಯ ಇಲಾಖೆಗೆ ಸಮಸ್ಯೆ ಆಗ್ತಿದೆ. ಆಸ್ಪತ್ರೆಗೆ ಬರೋ ರೋಗಿಗಳಿಗೆ ಸಮಸ್ಯೆ ಇದೆ. ಡಾಕ್ಟರ್‌ಗಳ ಹುದ್ದೆ ಖಾಲಿ ಇದೆ. ಖಾಲಿ ಹುದ್ದೆ ಹೊರಗುತ್ತಿಗೆ ಆಧಾರದಲ್ಲೂ ನೇಮಕ ಆಗಿಲ್ಲ. ಕಲ್ಯಾಣ ಕರ್ನಾಟಕ ಭಾಗದಲ್ಲೂ ಖಾಲಿ ಹುದ್ದೆಗಳು ಜಾಸ್ತಿ ಇವೆ. ಕಳೆದ ಅಧಿವೇಶನದಲ್ಲೂ ಇದೇ ಉತ್ತರ ಬಂದಿದೆ. ಕೂಡಲೇ ಖಾಲಿ ಹುದ್ದೆ ಭರ್ತಿ ಮಾಡಬೇಕು ಅಂತಾ ಒತ್ತಾಯ ಮಾಡಿದ್ದಾರೆ. ಇದಕ್ಕೆ ಸಚಿವ ದಿನೇಶ್ ಗುಂಡೂರಾವ್ ಉತ್ತರ ನೀಡಿ, ಖಾಲಿ ಇರೋ 32 ಸಾವಿರ ಹುದ್ದೆಗಳಲ್ಲಿ ಹಲವು ರೀತಿ ಭರ್ತಿ ಮಾಡೋ ಕೆಲಸ ಆಗಿದೆ. ಔಟ್ ಸೋರ್ಸ್‌ನಲ್ಲಿ ಅನೇಕ ಹುದ್ದೆ ಭರ್ತಿ ಆಗಿವೆ. 500 ಹೆಚ್ಚು ಎಂಬಿಬಿಎಸ್ ಡಾಕ್ಟರ್‌ಗಳನ್ನ ಔಟ್ ಸೋರ್ಸ್‌ನಲ್ಲಿ ಭರ್ತಿ ಮಾಡಾಗಿದೆ. ಒಟ್ಟಾರೆ 18,040 ಹುದ್ದೆಗಳನ್ನ ಔಟ್ ಸೋರ್ಸ್‌ನಲ್ಲಿ ಭರ್ತಿ ಮಾಡಲಾಗಿದೆ ಎಂದಿದ್ದಾರೆ.1,800 ಹುದ್ದೆಗೆ ಆರ್ಥಿಕ ಇಲಾಖೆ ಅನುಮತಿ ನೀಡಿದ್ದಾರೆ. ಆದಷ್ಟು ಬೇಗ ನೇಮಕಾತಿ ಮಾಡ್ತೀವಿ. ತಜ್ಞ ವೈದ್ಯರ ನೇಮಕಾತಿಗಾಗಿ ಕೇಂದ್ರಕ್ಕೆ ಪತ್ರ ಬರೆಯಲಾಗಿದೆ. ಕೇಂದ್ರದ ನಿಯಮದ ಪ್ರಕಾರ ತಜ್ಞ ಡಾಕ್ಟರ್‌ಗಳ ಸಂಬಳ ಇದೆ.

ಇದನ್ನ ಹೆಚ್ಚಳ ಮಾಡಲು ನಮಗೆ ಅನುಮತಿ ಕೊಡಿ ಅಂತ ಮನವಿ ಮಾಡಿದ್ದೇವೆ. ಕೇಂದ್ರ ಕೂಡಾ ಓರಲ್‌ನಲ್ಲಿ ಒಪ್ಪಿಗೆ ಕೊಟ್ಟಿದೆ. ಅಧಿಕೃತವಾಗಿ ಅನುಮತಿ ಬಂದ ಮೇಲೆ ತಜ್ಞ ವೈದ್ಯರಿಗೆ ನಾವೇ ಸಂಬಳ ಜಾಸ್ತಿ ಮಾಡಿ ನೇಮಕಾತಿ ಮಾಡಿಕೊಳ್ತೀವಿ. ನರ್ಸ್ ಮತ್ತು ಟೆಕ್ನಿಷನ್ಸ್ ನೇಮಕಕ್ಕೆ ಆರ್ಥಿಕ ಇಲಾಖೆಗೆ ಮನವಿ ಮಾಡಿದ್ದೇವೆ ಎಂದು ತಿಳಿಸಿದ್ದಾರೆ.

# ಧರ್ಮಸ್ಥಳ ಸಂಘದದಿಂದ ವಾತ್ಸಲ್ಯ ಕಿಟ್ ವಿತರಣೆ

• ಉದಯವಾಹಿನಿ, ಮುದ್ದೇಬಿಹಾಳ



ಉದಯವಾಹಿನಿ ಚಿತ್ರ

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಮುದ್ದೇಬಿಹಾಳ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿಯ 21 ಫಲಾನುಭವಿಗಳಿಗೆ ವಾತ್ಸಲ್ಯ ಕಿಟ್ ವಿತರಿಸಲಾಯಿತು.

ಈ ವೇಳೆ ಜಿಲ್ಲಾ ನಿರ್ದೇಶಕ ಸಂತೋಷಕುಮಾರ್ ರೈ ಹಾಗೂ ತಾಲ್ಲೂಕ ಯೋಜನಾಧಿಕಾರಿ ನಾಗೇಶ ಎನ್ ಪಿ ಮಾತನಾಡಿ ಧರ್ಮಸ್ಥಳ ಯೋಜನೆಯ ಪಾವಿತ್ರ್ಯತೆ ಮುಖವಾಗಿ ಡಾ.ವೀರೇಂದ್ರ ಹೆಗ್ಗಡೆ ಹಾಗೂ ಡಾ.ವಿ ಹೇಮಾವತಿ ಅಮ್ಮನವರ ಪ್ರೇರಣೆಯಿಂಸ ಜ್ಞಾನ ವಿಕಾಸ ವಾತ್ಸಲ್ಯ ಕಾರ್ಯಕ್ರಮದ ಅಡಿಯಲ್ಲಿ ಪ್ರತಿ ತಿಂಗಳು ನಿರ್ಗತಿಕರಿಗೆ ಪೂಷಕರಿಲ್ಲದ ಮಾಶಾಸನ ಫಲಾನುಭವಿಗಳಿಗೆ ಪ್ರತಿ ತಿಂಗಳು 1 ಸಾವಿರ ರೂ ನೀಡಲಾಗುತ್ತದೆ ಮತ್ತು ಇದರಲ್ಲಿ ತುಂಬಾ ಕಷ್ಟದಲ್ಲಿರುವ ಕುಟುಂಬದ ಫಲಾನುಭವಿಗಳಿಗೆ ಗುರುತಿಸಿ ಅವರಿಗೆ ವಾತ್ಸಲ್ಯ ಕಿಟ್ ಹಾಗೂ ಸಿರಿ ಧಾನ್ಯಗಳನ್ನು ವಿತರಿಸಲಾಗುತ್ತದೆ ಎಂದರು.

ಈ ವೇಳೆ ಮುಖಂಡರಾದ ಲಕ್ಷ್ಮಣ ಬಿಜ್ಜೂರ, ಒಕ್ಕೂಟದ ಅಧ್ಯಕ್ಷೆ ಕಾಳಮ್ಮ ಬಡಿಗೇರ, ಮೇಲ್ವಿಚಾರಕ ನಿಂಗನಗೌಡ ಪಾಟೀಲ್, ಜ್ಞಾನ ವಿಕಾಸ ಸಮನ್ವಯಧಿಕಾರಿ ಸುಜಾತಾ ಸೇವಾಪ್ರತಿನಿಧಿಗಳಾದ ರೇಖಾ, ತನುಜಾ ಸೇರಿ ಹಲವರು ಭಾಗವಹಿಸಿದ್ದರು

# ರಾಜ್ಯದ ಅಭಿವೃದ್ಧಿಗೆ ಈ ವರ್ಷ 1.20 ಲಕ್ಷ ಕೋಟಿ ರೂ. ಮೀಸಲು

• ಉದಯವಾಹಿನಿ ಗದಗ



ಉದಯವಾಹಿನಿ ಚಿತ್ರ

1,20,000 ಕೋಟಿ ಹಣವನ್ನು ಈ ವರ್ಷ ನಾವು ಅಭಿವೃದ್ಧಿಗೆ ಮೀಸಲಿಟ್ಟಿದ್ದೇವೆ. ಇದಲ್ಲದೆ 52,000 ಕೋಟಿ ರೂಪಾಯಿಯನ್ನು ಗ್ಯಾರಂಟಿಗಳ ಮೂಲಕ ರಾಜ್ಯದ ಜನರ ಜೇಬಿಗೆ ನೇರವಾಗಿ ಹಾಕುತ್ತಿದ್ದೇವೆ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದ್ದಾರೆ.

ಗದಗ ಜಿಲ್ಲೆಯ ರೋಣ ವಿಧಾನಸಭಾ ಕ್ಷೇತ್ರದಲ್ಲಿ ಆಯೋಜಿಸಿದ್ದ 200 ಕೋಟಿ ಮೊತ್ತದ ವಿವಿಧ ಅಭಿವೃದ್ಧಿ ಕಾರ್ಯಗಳಿಗೆ ಚಾಲನೆ ಹಾಗೂ ಸಿರಿಧಾನ್ಯ ಉತ್ಪನ್ನಗಳ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಸಿಎಂ ಸಿದ್ದರಾಮಯ್ಯ, 1,20,000 ಕೋಟಿ ಹಣವನ್ನು ಈ ವರ್ಷ ನಾವು ಅಭಿವೃದ್ಧಿಗೆ ಮೀಸಲಿಟ್ಟಿದ್ದೇವೆ. ಇದಲ್ಲದೆ 52,000 ಕೋಟಿ ರೂಪಾಯಿಯನ್ನು ಗ್ಯಾರಂಟಿಗಳ ಮೂಲಕ ರಾಜ್ಯದ ಜನರ ಜೇಬಿಗೆ ನೇರವಾಗಿ ಹಾಕುತ್ತಿದ್ದೇವೆ. ಹೀಗಿದ್ದೂ ಬಿಜೆಪಿ ಬುರುಡೆ ಬಿಡುತ್ತಿದೆ. ರಾಜ್ಯ ಸರ್ಕಾರದ ಬಳಿ ಅಭಿವೃದ್ಧಿಗೆ ಹಣ ಇಲ್ಲ ಎಂದು ಪದೇ ಪದೇ ಸುಳ್ಳು ಹೇಳಿ ಅವರ ಸುಳ್ಳನ್ನು ಸತ್ಯ ಎಂದು ಬಿಂಬಿಸಲು ಯತ್ನಿಸುತ್ತಿದ್ದಾರೆ. ಆದರೆ ರಾಜ್ಯದ ಜನತೆ ಇವರ ಸುಳ್ಳು ನಂಬುವಷ್ಟು ಮೂರ್ಖರಲ್ಲ. ಆದರೆ ಬಿಜೆಪಿ ಜಾತಿ-ಧರ್ಮದ ನಡುವೆ ದ್ವೇಷ ಹರಡಿ, ಜನರನ್ನು ವಿಭಜಿಸುವ ರಾಜಕಾರಣದಲ್ಲಿ ತೊಡಗಿದೆ. ಬಸವಣ್ಣ, ಅಂಬೇಡ್ಕರ್, ಗಾಂಧಿ, ಬುದ್ಧ ಎಲ್ಲರ ಆಶಯದಂತೆ ಸಮ ಸಮಾಜವನ್ನು ಸೃಷ್ಟಿಸುವ ಕಾರ್ಯಕ್ರಮಗಳನ್ನು ನಮ್ಮ ಸರ್ಕಾರ ರೂಪಿಸಿ, ಜಾರಿ ಮಾಡುತ್ತಿದೆ ಎಂದರು.

ರಾಜ್ಯದ 4.5 ಕೋಟಿ ಮಂದಿ ಗ್ಯಾರಂಟಿ ಯೋಜನೆಗಳ ನೇರ ಲಾಭ ಪಡೆಯುತ್ತಿದ್ದಾರೆ. ಇದಲ್ಲದೆ ರಸ್ತೆ, ನೀರು, ಕೃಷಿ, ನೀರಾವರಿ ಯೋಜನೆಗಳಿಗೂ ಸಾವಿರಾರು ಕೋಟಿ ಖರ್ಚು ಮಾಡುತ್ತಿದ್ದೇವೆ. ಸಮಾಜ ಕಲ್ಯಾಣಕ್ಕೆ ದಲಿತ ಸಮುದಾಯದ ಪ್ರಗತಿಗೆ, ಹಿಂದುಳಿದ ಸಮುದಾಯದ ಅಭಿವೃದ್ಧಿಗೆ ಸಾವಿರ ಸಾವಿರ ಕೋಟಿ ರೂಪಾಯಿ ಖರ್ಚು ಮಾಡುತ್ತಿದ್ದೇವೆ -ಸಿಎಂ ಸಿದ್ದರಾಮಯ್ಯ

# ಬಾಲ್ಯವಿವಾಹ: ಗಂಡ, ಅತ್ತೆ, ಮಾವ, ತಂದೆ ತಾಯಿಗೆ 1 ವರ್ಷ ಕಠಿಣ ಶಿಕ್ಷೆ

• ಉದಯವಾಹಿನಿ,ಮಂಗಳೂರು

ಬಾಲಕಿಯನ್ನು ಮದುವೆಯಾದ ವ್ಯಕ್ತಿ, ಆತನ ತಂದೆ- ತಾಯಿ ಮತ್ತು ಸಂತ್ರಸ್ತ ಬಾಲಕಿಯ ತಂದೆ ತಾಯಿಗೆ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ತ್ವರಿತ ಗತಿ ವಿಶೇಷ ನ್ಯಾಯಾಲಯ- 2 (ಪೋಕ್ಸ್) ತಲಾ ಒಂದು ವರ್ಷ ಕಠಿಣ ಶಿಕ್ಷೆ ವಿಧಿಸಿದೆ.

ಬಾಲಕಿಯನ್ನು ವಿವಾಹವಾದ ಉಳ್ಳಾಲ ತಾಲ್ಲೂಕು ಮಂಜನಾಡಿ ಗ್ರಾಮದ ಮೋಟೆಪದವು ನಿವಾಸಿ ಮಹಮ್ಮದ್ ಇಮ್ಮಿಯಾಜ್, ಆತನ ತಂದೆ ಕೆ.ಐ.ಮೊಹಮ್ಮದ್, ತಾಯಿ ಮೈಮುನಾ, ಸಂತ್ರಸ್ತ ಬಾಲಕಿಯ ತಂದೆ ಬಂಟ್ವಾಳ ತಾಲ್ಲೂಕು ಫರಂಗಿಪೇಟೆ ರಾಮಲ್‌ಕಟ್ಟೆಯ ಅಬ್ದುಲ್ ಖಾದರ್ ಹಾಗೂ ಬಾಲಕಿಯ ತಾಯಿ ರಮ್ಯತ್ ಶಿಕ್ಷೆಗೆ ಒಳಗಾದವರು. ಮಹಮ್ಮದ್ ಇಮ್ಮಿಯಾಜ್ 2023ರ ಮೇ 31ರಂದು ಅಪ್ರಾಪ್ತ ವಯಸ್ಸಿನ ಬಾಲಕಿಯನ್ನು ವಿವಾಹವಾಗಿದ್ದ. ಆತನ ತಂದೆ, ತಾಯಿ ಹಾಗೂ ಸಂತ್ರಸ್ತ ಬಾಲಕಿಯ ತಂದೆ- ತಾಯಿ ಸೇರಿ ಈ ಮದುವೆ ಮಾಡಿಸಿದ್ದರು.

2023ರ ಜೂನ್ 1ರಂದು ಉಳ್ಳಾಲ ತಾಲ್ಲೂಕು ಕೈರಂಗಳ ಗ್ರಾಮದ ನಂದರಪದವಿನಲ್ಲಿರುವ ಎಸ್.ಕೆ ಮಲ್ಟಿಪರ್ಪಸ್ ಹಾಲ್‌ನಲ್ಲಿ ಔತಣಕೂಟವನ್ನು ಏರ್ಪಡಿಸಲಾಗಿತ್ತು ಅಪ್ರಾಪ್ತ ವಯಸ್ಸಿನ ಬಾಲಕಿಯನ್ನು ಮದುವೆಯಾದ ಬಗ್ಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿ ನೀಡಿದ ದೂರಿನ ಆಧಾರದಲ್ಲಿ ನಗರದ ಮಹಿಳಾ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿತ್ತು. ಠಾಣೆಯ ಇನ್‌ಸ್ಪೆಕ್ಟರ್ ರಾಜೇಂದ್ರ ಬಿ. ಅವರು ಐವರು ಆರೋಪಿಗಳ ವಿರುದ್ಧ ಲೀಂಗಿಕ ದೌರ್ಜನ್ಯ ಕಾಯ್ದೆಯಿಂದ ಮಕ್ಕಳ ರಕ್ಷಣೆ (ಪೋಕ್ಸ್) ಕಾಯ್ದೆಯ ಸೆಕ್ಷನ್ 6 () ಹಾಗೂ ಬಾಲ್ಯ ವಿವಾಹ ನಿಷೇಧ ಕಾಯ್ದೆಯ ಸೆಕ್ಷನ್ 9 (ವಯಸ್ಕ ಪುರುಷ ಅಪ್ರಾಪ್ತ ವಯಸ್ಸಿನ ಬಾಲಕಿಯನ್ನು ವಿವಾಹವಾಗುವುದು), ಸೆಕ್ಷನ್ 10 (ವಯಸ್ಕ ಪುರುಷನಿಗೆ ಅಪ್ರಾಪ್ತ ವಯಸ್ಸಿನ ಬಾಲಕಿಯನ್ನು ಮದುವೆ ಮಾಡಿ ಕೊಡುವುದು) ಹಾಗೂ ಸೆಕ್ಷನ್ 11ರ (ಬಾಲಕಿಯ ಪೋಷಕರು ವಿವಾಹಕ್ಕೆ ಸಮ್ಮತಿಸುವುದು ಹಾಗೂ ವಿಧಿಗಳನ್ನು ನಿರ್ವಹಿಸುವುದು) ಅಡಿ ನ್ಯಾಯಾಲಯಕ್ಕೆ ದೋಷಾರೋಪಣೆ ಪಟ್ಟಿಯನ್ನು ಸಲ್ಲಿಸಿದ್ದರು.

ಕಠಿಣ ಕಾರಾಗೃಹ ಶಿಕ್ಷೆ

ಬಾಲಕಿಯನ್ನು ಮದುವೆ ಮಾಡಿಕೊಟ್ಟಿದ್ದಕ್ಕೆ ಆಕೆಯ ತಂದೆ ತಾಯಿಗೆ ಬಾಲ್ಯ ವಿವಾಹ ಕಾಯ್ದೆಯ ಸೆಕ್ಷನ್ 10 ಮತ್ತು 11ರ ಅಡಿ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ತ್ವರಿತ ಗತಿ ವಿಶೇಷ ನ್ಯಾಯಾಲಯ-2ರ (ಪೋಕ್ಸ್) ನ್ಯಾಯಾಧೀಶರಾದ ಮಾನು ಕೆ.ಎಸ್ ಅವರು ತಲಾ ಒಂದು ವರ್ಷ ಕಠಿಣ ಕಾರಾಗೃಹ ಶಿಕ್ಷೆ ಹಾಗೂ ತಲಾ 5 ಸಾವಿರ (ಒಟ್ಟು 10 ಸಾವಿರ) ದಂಡ ವಿಧಿಸಿ ಆದೇಶ ಮಾಡಿದ್ದಾರೆ. ವರನ ತಂದೆ ತಾಯಿಗೆ ಬಾಲ್ಯ ವಿವಾಹ ಕಾಯ್ದೆಯ ಸೆಕ್ಷನ್ 10ರ ಅಡಿ ತಲಾ ಒಂದು ವರ್ಷ ಕಠಿಣ ಕಾರಾಗೃಹ ಶಿಕ್ಷೆ ಹಾಗೂ ತಲಾ 5 ಸಾವಿರ ದಂಡ ವಿಧಿಸಿದ್ದಾರೆ.

# ಉಚಿತ ಆರೋಗ್ಯ ಮತ್ತು ತಪಾಸಣೆ ಶಿಬಿರ ಸಮಾಲೋಚನೆ ಕಾರ್ಯಕ್ರಮದ ಕರಪತ್ರ ಬಿಡುಗಡೆ

• ಉದಯವಾಹಿನಿ, ಚಿಂಚೋಳಿ



ಉದಯವಾಹಿನಿ ಚಿತ್ರ

ತಾಲ್ಲೂಕಿನ ವಿವಿಧೆಡೆ ಕಾಂಗ್ರೆಸ್ ಪರಿಶೀಷ್ಟ ಜಾತಿ ವಿಭಾಗದ ಅಧ್ಯಕ್ಷ ಸಂತೋಷ್ ಗುತ್ತೇದಾರ ನೇತೃತ್ವದಲ್ಲಿ ಕರ್ನಾಟಕ ಸರ್ಕಾರದ ವೈದ್ಯಕೀಯ ಶಿಕ್ಷಣ ಕೌಶಲ್ಯಾಭಿವೃದ್ಧಿ ಸಚಿವ ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ ಪಾಟೀಲ ರವರ 57 ನೇ ಹುಟ್ಟುಹಬ್ಬದ ಪ್ರಯುಕ್ತ ತಿಂಗಳಿಗೊಮ್ಮೆ 05ತಿಂಗಳ ವಿವಿಧೆಡೆ ಉಚಿತ ಆರೋಗ್ಯ ಶಿಬಿರ ಆರೋಗ್ಯ ತಪಾಸಣೆ ಮತ್ತು ಸಮಾಲೋಚನೆ ಕಾರ್ಯಕ್ರಮದ ಕರಪತ್ರವನ್ನು ತಾಲ್ಲೂಕಿನ ಇರಕಪಳ್ಳಿ ಗ್ರಾಮದಲ್ಲಿ ಡಾ.ಶರಣ ಪ್ರಕಾಶ ಪಾಟೀಲ,ಕಲಬುರ್ಗಿ ಸಂಸದರು ರಾಧಕೃಷ್ಣ ದೊಡ್ಡಮನಿರವರು ಬಿಡುಗಡೆಗೊಳಿಸಿದರು.

ಕಾಂಗ್ರೆಸ್ ಎಸ್ಸಿ ಘಟಕದ ಅಧ್ಯಕ್ಷ ಸಂತೋಷ ಗುತ್ತೇದಾರ ಮಾತನಾಡಿ ಪ್ರತಿ ವರ್ಷದಂತೆ ಈ ವರ್ಷವು ಕೂಡ ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ ಪಾಟೀಲ ರವಯ ಹುಟ್ಟುಹಬ್ಬದ ಅಂಗವಾಗಿ ಐದು ತಿಂಗಳ ಮುಂಚಿತವಾಗಿ ತಾಲ್ಲೂಕಿನ ಐದು ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಕೇಂದ್ರ ಸ್ಥಾನಗಳಲ್ಲಿ ಸಾರ್ವಜನಿಕ ಹಿತದೃಷ್ಟಿಯಿಂದ ಅನುಕೂಲಕ್ಕಾಗಿ ಉಚಿತ ಆರೋಗ್ಯ ಶಿಬಿರ ತಪಾಸಣೆ ಹಮ್ಮಿಕೊಂಡು ಬಡವರಿಗೆ ಮಧ್ಯಮವರ್ಗದವರಿಗೆ ಅನುಕೂಲ ಕಲ್ಪಿಸಲು ಹಾಗೂ ಸಚಿವರಿಗೆ ಆಯುಷ್ಯ ಆರೋಗ್ಯ ಭಾಗ್ಯ ದೊರಕಲಿ ಬಡವರ ಕೃಪೆ ಆಶೀರ್ವಾದ ಸಚಿವರ ಮೇಲೆ ಇರಲಿವೆಂದು ಆಚರಿಸುತ್ತಿದ್ದು ಇದರ ಸದುಪಯೋಗ ಎಲ್ಲೋರು ಪಡೆದುಕೊಳ್ಳಬೇಕು ಎಂದರು.

ಡಾ.ಶರಣಪ್ರಕಾಶ ಪಾಟೀಲ ಹುಟ್ಟುಹಬ್ಬದ ಅಂಗವಾಗಿ

ಈ ಸಂದರ್ಭದಲ್ಲಿ ಬಾಬುರಾವ ಪಾಟೀಲ,ನಾಗೇಶರಾವ ಮಾಲಿ ಪಾಟೀಲ,ಬಸವರಾಜ ಪಾಟೀಲ ಊಡಗಿ,ಶಿವಶರಣರೆಡ್ಡಿ ಪಾಟೀಲ,ಲಕ್ಷ್ಮಣ ಆವುಂಟಿ,ಕರ್ಚಖೇಡ ಗ್ರಾ.ಪಂ.ಅಧ್ಯಕ್ಷ ಬಾಬುಮಿಯ್ಯ ಮೋಮೀನ್,ಲಿಂಗಶೆಟ್ಟಿ ತಟ್ಟೆಪಳ್ಳಿ,ವಿಲಾಸ್ ಗೌತಮ್,ಮೇಘರಾಜ ರಾಠೋಡ,ನಾಗಾರ್ಜುನ ಕಟ್ಟಿ,ದಯಾನಂದ ಹಿತ್ತಲ,ಕರೀಮ್ ಸೇರಿದಂತೆ ಇನ್ನಿತರಿದ್ದರು.

# ಚಾಲಕರ ಮೇಲೆ ಬೇಕಿದೆ ಶಾಲಾ ಆಡಳಿತ ಮಂಡಳಿ ನಿಗಾ

• ಕೆಲವು ಅಪರೂಪದ ಪ್ರಕರಣಗಳಲ್ಲಿ ಚಾಲಕ ಮದ್ಯಪಾನ ಮಾಡಿರುವ ಕುರಿತೂ ಆರೋಪಗಳು ಕೇಳಿ ಬಂದಿವೆ

• ಉದಯವಾಹಿನಿ ಹುಲಸೂರ

ವಾಹನಗಳಲ್ಲಿ ಶಾಲಾ ಮಕ್ಕಳನ್ನು ಕರೆದುಕೊಡು ಹೋಗೋಕು 6 ಹಲವಾರು ನಿಯಮಗಳಿದ್ದರೂ ಪಟ್ಟಣದಲ್ಲಿ ಅವುಗಳನ್ನು ಉಲ್ಲಂಘಿಸಲಾಗುತ್ತಿದೆ ಎಂಬ ಆರೋಪಗಳು ಪದೇಪದೇ ಕೇಳಿ ಬರುತ್ತಲೇ ಇದೆ. ಪಟ್ಟಣದಲ್ಲಿ ಹಲವು ಶಾಲಾ ವಾಹನಗಳು ಇವೆ. ಆಟೊ, ವ್ಯಾನ್, ಟೆಂಪೊ, ಟ್ರಾವೆಲರ್, ಮಿನಿ ಬಸ್‌ಗಳಲ್ಲಿಯೂ ಪೋಷಕರು ಮಕ್ಕಳನ್ನು ಶಾಲೆಗೆ ಕಳುಹಿಸುತ್ತಾರೆ.

ಕೆಲವು ಅಪರೂಪದ ಪ್ರಕರಣಗಳಲ್ಲಿ ಚಾಲಕ ಮದ್ಯಪಾನ ಮಾಡಿರುವ ಕುರಿತೂ ಆರೋಪಗಳು ಕೇಳಿ ಬಂದಿವೆ. ಏಕಮುಖ ಸಂಚಾರವಿರುವ ರಸ್ತೆಗಳಲ್ಲೂ ವಿರುದ್ಧ ದಿಕ್ಕಿನಿಂದ ಶಾಲಾ ವಾಹನಗಳನ್ನು ಚಲಾಯಿಸಿಕೊಂಡು ಬರುವ ಪ್ರಸಂಗಗಳೂ ನಗರದ ಕೆಲವೆಡೆ ನಡೆದಿವೆ ಎನ್ನುತ್ತಾರೆ ಸಾರ್ವಜನಿಕರು. ಶಾಲಾ ವಾಹನಗಳ ನೋಂದಣಿ ಪ್ರಮಾಣ ಪತ್ರದ ಜತೆ ಫಿಟ್‌ನೆಸ್ ಸರ್ಟಿಫಿಕೆಟ್ ಕೂಡಾ ಕಡ್ಡಾಯ 15 ವರ್ಷ ಅವಧಿ ಮಿರಿದ ವಾಹನಗಳನ್ನು ಬಳಸಬಾರದು. ವಿಮೆ ಮಾಡಿಸಿರಬೇಕು, ಚಾಲಕರ ಹಿನ್ನೆಲೆ ಅರಿತಿರಬೇಕು ಎಂಬ ಸೂಚನೆಯೂ ಇದೆ.

ಪಟ್ಟಣದ ಬಹುತೇಕ ರಸ್ತೆಗಳು ಹೊಂಡ ಬಿದ್ದು ಶೋಚನೀಯ ಸ್ಥಿತಿಯಲ್ಲಿವೆ. ಇಂತಹ ರಸ್ತೆಗಳಲ್ಲಿ ವಾಹನಗಳ ಅತಿ ವೇಗದಿಂದ ಸಂಚರಿಸಿದರೆ ಅಪಾಯ ಕಟ್ಟಿಟ್ಟ ಬುತ್ತಿ. ಅದರಲ್ಲೂ ಶಾಲಾ ಮಕ್ಕಳನ್ನು ಕರೆದೊಯ್ಯುವ ವಾಹನಗಳ ಚಾಲಕರು ಸ್ವಲ್ಪ ಎಚ್ಚರಿಕೆ ತಪ್ಪಿದರೂ ಮಕ್ಕಳಿಗೆ ಅಪಾಯವುಂಟಾಗುವ ಸಾಧ್ಯತೆ ಇದೆ. ನಿಗದಿತ ಸಾಮರ್ಥ್ಯಕ್ಕಿಂತ ಹೆಚ್ಚು ಮಕ್ಕಳನ್ನು ಕೂರಿಸಬಾರದು.

ಶಾಲಾ ವಾಹನಗಳಲ್ಲಿ ಸಿಸಿಟಿವಿ ಕ್ಯಾಮೆರಾ, ಜಿಪಿಎಸ್ ಕಡ್ಡಾಯವಾಗಿ ಅಳವಡಿಸಬೇಕೆಂಬ ನಿಯಮವಿದೆ. ಶಾಲಾ ಮಕ್ಕಳನ್ನು ಕರೆದೊಯ್ಯುವಾಗ ಮತ್ತು ಮನೆಗೆ ಬಿಡುವಾಗ ಸಹಾಯಕರೊಬ್ಬರು ಇರಬೇಕು ಎಂಬ ಸೂಚನೆಗಳಿದ್ದರೂ ಕೆಲವೆಡೆ ಇವುಗಳು ಪಾಲನೆಯಾಗುತ್ತಿಲ್ಲ ಎಂಬ ಆರೋಪಗಳಿವೆ. ಶಾಲಾ ಮಕ್ಕಳನ್ನು ಕರೆದೊಯ್ಯುವ ಎಲ್ಲಾ ವಾಹನಗಳನ್ನು ಸಂಬಂಧಪಟ್ಟವರು ತಪಾಸಣೆ ಮಾಡಬೇಕು. ನಿಯಮ ಮೀರಿರುವುದು ಕಂಡು ಬಂದರೆ ಅಂತಹ ಚಾಲಕರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕೆಂದು ಪಾಲಕರು ಆಗ್ರಹಿಸಿದ್ದಾರೆ. ನಿಯಮ ಉಲ್ಲಂಘನೆಯ ಪ್ರಕರಣಗಳಲ್ಲಿ ಚಾಲಕರ ವಿರುದ್ಧ ಕ್ರಮ ಕೈಗೊಂಡರೆ ಆ ವಿಚಾರವನ್ನು ಸಂಬಂಧಪಟ್ಟ ಶಾಲೆಗಳ ಅಧಿಕಾರಿಗಳ ಗಮನಕ್ಕೆ ತರಲಾಗುವುದು ಶಿವಾನಂದ ಮೇತ್ರಿ ತಹಶೀಲ್ದಾರ್ ಶಾಲೆಯವರ ಅಧೀನದಲ್ಲಿರುವ ಬಸ್‌ಗಳ ಚಾಲಕರು ನಿಯಮ ಮೀರಿದ್ದು ಕಂಡು ಬಂದರೆ ಶಾಲೆಯವರನ್ನೇ ಹೊಣೆಗಾರರನ್ನಾಗಿ ಮಾಡಲಾಗುವುದು.

ಶಾಲಾ ಬಸ್‌ಗಳನ್ನು ನಿಗದಿತ ವೇಗದ ಮಿತಿಗಿಂತ ಹೆಚ್ಚು ವೇಗದಲ್ಲಿ ಚಲಾಯಿಸಬಾರದು. ಶಾಲಾ ಬಸ್‌ಗಳಿಗೆ ಜಿಪಿಎಸ್ ಅಳವಡಿಸಿ ವಾಹನಗಳು ಚಲಿಸುವ ವೇಗದ ಬಗ್ಗೆ ಶಾಲೆಯವರು ನಿಗಾವಹಿಸಬೇಕು. ಆಟೊಗಳಲ್ಲೂ ಸಾಮರ್ಥ್ಯಕ್ಕಿಂತ ಹೆಚ್ಚು ವಿದ್ಯಾರ್ಥಿಗಳನ್ನು ಕರೆದುಕೊಂಡು ಹೋಗುವುದು ಗಮನಕ್ಕೆ ಬಂದರೆ ಅಂತಹವರ ಮೇಲೆ ಕ್ರಮ ಕೈಗೊಳ್ಳಲಾಗುವುದು.

ಈ ಕುರಿತು ಇನ್ನೊಮ್ಮೆ ಸಭೆ ಕರೆದು ಚರ್ಚಿಸಲಾಗುವುದು ಆಕಾಶ ಖಂಡಾಳೆ ಸಾಮಾಜಿಕ ಕಾರ್ಯಕರ್ತ ಶಾಲಾ ಮಕ್ಕಳನ್ನು ಕರೆದೊಯ್ಯುವ ರಿಕ್ಷಾ ಚಾಲಕರು ಅತಿವೇಗದಿಂದ ಚಲಾಯಿಸುತ್ತಿದ್ದಾರೆ ಎಂಬ ಆರೋಪಗಳು ಕೇಳಿ ಬರುತ್ತಿವೆ. ಸಂಬಂಧಪಟ್ಟವರು ರಿಕ್ಷಾ ಚಾಲಕರಲ್ಲಿ ಕಾನೂನಿನ ಅರಿವು ಮೂಡಿಸುವ ಕೆಲಸ ಮಾಡಬೇಕು. ಶಾಲಾ ಮಕ್ಕಳ ಸುರಕ್ಷತೆ ವಿಚಾರದಲ್ಲಿ ಸಂಬಂಧಪಟ್ಟ ಇಲಾಖೆಯವರು ಹೆಚ್ಚಿನ ಗಮನ ಹರಿಸಬೇಕು ಫಯಾಜ್ ಪಟೇಲ್ ಇಟ್ಬಾಲ್ ಪಟೇಲ್ ಶಿಕ್ಷಣ ಸಂಸ್ಥೆಯ ಮುಖ್ಯಸ್ಥ ನಮ್ಮ ಶಾಲೆಯಲ್ಲಿ ಶಾಲಾ ಮಕ್ಕಳನ್ನು ಶಾಲೆಗೆ ಕರೆದುಕೊಂಡು ಬರಲು ಮತ್ತು ಮನೆಗೆ ಬಿಡಲು ಶಾಲಾ ವಾಹನ ಬಳಸಲಾಗುತ್ತಿದೆ. ಅನುಭವಿ ವಾಹನ ಚಾಲಕರನ್ನಷ್ಟೇ ಈ ಕೆಲಸಕ್ಕೆ ನಿಯೋಜಿಸುತ್ತಿದ್ದೇವೆ.

ಪ್ರತಿವರ್ಷ ವಾಹನ ಚಾಲಕರ ಸಭೆ ಕರೆದು ಮಕ್ಕಳ ಸುರಕ್ಷತೆ ಸಂಬಂಧಪಟ್ಟ ಕಟ್ಟುನಿಟ್ಟಿನ ಸೂಚನೆಗಳನ್ನು ನೀಡುತ್ತೇವೆ. ಯಾವುದೇ ಕಾರಣಕ್ಕೂ ಅಧಿಕ ಸಂಖ್ಯೆಯಲ್ಲಿ ಮಕ್ಕಳನ್ನು ಕೊಂಡೊಯ್ಯಲು ಬಿಡುವುದಿಲ್ಲ. ಮಕ್ಕಳ ಸಂಖ್ಯೆ ಜಾಸ್ತಿ ಇದ್ದರೆ ಎರಡು ಟ್ರಿಪ್ ಕರೆದೊಯ್ಯಲು ಸೂಚಿಸುತ್ತೇವೆ. ಮಕ್ಕಳ ಸುರಕ್ಷತೆ ವಿಚಾರದಲ್ಲಿ ಯಾವುದೇ ರಾಜಿ ಮಾಡಿಕೊಳ್ಳುವುದಿಲ್ಲ.

ಶಾಲೆಗೆ ಮಕ್ಕಳನ್ನು ಕರೆದುಕೊಂಡು ಹೋಗವ ವಾಹನಗಳನ್ನು ಅತಿ ವೇಗ ಮತ್ತು ನಿರ್ಲಕ್ಷದಿಂದ ಚಾಲನೆ ಮಾಡುವುದು ಕಂಡುಬಂದರೆ ಚಾಲಕರ ವಿರುದ್ಧ ಪ್ರಕರಣ ದಾಖಲಿಸಲಾಗುವುದು. ನಿಯಮಗಳ ಉಲ್ಲಂಘನೆ ಕಂಡು ಬಂದರೆ ಚಾಲನಾ ಪರವಾನಗಿ ಅಥವಾ ಆರ್‌ಸಿ ಅಮಾನತು ಮಾಡಲಾಗುವುದು
-ಜಿ.ಕೆ.ಬಿರಾದಾರ, ಆರ್‌ಟಿಒ



ಉದಯವಾಹಿನಿ ಚಿತ್ರ

## ಮಕ್ಕಳ ಸುರಕ್ಷತೆಯ ಪ್ರಶ್ನೆ

ಮಕ್ಕಳನ್ನು ಕರೆದೊಯ್ಯುವ ವಾಹನಗಳು ಸುರಕ್ಷತೆಗೆ ಆದ್ಯತೆ ನೀಡಬೇಕು ಎಂಬ ಸೂಚನೆಗಳಿದ್ದರೂ ಇಂತಹ ವಾಹನಗಳು ಅಪಘಾತಕ್ಕೆ ಒಳಗಾದಾಗ ಮಕ್ಕಳ ಸುರಕ್ಷತೆಯ ಪ್ರಶ್ನೆಗಳು ಕಾಡುತ್ತವೆ.ಅತಿ ವೇಗದಿಂದ ಅಪಘಾತಗಳು ಸಂಭವಿಸುತ್ತಿವೆ ಎಂಬ ಆರೋಪಗಳು ಕೂಡ ಸಾರ್ವಜನಿಕ ವಲಯದಿಂದ ಕೇಳಿ ಬರುತ್ತಲೇ ಇವೆ.

ಅತಿ ವೇಗದಿಂದ ಸಂಚರಿಸಿದರೆ ಅಪಾಯ ಕಟ್ಟಿಟ್ಟ ಬುತ್ತಿ

## ಮಿನಿ ನ್ಯೂಸ್

### ಡಿ.17ರಂದು ವಿದ್ಯುತ್ ವ್ಯತ್ಯಯ

• ಉದಯವಾಹಿನಿ ಚಿತ್ರದುರ್ಗ

ಚಿತ್ರದುರ್ಗ ವಿಭಾಗ ವ್ಯಾಪ್ತಿಯಲ್ಲಿರುವ 66/11 ಕೆ.ವಿ ಚಿತ್ರದುರ್ಗ ವಿ.ವಿ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕಾರ್ಯಕ್ಕಾಗಿ ಈ ವಿ.ವಿ ಕೇಂದ್ರಕ್ಕೆ ಮಾರ್ಗ ಮುಕ್ತತೆ ನೀಡಬೇಕಾಗಿರುವುದರಿಂದ ಈ ವಿ.ವಿ ಕೇಂದ್ರದಿಂದ ವಿದ್ಯುತ್ ಸರಬರಾಜಾಗುವ ಎಲ್ಲಾ ಎನ್.ಜೆ.ವೈ ಮತ್ತು ಕೃಷಿ 11 ಕೆ.ವಿ ಮಾರ್ಗಗಳಲ್ಲಿ ಇದೇ ಡಿ.17ರಂದು ಬೆಳಿಗ್ಗೆ 10 ರಿಂದ ಸಂಜೆ 5 ರವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ.

**ವಿದ್ಯುತ್ ಅಡಚಣೆಯಾಗುವ ಪ್ರದೇಶಗಳು:** ಚಿತ್ರದುರ್ಗ ನಗರ, ಕೆಳಕೋಟೆ, ಬ್ಯಾಂಕ್ ಕಾಲೋನಿ, ಗೋನೂರು, ಬೆಳಘಟ್ಟ, ಜಿ.ಆರ್ ಹಳ್ಳಿ, ವಿದ್ಯಾನಗರ, ಸೀಬಾರ, ಸಿ.ಜಿ.ಹಳ್ಳಿ, ಜೆ.ಸಿ.ಆರ್ ಬಡಾವಣೆ, ಚಂದ್ರವಳ್ಳಿ, ಪಿ.ಕೆ.ಹಳ್ಳಿ, ಮಿಲ್ ಏರಿಯಾ, ಕೆ.ಡ್ಯೂ.ಎಸ್.ಎಸ್.ಬಿ, ಯೂನಿವರ್ಸಿಟಿ ಮತ್ತು ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಗ್ರಾಹಕರು ಸಹಕರಿಸಬೇಕು ಎಂದು ಬೆಸ್ಕಾಂ ಚಿತ್ರದುರ್ಗ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ತಿಳಿಸಿದ್ದಾರೆ.

### ಕಾಫಿನಾಡಿನಲ್ಲಿ ಕಾಡಾನೆ ನೈಟ್ ರೌಂಡ್ಸ್

• ಉದಯವಾಹಿನಿ ಚಿಕ್ಕಮಗಳೂರು

ಕಾಫಿನಾಡಿನಲ್ಲಿ ಕಾಡಾನೆಗಳ ಗೋಳು ಕಡಿಮೆಯಾದಂತೆ ಕಾಣುತ್ತಿಲ್ಲ, ಭಾನುವಾರ (ಡಿ.15) ತಡರಾತ್ರಿ ಚಿಕ್ಕಮಗಳೂರು ಜಿಲ್ಲೆಯ ಕೆ.ಆರ್.ಪೇಟೆ ಗ್ರಾಮದ ಮುಖ್ಯ ರಸ್ತೆಯಲ್ಲಿ ಕಾಡಾನೆಯೊಂದು ನಡೆದುಕೊಂಡು ಹೋಗುತ್ತಿರುವುದು ಕಂಡುಬಂದಿದೆ. ಕಳೆದ ಹಲವು ದಿನಗಳಿಂದ ಕಾಡಾನೆ ಹಾವಳಿ ಜೋರಾಗಿದ್ದು ಭಾನುವಾರ ತಡರಾತ್ರಿ ಸುಮಾರು 11:30ರ ಸುಮಾರಿಗೆ ಕಾಡಾನೆಯೊಂದು ರಸ್ತೆಯಲ್ಲಿ ಸಂಚರಿಸುವ ದೃಶ್ಯ ಅಲ್ಲಿನ ಸಿಸಿ ಕ್ಯಾಮರಾದಲ್ಲಿ ಸೆರೆಯಾಗಿದೆ. ಕಾಡಾನೆ ಕಂಡು ನಾಯಿಯೊಂದು ಬೊಗಳುತ್ತಿದ್ದು ಇದನ್ನು ಕಂಡ ಗ್ರಾಮಸ್ಥರು ಮನೆಯಿಂದ ಹೊರ ಬಂದು ನೋಡಿದಾಗ ಕಾಡಾನೆ ಕಂಡು ಬಂದಿದೆ ಇದರಿಂದ ಗಾಬರಿಗೊಂಡ ಮನೆಯವರು ಅರಣ್ಯ ಇಲಾಖೆಗೆ ಮಾಹಿತಿ ನೀಡಿ ಕಾಡಾನೆಯನ್ನು ಸ್ಥಳಾಂತರ ಮಾಡುವಂತೆ ಆಗ್ರಹಿಸಿದ್ದಾರೆ. ಹಾಸನದಿಂದ ನಿರಂತರವಾಗಿ ಕಾಡಾನೆಗಳು ಚಿಕ್ಕಮಗಳೂರಿನತ್ತ ಆಗಮಿಸುತ್ತಿವೆ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ.

### ಹೊತ್ತಿ ಉರಿದ ಕಾರು: ಮಹಿಳೆ ಪಾರು

• ಉದಯವಾಹಿನಿ ಮಂಗಳೂರು

ಮಂಗಳೂರಿನಲ್ಲಿ ಮತ್ತೊಂದು ಕಾರು ಬೆಂಕಿಗಾಹುತಿಯಾಗಿರುವ ಘಟನೆ ನಗರದ ಸಿಟಿ ಸೆಂಟರ್ ಸಮೀಪ ಸೋಮವಾರ (ಡಿ.16) ಬೆಳಿಗ್ಗೆ ಸಂಭವಿಸಿದೆ. ಮಹಿಳೆಯೊಬ್ಬರು ಚಲಾಯಿಸುತ್ತಿದ್ದ ಕಾರನ್ನು ಸಿಟಿ ಸೆಂಟರ್ ಬಳಿ ಇರುವ ಫ್ಲಾಟ್ ಬಳಿ ನಿಲ್ಲಿಸಿದ ವೇಳೆ ಕಾರಿನಲ್ಲಿ ಹೊಗೆ ಕಾಣಿಸಿಕೊಂಡಿದೆ ಇದಾದ ಕೆಲವೇ ಹೊತ್ತಿನಲ್ಲಿ ಕಾರು ಬೆಂಕಿಗಾಹುತಿಯಾಗಿದೆ ಎಂದು ಹೇಳಲಾಗಿದೆ.

ಸ್ಥಳೀಯರು ಅಗ್ನಿಶಾಮಕಕ್ಕೆ ಕರೆ ಮಾಡಿದ್ದು ಘಟನಾ ಸ್ಥಳಕ್ಕೆ ಬಂದ ಅಗ್ನಿಶಾಮಕ ತಂಡ ಬೆಂಕಿ ನಂದಿಸುವಲ್ಲಿ ಯಶಸ್ವಿಯಾಗಿದ್ದಾರೆ. ಘಟನೆಯಲ್ಲಿ ಯಾವುದೇ ಸಾವು ನೋವು ಸಂಭವಿಸಿಲ್ಲ. ಇತ್ತೀಚೆಗೆ ಲೇಡಿಹಿಲ್, ಕದ್ರಿ, ಅಡ್ಯಾರ್ ಮತ್ತು ಸುರತ್ಕಲ್ ಗಳಲ್ಲಿ ಕಾರುಗಳು ಬೆಂಕಿಗಾಹುತಿಯಾದ ಘಟನೆಗಳು ಸಂಭವಿಸಿತ್ತು.

### ನದಿಗೆ ಹಾರಿ ಆತ್ಮಹತ್ಯೆಗೆ ಶರಣಾದ ಮಹಿಳೆಯ ಶವ ಪತ್ತೆ


• ಉದಯವಾಹಿನಿ ಸಿರುಗುಪ್ಪ

ನದಿಗೆ ಹಾರಿ ಆತ್ಮಹತ್ಯೆಗೆ ಶರಣಾದ ಮಹಿಳೆಯ ಶವ ಸೋಮವಾರ ಪತ್ತೆಯಾಗಿರುವ ಘಟನೆ ತಾಲ್ಲೂಕಿನ ಕೆಂಚನಗುಡ್ಡ ಗ್ರಾಮದ ಹತ್ತಿರ ಹರಿಯುತ್ತಿರುವ ತುಂಗಭದ್ರ ನದಿಯಲ್ಲಿರುವ ಪವರ್‌ಪ್ಲಾಂಟ್ ಸಮೀಪ ಸಂಭವಿಸಿದೆ. ನಗರದ ಬಿ.ಎಂ.ಅರುಣ (22) ಎಂಬ ಮಹಿಳೆಯೇ ನದಿಗೆ ಹಾರಿ ಅತ್ಮಹತ್ಯೆ ಮಾಡಿಕೊಂಡ ಮಹಿಳೆ.

ಸಿರುಗುಪ್ಪ ಪೊಲೀಸ್‌ಠಾಣಾ ವ್ಯಾಪ್ತಿಯಲ್ಲಿ ಬಾನುವಾರ(ಡಿ.16) ಸಂಜೆ ಮಹಿಳೆ ನದಿಗೆ ಹಾರಿದ್ದು ಅಗ್ನಿಶಾಮಕ ದಳದ ಸಿಬ್ಬಂದಿ ಮತ್ತು ಪೊಲೀಸರು ಮಹಿಳೆಯ ಶವಕ್ಕಾಗಿ ಭಾನುವಾರ ರಾತ್ರಿವರೆಗೂ ಕಾರ್ಯಾಚರಣೆ ನಡೆಸಿದ್ದು. ಮಹಿಳೆಯ ಶವ ಪತ್ತೆಯಾಗಿರಲಿಲ್ಲ. ಸೋಮವಾರ ಬೆಳಗಿನ ಜಾವ ನಡೆಸಿದ ಸತತ ಕಾರ್ಯಾಚರಣೆಯಲ್ಲಿ ಮಹಿಳೆಯ ಶವ ದೊರೆತ್ತಿದ್ದು, ಶವವನ್ನು ಕುಟುಂಬದ ಸದಸ್ಯರಿಗೆ ಹಸ್ತಾಂತರ ಮಾಡಲಾಗಿದೆ. ಈ ಬಗ್ಗೆ ಸಿರುಗುಪ್ಪ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ನಮ್ಮ ನಾಯಕರು ಗಮನ ಹರಿಸಲಿ

• ಉದಯವಾಹಿನಿ ಶಿವಮೊಗ್ಗ



ನಮ್ಮಲ್ಲಿ ಹೈಕಮಾಂಡ್ ಇದೆ. ರಾಜ್ಯಾಧ್ಯಕ್ಷ ಬದಲಾವಣೆ ವಿಚಾರವನ್ನು ಅದು ನೋಡಿಕೊಳ್ಳುತ್ತದೆ. ಸದ್ಯಕ್ಕೆ ವಿಜಯೇಂದ್ರ ಅಧ್ಯಕ್ಷರಾಗಿದ್ದಾರೆ. ವಿಜಯೇಂದ್ರ ಅವರು ರಾಜ್ಯಾಧ್ಯಕ್ಷರಾಗಿ ದಕ್ಷ ನಾಯಕರಾಗಿ ಸಂಘಟನೆ ಮಾಡುತ್ತಿದ್ದಾರೆ ಎಂದು ಶಿವಮೊಗ್ಗದಲ್ಲಿ ಸಂಸದ ಬಿ.ವೈ.ರಾಘವೇಂದ್ರ ಹೇಳಿದರು. ಸೋಮವಾರ (ಡಿ.16) ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜನವರಿಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬದಲಾಗುತ್ತಾರೆಂಬ ಕುಮಾರ್ ಬಂಗಾರಪ್ಪ ಹೇಳಿಕೆಗೆ ಪ್ರತಿಕ್ರಿಯೆ ನೀಡಿ, ಬರುವಂತಹ ದಿನಗಳಲ್ಲಿ ಕಾರ್ಯಕರ್ತರ ಚುನಾವಣೆಗಳು ಜಿಲ್ಲಾ ಪಂಚಾಯತ್ ಚುನಾವಣೆಗಳು ಬರುತ್ತಿದೆ. ಈ ಸಂದರ್ಭದಲ್ಲಿ ನಾಲ್ಕು ಗೋಡೆ ಮಧ್ಯೆ ಮಾತಾಡಬೇಕು. ಈ ದಿಕ್ಕಿನಲ್ಲಿ ನಮ್ಮ ನಾಯಕರು ಗಮನ ಹರಿಸಬೇಕು ಎಂದರು.


70 ವರ್ಷಗಳ ಶರಾವತಿ ಯೋಜನೆಯ ಸಂತ್ರಸ್ತರಿಗೆ ಭೂಮಿಯನ್ನು ಡಿ ರೀಸರ್ವ್ ಮಾಡಲು 50-60 ವರ್ಷದಿಂದ ಚರ್ಚೆಯಲ್ಲಿದೆ. ನ್ಯಾಯಯುತವಾಗಿ ಯಾರು ಪ್ರಯತ್ನ ಮಾಡಿರಲಿಲ್ಲ. ಯಡಿಯೂರಪ್ಪನವರ ನೇತೃತ್ವದಲ್ಲಿ ನಮ್ಮ ನಾಯಕರ ನಿಯೋಗ ಅರಣ್ಯ ಸಚಿವರನ್ನು ಭೇಟಿ ಮಾಡಿ ಮನವಿ ಕೊಟ್ಟಿದ್ದೆವು. ಅದಾದ ನಂತರ ಬಿಜೆಪಿ ಸರ್ಕಾರದ ಅಧಿಕಾರಾವಧಿ ಮುಗಿದು ಹೋಗಿತ್ತು. ವಿಶ್ವಾಸಗಳೇ ಕಳೆದುಕೊಳ್ಳುವ ದಿನಗಳು ಸಂದರ್ಭದಲ್ಲಿ ಸಂತಸದ ದಿನಗಳು ಬರುತ್ತಿದೆ. ಸರ್ವೋಚ್ಚ ನ್ಯಾಯಲಯ ಕೂಲ ರೈತರ ಪರ ನಿಲುವು ತೋರಿದೆ ಸಂಸತ್ತಿನಲ್ಲಿ ಸಹ ಶರಾವತಿ ಸಂತ್ರಸ್ತರ ಪರವಾಗಿ ಮಾತಾಡಿದ್ದೇನೆ. ರೈತರಿಗೆ ಆದಷ್ಟು ಬೇಗ ನ್ಯಾಯ ಒದಗಿಸಲು ನಮ್ಮ ನಿಯೋಗ ಸಚಿವರನ್ನು ಭೇಟಿ ಮಾಡಿ ಬಂದಿದ್ದೇವೆ ಎಂದರು. ಕೇಂದ್ರದ ಸೂಚನೆ ಮೆರೆಗೆ ರಾಜ್ಯ ಸರ್ಕಾರ ಐಎ ಹಾಕಿದೆ. ರಾಜ್ಯ ಸರ್ಕಾರ ನಮ್ಮ ಕರ್ತವ್ಯ ಮುಗಿಯಿತೆಂದು ಸುಮ್ಮನೆ ಕೂರಬಾರದು. ಶರಾವತಿ ಸಂತ್ರಸ್ತರಿಗೆ ಭೂಮಿ ಕೊಡುವ ಕೆಲಸ ಐತಿಹಾಸಿಕವಾಗಲಿದೆ. ಕೇಂದ್ರ ಅರಣ್ಯ ಸಚಿವರಿಗೆ ನಾವು ಅಭಿನಂಧನೆ ಸಲ್ಲಿಸುತ್ತೇನೆ ಎಂದರು.

# ಪಾಕಿಸ್ತಾನೀಯರು ಹೆಚ್ಚು ಗೂಗಲ್ ಸರ್ಚ್ ಮಾಡಿದ ಭಾರತದ ಟಾಪಿಕ್ಸ್

## ಭಾರತೀಯ ಕ್ರಿಕೆಟ್, ಒಟಿಟಿ ಶೋಗಳು, ಭಾರತದ ಸಿನಿಮಾಗಳು, ಭಾರತೀಯ ಖಾದ್ಯಗಳ ರೆಸಿಪಿ ಇತ್ಯಾದಿಗಳ ಬಗ್ಗೆ ಹೆಚ್ಚು ಹುಡುಕಾಟ

**ಕರಾಚಿ:** ಕೆಲವು ಜನರಿಗೆ ನಮ್ಮನೇಲಿ ಏನು ನಡೀತಾ ಇದೆ ಎಂಬುದಕ್ಕಿಂತ ನೆರೆಮನೆಯಲ್ಲಿ ಏನು ನಡೀತಾ ಇದೆ ಎಂಬುದನ್ನು ತಿಳಿಯಲು ಉತ್ಸುಕರಾಗಿರುತ್ತಾರೆ. ಬೇರೆ ಮನೆಯಲ್ಲಿ ನಡೆಯುವ ಘಟನೆಗಳೇ ಅವರಿಗೆ ಹೆಚ್ಚು ಪ್ರಿಯವಾಗಿರುತ್ತವೆ. ಅದರಲ್ಲೂ ವಿಶೇಷವಾಗಿ ತಮ್ಮ ಕಾಂಪಿಟೇಟರ್ ಗಳ ಬಗ್ಗೆ ತಿಳಿಯಲು ಇನ್ನೂ ಹೆಚ್ಚು ಉತ್ಸುಕರಾಗಿರುತ್ತಾರೆ.

ಯಾಕೆ ಈ ಮಾತು ಹೇಳಬೇಕಾಯಿತು ಎಂದರೆ, 2024ರಲ್ಲಿ ಪಾಕಿಸ್ತಾನೀಯರು ಯಾವ ವಿಚಾರಗಳ ಬಗ್ಗೆ ಗೂಗಲ್ ಸರ್ಚ್ ಇಂಜಿನ್ ನಲ್ಲಿ ಅತಿ ಹೆಚ್ಚು ಹುಡುಕಾಟ ನಡೆಸಿದ್ದಾರೆಂಬ ಪಟ್ಟಿಯೊಂದು ಬಿಡುಗಡೆಯಾಗಿದೆ. ಆ ದೇಶದ ಜನರು ನಡೆಸಿದ ಟಾಪ್ ಸರ್ಚ್‌ಗಳಲ್ಲಿ ಭಾರತಕ್ಕೆ ಸಂಬಂಧಿಪಟ್ಟಿರುವ ವಿಚಾರಗಳೇ ಅಗ್ರಸ್ಥಾನದಲ್ಲಿವೆಯಂತೆ!




ಭಾರತಕ್ಕೆ ಸಂಬಂಧಿಸಿದಂತೆ ಒಟ್ಟು ಆರು ವಿಚಾರಗಳ ಬಗ್ಗೆ ಪಾಕಿಸ್ತಾನೀಯರು ಹೆಚ್ಚು ಹುಡುಕಾಟ ನಡೆಸಿದ್ದಾರೆ.

ಅವುಗಳೆಂದರೆ, ಭಾರತೀಯ ಕ್ರಿಕೆಟ್, ಭಾರತೀಯ ವ್ಯಕ್ತಿಗಳು, ಭಾರತೀಯ ಸಿನಿಮಾ ಹಾಗೂ ಡ್ರಾಮಾ, ಭಾರತದ ವಿಚಾರಗಳ ಬಗ್ಗೆ How - to, ಭಾರತೀಯ ಅಡುಗೆ ರೆಸಿಪಿಗಳು ಹಾಗೂ ಟೆಕ್ನಾಲಜಿ. ಇನ್ನು, ಯಾವ ಸಿನಿಮಾಗಳ ಬಗ್ಗೆ, ಯಾವ ಟಿವಿ ಶೋಗಳ ಬಗ್ಗೆ ಹುಡುಕಾಟ ನಡೆಸಿದ್ದಾರೆಂದು ಸ್ವಲ್ಪ ಕೆದಕಿದರೆ ಮತ್ತಷ್ಟು ಕುತೂಹಲಕಾರಿ ವಿಷಯಗಳು

- ಪಾಕಿಸ್ತಾನೀಯರು 2024ರಲ್ಲಿ ಅತಿ ಹೆಚ್ಚಾಗಿ ನಡೆಸಿದ ಗೂಗಲ್ ಸರ್ಚ್ ಯಾವುದು?,
- ಗೂಗಲ್ ಸಂಸ್ಥೆ ಬಿಡುಗಡೆ ಮಾಡಿದ ಲಿಸ್ಟ್ ನಲ್ಲಿ ಉಲ್ಲೇಖ.

ಹೊರಬೀಳುತ್ತವೆ. ಭಾರತದ ಬಗ್ಗೆ ಹುಡುಕಾಟ ನಡೆಸಲಾದ ಟಾಪಿಕ್ ಗಳಲ್ಲಿ ಅಗ್ರಸ್ಥಾನದಲ್ಲಿರುವುದು ಭಾರತೀಯ ಕ್ರಿಕೆಟ್. ಈ ವರ್ಷ ನಡೆದಿದ್ದ ಟಿ20 ವರ್ಲ್ಡ್ ಕಪ್ ನಲ್ಲಿ ಭಾರತ – ಪಾಕಿಸ್ತಾನ ಕ್ರಿಕೆಟ್ ಪಂದ್ಯದ ಬಗ್ಗೆ ಹೆಚ್ಚು ಹುಡುಕಾಟ ನಡೆಸಿದ್ದಾರೆ. ಇನ್ನು, ಭಾರತ– ಆಸ್ಟ್ರೇಲಿಯಾ ಟೆಸ್ಟ್ ಸರಣಿ, ಭಾರತ – ಇಂಗ್ಲೆಂಡ್ ಟೆಸ್ಟ್ ಸರಣಿ, ಭಾರತ – ದಕ್ಷಿಣ ಆಫ್ರಿಕಾ ಟೆಸ್ಟ್ ಸರಣಿ, ಟಿ20 ವಿಶ್ವಕಪ್ ಪಂದ್ಯಾವಳಿಯಲ್ಲಿ ಭಾರತದ ಎಲ್ಲಾ ಮಹತ್ವದ ಪಂದ್ಯಗಳ ಬಗ್ಗೆ ಹುಡು

### ಪಂದ್ಯಗಳ ಬಗ್ಗೆ ಹುಡುಕಾಟ

**ಈ ವರ್ಷ ನಡೆದಿದ್ದ ಟಿ20 ವರ್ಲ್ಡ್ ಕಪ್ ನಲ್ಲಿ ಭಾರತ – ಪಾಕಿಸ್ತಾನ ಕ್ರಿಕೆಟ್ ಪಂದ್ಯದ ಬಗ್ಗೆ ಅವರು ಹೆಚ್ಚು ಹುಡುಕಾಟ ನಡೆಸಿದ್ದಾರೆ. ಇನ್ನು, ಭಾರತ– ಆಸ್ಟ್ರೇಲಿಯಾ ಟೆಸ್ಟ್ ಸರಣಿ, ಭಾರತ – ಇಂಗ್ಲೆಂಡ್ ಟೆಸ್ಟ್ ಸರಣಿ, ಭಾರತ – ದಕ್ಷಿಣ ಆಫ್ರಿಕಾ ಟೆಸ್ಟ್ ಸರಣಿ, ಟಿ20 ವಿಶ್ವಕಪ್ ಪಂದ್ಯಾವಳಿಯಲ್ಲಿ ಭಾರತದ ಎಲ್ಲಾ ಮಹತ್ವದ ಪಂದ್ಯಗಳ ಬಗ್ಗೆ ಹುಡುಕಾಟ ನಡೆಸಲಾಗಿದೆ.**

ಕಾಟ ನಡೆಸಲಾಗಿದೆ.

ಇನ್ನು, ಯಾವ ಸಿನಿಮಾಗಳ ಬಗ್ಗೆ, ಯಾವ ಟಿವಿ ಶೋಗಳ ಬಗ್ಗೆ ಹುಡುಕಾಟ ನಡೆಸಿದ್ದಾರೆಂದು ಸ್ವಲ್ಪ ಕೆದಕಿದರೆ ಮತ್ತಷ್ಟು ಕುತೂಹಲಕಾರಿ ವಿಷಯಗಳು ಹೊರಬೀಳುತ್ತವೆ. ಭಾರತದ ಬಗ್ಗೆ ಹುಡುಕಾಟ ನಡೆಸಲಾದ ಟಾಪಿಕ್ ಗಳಲ್ಲಿ ಅಗ್ರಸ್ಥಾನದಲ್ಲಿರುವುದು ಭಾರತೀಯ ಕ್ರಿಕೆಟ್.

ಸಿನಿಮಾ ಹಾಗೂ ಒಟಿಟಿ ಶೋಗಳ ಬಗ್ಗೆ ಹೇಳುವುದಾದರೆ, ಹೀರಾಮಂಡಿ, 12th ಫೇಲ್, ಮಿರ್ಜಾಪುರ್ ಸೀಸನ್ 3, ಬಿಗ್ ಬಾಸ್ 17, ಅನಿಮಲ್ (ಸಿನಿಮಾ), ಸ್ತ್ರೀ 2, ಭೂಲ್ ಭುಲಯ್ಯಾ 3 ಹಾಗೂ ಡಂಕಿ ಸಿನಿಮಾಗಳ ಬಗ್ಗೆ ಹೆಚ್ಚು ಹುಡುಕಾಟ ನಡೆಸಲಾಗಿದೆ. ಇನ್ನು, ಭಾರತೀಯ ವ್ಯಕ್ತಿಗಳಾದ ಮುಕೇಶ್ ಅಂಬಾನಿ ಅವರ ಬಗ್ಗೆ ಹೆಚ್ಚು ತಿಳಿದುಕೊಳ್ಳಲು ಪ್ರಯತ್ನಿಸಿದ್ದಾರೆ. ರತನ್ ಟಾಟಾ, ಕುಸ್ತಿಪಟು ವಿನೇಶ್ ಫೋಗಟ್, ಕ್ರಿಕೆಟ್ ಆಟಗಾರ ಹಾರ್ದಿಕ್ ಪಾಂಡ್ಯ ಅವರ ಬಗ್ಗೆ ಹೆಚ್ಚು ಹುಡುಕಾಟ ನಡೆಸಿದ್ದಾರೆ.

# ಪ್ಯಾಲೆಸ್ತೀನ್ ಹೆಸರಿರುವ ಬ್ಯಾಗ್ ಜೊತೆ ಬಂದು ವಿವಾದಕ್ಕೆ ಸಿಲುಕಿದ ಸಂಸದೆ

**ನವದೆಹಲಿ:** ಇತ್ತೀಚೆಗಷ್ಟೇ ಸಂಸತ್ತಿಗೆ ಕಾಲಿಟ್ಟ ಪ್ರಿಯಾಂಕಾ ಗಾಂಧಿ ವಾದ್ರಾ ಈಗ ಹೊಸ ವಿವಾದ ಮೈಲೇಲೆ ಎಳೆದುಕೊಂಡಿದ್ದಾರೆ. ಪ್ಯಾಲೆಸ್ತೀನ್ ಎಂದು ಬರೆದಿರುವ ಬ್ಯಾಗ್ ಹಿಡಿದು ಸಂಸತ್ ಆಗ ಮಿಸಿದ ಪ್ರಿಯಾಂಕಾ ಫೋಟೋ ವೈರಲ್ ಆಗಿದ್ದು ಭಾರೀ ವಿವಾದಕ್ಕೆ ಕಾರಣವಾಗಿದೆ.



**ಸೋಲಿಗೆ ತುಷ್ಟೀಕರಣದ ಚೀಲವೇ ಕಾರಣ**

ಪ್ಯಾಲೆಸ್ತೀನ್ ಮೇಲಿನ ಪ್ರಿಯಾಂಕಾ ಪ್ರೀತಿಗೆ ಸಾಮಾಜಿಕ ಜಾಲತಾಣದಲ್ಲಿ ತೀವ್ರ ಟೀಕೆಗಳು ಕೇಳಿಬರುತ್ತಿವೆ,. ಸಂಸದೆ ಪ್ರಿಯಾಂಕಾ ಗಾಂಧಿ ಪ್ಯಾಲೆಸ್ತೀನ್ ಜನರಿಗೆ ಬೆಂಬಲ ಮತ್ತು ಒಗ್ಗಟ್ಟನ್ನು ಪ್ರದರ್ಶಿಸುತ್ತಿದ್ದಾರೆ ಎನ್ನಲಾಗಿದೆ. ಇನ್ನು ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಮತ್ತು ವಯನಾಡ್ ಸಂಸದೆಯಾಗಿರುವ ಪ್ರಿಯಾಂಕಾ ಗಾಜಾದ ಮೇಲೆ ಇಸ್ರೇಲ್ ದಾಳಿಯನ್ನು ಖಂಡಿಸುತ್ತಲೇ ಇದ್ದರು. ಅದೇ ರೀತಿ ಇದೀಗ ಮತ್ತೆ ತಮ್ಮ ನಿಲುವನ್ನು ಪ್ರದರ್ಶಿಸಿದ್ದಾರೆ.

ಪ್ರಿಯಾಂಕಾ ಪ್ಯಾಲೆಸ್ತೀನ್ ಹೆಸರಿರುವ ಬ್ಯಾಗ್ ನೊಂದಿಗೆ ಫೋಟೋ ಪೋಸ್ ಕೊಟ್ಟಿದ್ದು ಆ ಫೋಟೋವನ್ನು ಕಾಂಗ್ರೆಸ್ ವಕ್ತಾರ ಶಾಮಾ ಮೊಹಮ್ಮದ್ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ ಬಳಿಕ ಈ ವಿವಾದ ಭುಗಿಲೆದ್ದಿದೆ. ಪ್ಯಾಲೆಸ್ತೀನ್ ಪರ ತಮ್ಮ ಬೆಂಬಲವನ್ನು ಸೂಚಿಸುವುದರ ಸಂಕೇತವಾಗಿ ಈ ಬ್ಯಾಗ್ ಹಿಡಿದುಕೊಂಡಿದ್ದಾರೆ ಎಂದು ಎಕ್ಸ್ ಬಳಕೆದಾರರೊಬ್ಬರು ಕಮೆಂಟ್ ಮಾಡಿದ್ದಾರೆ.

ಗಾಂಧಿ ಕುಟುಂಬ ಯಾವಾಗಲೂ ತುಷ್ಟೀಕರಣದ ಬ್ಯಾಗ್‌ನ್ನು ಹೊತ್ತಿದೆ. ಚುನಾವಣೆಯಲ್ಲಿ ಅವರ ಸೋಲಿಗೆ ತುಷ್ಟೀಕರಣದ ಚೀಲವೇ ಕಾರಣ ಎಂದು ಪತ್ರಾ ಪತ್ರಿಕಾಗೋಷ್ಠಿಯಲ್ಲಿ ಹೇಳಿದ್ದಾರೆ.

**ಪ್ರಿಯಾಂಕ ಹಿಡಿದುಬಂದ ಬ್ಯಾಗ್, ಕಲ್ಲಂಗಡಿ, ಈ ಪ್ರದೇಶದಲ್ಲಿ ಪ್ರತಿರೋಧದ ದೀರ್ಘ ಕಾಲದಿಂದ ಗುರುತಿಸಲ್ಪಟ್ಟ ಮೋಟಿಫ್ ಸೇರಿದಂತೆ ಪ್ಯಾಲೆಸ್ಟೀನಿಯಾದೊಂದಿಗಿನ ಐಕಮತ್ಯವನ್ನು ಸಂಕೇತಿಸುವ ಲಾಂಛನಗಳನ್ನು ಒಳಗೊಂಡಿತ್ತು. ಇದಕ್ಕೆ ಬಿಜೆಪಿ ನಾಯಕ ಸಂಬಿತ್ ಪಾತ್ರ ತೀಕ್ಷ್ಣ ಪ್ರತಿಕ್ರಿಯೆ ನೀಡಿದ್ದಾರೆ.**

ಇಸ್ರೇಲ್‌ನ ವ್ಯಕ್ತಿಯೊಬ್ಬ ವಿಡಿಯೋ ಮಾಡಿ, ಮುಸ್ಲಿಮರ ಓಲೈಕೆ ಮಾಡುತ್ತಿರುವ ಕಾಂಗ್ರೆಸ್ ಕಾಂಗ್ರೆಸ್ ಪಕ್ಷದ ನಡೆಯನ್ನು ಖಂಡಿಸಿದ್ದಾನೆ. ಈ ರೀತಿಯ ನಡೆಯಿಂದಲೇ ಇದು ಭಾರತದಲ್ಲಿ ಜನ ಕಾಂಗ್ರೆಸ್‌ನ್ನು ದ್ವೇಷಿಸುತ್ತಿದ್ದಾರೆ ಎಂದಿದ್ದಾನೆ.

ಮುಸ್ಲಿಂ ರಾಷ್ಟ್ರ ಪ್ಯಾಲೆಸ್ತೇನ್‌ಗೆ ಬೆಂಬಲ ವ್ಯಕ್ತಪಡಿಸುತ್ತಿರುವ ಪ್ರಿಯಾಂಕ ವಾದ್ರ, ಆಗಾಗ್ಗೆ ಇಸ್ರೇಲ್‌ನಲ್ಲಿ ನೆತನ್ಯಾಹು ಸರ್ಕಾರವನ್ನು ದೂಷಿಸುತ್ತಿರುತ್ತಾರೆ.

# ದೊರೆಯದ ಸಚಿವ ಸ್ಥಾನ: ಛಗನ್ ಭುಜಬಲ್ ಅಸಮಾಧಾನ

**ಮುಂಬೈ:** ಮಹಾರಾಷ್ಟ್ರದ ಮಹಾಯುತಿ ಮೈತ್ರಿ ಸರ್ಕಾರದಲ್ಲಿ ಸಚಿವ ಸ್ಥಾನ ಸಿಗದಿರುವುದಕ್ಕೆ ಹಿಂದುಳಿದ ವರ್ಗದ ಹಿರಿಯ ನಾಯಕ ಛಗನ್ ಭುಜಬಲ್ ಅಸಮಾಧಾನಗೊಂಡಿದ್ದಾರೆ. ಹೌದು... ನಾನು ಅಸಮಾ ಧಾನಗೊಂಡಿದ್ದೇನೆ. ಕ್ಷೇತ್ರದ ಜನರು, ಪರಿಷತ್ ಹಾಗೂ ಬೆಂಬಲಿಗರೊಂದಿಗೆ ಚರ್ಚಿಸಿದ ಬಳಿಕ ಮುಂದಿನ ನಿರ್ಧಾರ ತೆಗೆದುಕೊಳ್ಳುವೆ' ಎಂದಿದ್ದಾರೆ.

ಎನ್‌ಸಿಪಿ ವರಿಷ್ಠರೂ ಆಗಿರುವ, ಉಪಮುಖ್ಯಮಂತ್ರಿ ಅಜಿತ್ ಪವಾರ್ ಈ ಬಗ್ಗೆ ಮಾತನಾಡಿಲ್ಲ. ಭುಜಬಲ್ ಅವರು ಮಾಲಿ ಸಮುದಾಯದ ಪ್ರಭಾವಿ ನಾಯಕರಾಗಿದ್ದಾರೆ. 'ನನಗೆ ಸಚಿವ ಸ್ಥಾನ ನೀಡಬಹುದು ಅಥವಾ ನೀಡದಿರಬಹುದು. ಆದರೆ ಛಗನ್ ಭುಜಬಲ್ ಅವರ ರಾಜಕೀಯ ಮುಗಿದಿಲ್ಲ' ಎಂದು ಸೋಮವಾರ ನಾಗುರದಲ್ಲಿ ಪತ್ರಕರ್ತರಿಗೆ ತಿಳಿಸಿದರು. 'ಹೊಸಬರಿಗೆ ಅವಕಾಶ ಕೊಡಲಿಕ್ಕಾಗಿ ನನ್ನನ್ನು ಸಚಿವ ಸಂಪುಟದಿಂದ ಕೈಬಿಡಲಾಗಿದೆ ಎಂದು ಪಕ್ಷದ ಮುಖಂಡರು ತಿಳಿಸಿದ್ದಾರೆ. ಆದರೆ, ನನಗೆ ಬಹುಮಾನ ನೀಡಲಾಗಿದೆ (ಮರಾಠ ಮೀಸಲಾತಿ ಹೋರಾಟಗಾರಿ ಮನೋಜ್ ಜರಾಂಗೆ ಅವರಿಗೆ ಸವಾಲು ಹಾಕಿದ್ದಕ್ಕೆ). ನಾನೊಬ್ಬ ಸಾಮಾನ್ಯ ಕಾರ್ಯಕರ್ತ. ನನ್ನನ್ನು ನಿರ್ಲಕ್ಷಿಸಿದರೆ ಅಥವಾ ಹೊರಹಾಕಿದರೆ ಅದು ಯಾವ



ವ್ಯತ್ಯಾಸವಾಗಲಿದೆ' ಎಂದರು. ಮರಾಠ ಮೀಸಲಾತಿ ಬೇಡಿಕೆಯ ವಿರುದ್ಧ ಛಗನ್ ಭುಜಬಲ್ ಧ್ವನಿ ಎತ್ತಿದ್ದರು. ರಾಜ್ಯದ ಹಿರಿಯ ರಾಜಕಾರಣಿಗಳಲ್ಲಿ ಭುಜಬಲ್ ಒಬ್ಬರು. ಮುಂಬೈನ ಮಝುಗಾಂವ್‌ನಿಂದ ಎರಡು ಬಾರಿ ಶಾಸಕರಾಗಿದ್ದರೆ, ನಾಸಿಕ್‌ನ ಯೋಲಾದಿಂದ ಐದು ಬಾರಿ ಶಾಸಕರಾಗಿದ್ದಾರೆ. ಒಮ್ಮೆ ವಿಧಾನ ಪರಿಷತ್‌ನ ಸದಸ್ಯರು ಆಗಿದ್ದರು. ಕಾಂಗ್ರೆಸ್–ಎನ್‌ಸಿಪಿ ಮೈತ್ರಿಯ ಡೆಮಾಕ್ರಟಿಕ್ ಫ್ರಂಟ್ ಸರ್ಕಾರದಲ್ಲಿ ಉಪ ಮುಖ್ಯಮಂತ್ರಿಯಾಗಿದ್ದ ಹಿಂದುಳಿದ ವರ್ಗದ ಹಿರಿಯ ನಾಯಕ, ಅಖಿಲ ಭಾರತೀಯ ಮಹಾತ್ಮ ಫುಲೆ ಸಮತಾ ಪರಿಷತ್‌ನ ಸ್ಥಾಪಕ ಅಧ್ಯಕ್ಷರೂ ಆಗಿದ್ದಾರೆ. ಈ ಹಿಂದಿನ ಮಹಾವಿಕಾಸ ಆಘಾಡಿ ಹಾಗೂ ಮಹಾಯುತಿ ಮೈತ್ರಿ ಸರ್ಕಾರದಲ್ಲೂ ಭುಜಬಲ್ ಸಚಿವರಾಗಿದ್ದರು.

# ಮೃತದೇಹ ರವಾನೆಗೆ ಮಣಿಪುರ ಸರ್ಕಾರಕ್ಕೆ ಪೋಷಕರ ಮನವಿ

**ಗೋಪಾಲಗಂಜ್:** ಮಣಿಪುರದಲ್ಲಿ ನಡೆದ ಹಿಂಸಾಚಾರದಲ್ಲಿ ಬಿಹಾರದ ಒಬ್ಬ ಅಪ್ರಾಪ್ತ ಹಾಗೂ ಇನ್ನೋರ್ವ ಯುವಕ ಸಾವನ್ನಪ್ಪಿದ್ದು ಅವರ ಮೃತದೇಹಗಳನ್ನು ಪೋಷಕರು ಸ್ವಗ್ರಾಮಕ್ಕೆ ಹಿಂತಿರುಗಿಸಲು ಅನುಕೂಲ ಮಾಡಿಕೊಡುವಂತೆ ಮಣಿಪುರ ಸರ್ಕಾರಕ್ಕೆ ಮನವಿ ಮಾಡಿದ್ದಾರೆ. ಸುನಾಲಾಲ್ ಕುಮಾರ್ (18) ಮತ್ತು ದಶರತ್ ಕುಮಾರ್ (17) ಮೃತರಾಗಿದ್ದು, ಬಿಹಾರದ ಗೋ ಪಾಲ್‌ಗಂಜ್ ಜಿಲ್ಲೆಯ ರಾಜವಾಹಿ ಗ್ರಾಮದ ನಿವಾಸಿಗಳು ಎಂದು ಗುರಿತಿಸಲಾಗಿದೆ. ಇತ್ತೀಚೆಗೆ ವಲಸೆ ಕಾರ್ಮಿಕರಾಗಿ ಇವರು ಕೆಲಸ ಮಾಡಲು ಮಣಿಪುರಕ್ಕೆ ತೆರಳಿದ್ದರು. ಅಲ್ಲಿ ಅವರನ್ನು ಶೂಟ್ ಮಾಡಿ ಕೊಂದು ಹಾಕಲಾಗಿದೆ.

ದೀಪಾವಳಿ ಬಳಿಕ ಹೆಚ್ಚುವರಿ ಹಣ ಸಂಪಾದಿಸಲು ಈ ಇಬ್ಬರು ಮಣಿಪುರಕ್ಕೆ ಹೋಗಿದ್ದರು ಎಂದು ಕುಟುಂಬಗಳು ತಿಳಿಸಿವೆ. ಅದರಲ್ಲೂ, ಮೃತ ದಶರತ್



ಕುಮಾರ್ ಅವರ ತಾಯಿ ರಾಧಿಕಾ ದೇವಿ ಮಾತನಾಡಿ, ಮಣಿಪುರದಲ್ಲಿ ಸಂಘರ್ಷವಿದೆ ಎಂದು ನಮಗೆ ತಿಳಿದಿರಲಿಲ್ಲ, ನಮಗೆ ತಿಳಿದಿದ್ದರೆ, ನಾನು ನನ್ನ ಮಗನನ್ನು ಅಲ್ಲಿಗೆ ಕಳುಹಿಸುತ್ತಿರಲಿಲ್ಲ.

ಅವನಿಗೆ ಕೇವಲ 17 ವರ್ಷ. ನನಗೆ ನನ್ನ ಮಗನ

**ಇದಕ್ಕೂ ಮೊದಲು, ಮಣಿಪುರ ಸಿಎಂ ಬಿರೇನ್ ಸಿಂಗ್ ಇಬ್ಬರ ಹತ್ಯೆಯನ್ನು ಖಂಡಿಸಿದ್ದು, ಇದನ್ನು ಭಯೋತ್ಪಾದನಾ ಕೃತ್ಯ ಎಂದು ಕರೆದಿದ್ದಾರೆ. ಬಿಹಾರದ ಸುನಾಲಾಲ್ ಕುಮಾರ್ ಮತ್ತು ದಶರತ್ ಕುಮಾರ್ ಅವರ ಕ್ರೂರ ಹತ್ಯೆಯನ್ನು ನಾನು ಬಲವಾಗಿ ಖಂಡಿಸುತ್ತೇನೆ. ಮಣಿಪುರದ ಕಕ್ಚಿಂಗ್ ಜಿಲ್ಲೆಯ ಈ ಭಯೋತ್ಪಾದನಾ ಕೃತ್ಯವು ನಮ್ಮ ಮೌಲ್ಯಗಳ ಮೇಲೆ ನೇರವಾದ ದಾಳಿಯಾಗಿದೆ ಮತ್ತು ಅವರ ದುಃಖಿತ ಕುಟುಂಬಗಳಿಗೆ ನನ್ನ ಆಳವಾದ ಸಂತಾಪಗಳು ಎಂದಿದ್ದಾರೆ.**

ಮುಖ ಒಮ್ಮೆ ನೋಡಬೇಕು. ನಾನು ಸರ್ಕಾರಕ್ಕೆ

### ನಿಯಮಾನುಸಾರ ಇತರ ಸೌಲಭ್ಯಗಳನ್ನು ನೀಡುವಂತೆ ಸೂಚನೆ

**ಅದೇ ರೀತಿ, ಬಿಹಾರ ಸಿಎಂ ನಿತೀಶ್ ಕುಮಾರ್ ಕೂಡ ಹತ್ಯೆ ಖಂಡಿಸಿದ್ದು, ಮೃತರ ಕುಟುಂಬಕ್ಕೆ ನಿಯಮಾನುಸಾರ ಸವಲತ್ತುಗಳನ್ನು ನೀಡುವಂತೆ ಹಾಗೂ ಇಬ್ಬರ ಮೃತದೇಹವನ್ನು ಅವರ ಸ್ವಗ್ರಾಮಕ್ಕೆ ಸಾಗಿಸಲು ಅಗತ್ಯ ವ್ಯವಸ್ಥೆ ಮಾಡುವಂತೆ ಅಧಿಕಾರಿಗಳಿಗೆ ಆದೇಶಿಸಿದ್ದಾರೆ. ಕುಟುಂಬಗಳಿಗೆ ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ ತಲಾ 2 ಲಕ್ಷ ರೂ.ನೀಡಲು ಸೂಚಿಸಿದ್ದೇನೆ. ಇದರೊಂದಿಗೆ ಕಾರ್ಮಿಕ ಸಂಪನ್ಮೂಲ ಇಲಾಖೆ ಹಾಗೂ ಸಮಾಜ ಕಲ್ಯಾಣ ಇಲಾಖೆಯಿಂದ ನಡೆಸುತ್ತಿರುವ ಯೋಜನೆಗಳಿಂದ ನಿಯಮಾನುಸಾರ ಇತರ ಸೌಲಭ್ಯಗಳನ್ನು ನೀಡುವಂತೆ ಸೂಚಿಸಿದ್ದೇನೆ ಎಂದೂ ಅವರು ಉಲ್ಲೇಖಿಸಿದ್ದಾರೆ.**

ಅದನ್ನೇ ಕೇಳುತ್ತಿದ್ದೇನೆ ಎಂದು ಕಣ್ಣೀರು ಹಾಕಿದ್ದಾರೆ.

ಮೃತ ಸುನಾಲಾಲ್ ಕುಮಾರ್ ತಾಯಿ ನನ್ನ ಮಗನನ್ನು ಅವರು ಸಾಯಿಸಿದ್ದಾರೆ. ದೀಪಾವಳಿಯ ನಂತರ ಸ್ವಲ್ಪ ಹಣ ಸಂಪಾದಿಸಲು ಮಣಿಪುರಕ್ಕೆ ಹೋಗಿ ಅಲ್ಲಿ ಕೂಲಿ ಕೆಲಸ ಮಾಡುತ್ತಿದ್ದ ಎಂದು ಅಳಲು ತೋಡಿಕೊಳ್ಳುತ್ತಿದ್ದಾರೆ.

# ಚಿಡೋ ಚಂಡಮಾರುತಕ್ಕೆ ಫ್ರಾನ್ಸ್‌ನಲ್ಲಿ ಒಂದು ಸಾವಿರಕ್ಕೂ ಹೆಚ್ಚು ಮಂದಿ ಬಲಿ

**ಮಾಯೋಟ್:** ಚಂಡಿಯಾಗಿರುವ ಚಿಡೋ ಚಂಡಮಾರುತಕ್ಕೆ ಮಾಯೋಟ್ ಫ್ರಾನ್ಸ್ ನಲ್ಲಿ ತತ್ತರಿಸಿಹೋಗಿದೆ. ಈಗಾಗಲೇ ಮಾರುತದ ಅಬ್ಬರಕ್ಕೆ ಒಂದು ಸಾವಿರಕ್ಕೂ ಹೆಚ್ಚು ಮಂದಿ ಪ್ರಾಣ ಕಳೆದುಕೊಂಡಿದ್ದಾರೆ ಎಂದು ಅಂದಾಜಿಸಲಾಗಿದೆ. ಆಫ್ರಿಕಾದ ಕರಾವಳಿಯ ಆಗ್ನೇಯ ಹಿಂದೂ ಮಹಾಸಾಗರದಲ್ಲಿರುವ ಮಾಯೋಟ್ ಫ್ರಾನ್ಸ್, ಯುರೋಪಿಯನ್ ಒಕ್ಕೂಟದ ಬಡ ಪ್ರದೇಶವಾಗಿದೆ. ಇದು 90 ವರ್ಷಗಳಲ್ಲಿ ಮಾಯೋಟ್‌ಗೆ ಅಪ್ಪಳಿಸಿರುವ ಅತ್ಯಂತ ಕೆಟ್ಟ ಚಂಡಮಾರುತ ಎಂದು ಬಿಂಬಿಸಲಾಗುತ್ತಿದೆ. ಚಿಡೋ ಚಂಡಮಾರುತ ಇದೀಗ ಆಫ್ರಿಕಾದ ಪೂರ್ವ ಕರಾವಳಿಯನ್ನು ತಲುಪಿದೆ.

ಕೊಳೆಗೇರಿಗಳಲ್ಲಿ ವಾಸಿ ಸುವ ಅನೇಕ ಜನರು ಗಂಭೀರ ಅಪಾಯಗಳನ್ನು ಎದುರಿಸುತ್ತಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಚಿಡೋ ಗಂಟೆಗೆ 220 ಕಿಲೋ ಮೀಟರ್‌ಗಿಂತಲೂ ಹೆಚ್ಚು ಗಾಳಿಯ ರಭಸವನ್ನು ಉಂಟು ಮಾಡಿತ್ತು. ಇದರಿಂ ದ ಹಲವಾರು ಮನೆಗಳು ಹಾನಿಗೊಳಗಾಗಿವೆ. ಮಾಯೋಟ್‌ನಲ್ಲಿ 3 ಲಕ್ಷಕ್ಕೂ ಅಧಿಕ ಮಂದಿ ವಾಸವಿದ್ದಾರೆ.



**ಗಾಳಿಯ ರಭಸವನ್ನು ಉಂಟು ಮಾಡಿತು**

**ಕೆಲವೆಡೆ ಇಡೀ ಪ್ರದೇಶವೇ ನಾಶವಾಗಿದೆ. ಹಲವು ಮರಗಳು ಧರೆಗುರುಳಿದ್ದು, ದೋಣಿಗಳು ಉರುಳಿ ಬಿದ್ದಿವೆ ಅಥವಾ ಮುಳುಗಿವೆ ಎಂದು ಸ್ಥಳೀಯರು ತಿಳಿಸಿದ್ದಾರೆ. ಅದೇ ಸಮಯದಲ್ಲಿ, ಫ್ರೆಂಚ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ಅವರು ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಗಮನಿಸುತ್ತಿದ್ದೇವೆ ಎಂದು ತಿಳಿಸಿದ್ದಾರೆ.**

ಇದು ಆಫ್ರಿಕಾದ ಪೂರ್ವ ಕರಾವಳಿಯಿಂದ ಸುಮಾರು 800 ಕಿಲೋಮೀಟರ್ ದೂರದಲ್ಲಿರುವ ಎರಡು ಪ್ರಮುಖ ದ್ವೀಪಗಳಲ್ಲಿ ಹರಡಿದೆ.

# ರಾಷ್ಟ್ರಗೀತೆಗೆ ಟ್ರಂಪ್ ವಂದನೆ: ಚರ್ಚೆಗೆ ಕಾರಣ

**ವಾಷಿಂಗ್ಟನ್:** ಅಮೆರಿಕಾದ ಮೇರಿಲ್ಯಾಂಡ್‌ನ ಲ್ಯಾಂಡೋವರ್‌ನಲ್ಲಿರುವ ನಾರ್ತ್‌ವೆಸ್ಟ್ ಸ್ಟೇಡಿಯಂನಲ್ಲಿ ನಡೆದ 125 ನೇ ಆರ್ಮಿ–ನೇವಿ ಫುಟ್‌ಬಾಲ್ ಪಂದ್ಯದಲ್ಲಿ ರಾಷ್ಟ್ರಗೀತೆಯ ಸಂದರ್ಭದಲ್ಲಿ ಗೌರವ ವಂದನೆ ಸಲ್ಲಿಸಿ ಅಮೆರಿಕಾದಲ್ಲಿ ಬಿಸಿ ಬಿಸಿ ಚರ್ಚೆಗೆ ಕಾರಣವಾಗಿದೆ.ಅಮೆರಿಕಾ ಚುನಾಯಿತಾ ಅಧ್ಯಕ್ಷರಾಗಿರುವ ಡೊನಾಲ್ಡ್ ಟ್ರಂಪ್ ತರಾತುರಿಯಲ್ಲಿ ರಾಷ್ಟ್ರ ಗೀತೆಗೆ ಸಲ್ಯೂಟ್ ಹೊಡೆದಿದ್ದಾರೆ. ಇದು ಸಾಮಾಜಿಕ ಜಾಲತಾಣದಲ್ಲಿ ಬಿಸಿ ಬಿಸಿ ಚರ್ಚೆ ಹುಟ್ಟು ಹಾಕಿದೆ.

ಡೊನಾಲ್ಡ್ ಟ್ರಂಪ್ ತುಂಬಾ ಬೇಗ ಸೆಲ್ಯೂಟ್ ಮಾಡಿದ್ರಾ ಎನ್ನುವ ವಿಷಯ ಸಾಮಾಜಿಕ ಜಾಲತಾಣದಲ್ಲಿ ಪರ ವಿರೋಧದ ಚರ್ಚೆಗೆ ವೇದಿಕೆ ಮಾಡಿಕೊಟ್ಟಿದೆ. ಉಪಾಧ್ಯಕ್ಷರಾಗಿ ಆಯ್ಕೆಯಾದ ಜೆಡಿ ವ್ಯಾನ್ಸ್, ಹೌಸ್ ಸ್ಪೀಕರ್ ಮೈಕ್ ಜಾನ್ಸನ್ ಮತ್ತು ರಕ್ಷಣಾ ಕಾರ್ಯದರ್ಶಿ ನಾಮಿನಿ ಪೀಟ್ ಹೆಗ್‌ಸೆತ್ ಅವರೊಂದಿಗೆ ಆಟದಲ್ಲಿ ಭಾಗವಹಿಸಿದ್ದ ಡೊನಾಲ್ಡ್ ಟ್ರಂಪ್ ಅವರ ಗೆಸ್ಚರ್ ತ್ವರಿತವಾಗಿ ವೈರಲ್ ಆಗಿದ್ದು, ಸಾಮಾಜಿಕ ಮಾಧ್ಯಮ ಬಳಕೆದಾರರು ಇದು ಸೂಕ್ತವೇ ಎಂದು ಪ್ರಶ್ನಿಸಿದ್ದಾರೆ.

ಗೀತೆ ಪ್ರಾರಂಭವಾಗುತ್ತಿದ್ದಂತೆ, ಡೊನಾಲ್ಡ್ ಟ್ರಂಪ್ ವಿಐಪಿ ಬಾಕ್ಸ್‌ನಿಂದ ಸೆಲ್ಯೂಟ್ ಎತ್ತಿದರು,



ಆದರೆ ವ್ಯಾನ್ಸ್ ಮತ್ತು ಹೆಗ್‌ಸೆತ್ ಸೇರಿದಂತೆ ಇತರರು ತಮ್ಮ ಹೃದಯದ ಮೇಲೆ ತಮ್ಮ ಕೈಗಳನ್ನು ಇರಿಸಿದರು. ಮಿಲಿಟರಿ ಪ್ರೋಟೋಕಾಲ್ ಸಾಮಾನ್ಯವಾಗಿ ಸೆಲ್ಯೂಟಿಂಗ್ ಅನ್ನು ಸಮವಸ್ತ್ರದಲ್ಲಿರುವವರಿಗೆ ಅಥವಾ ಸಕ್ರಿಯ–ಕರ್ತವ್ಯ ಸಿಬ್ಬಂದಿಗೆ ಮೀಸಲಿಡಲಾಗಿದೆ ಎಂದು ಹೇಳಲಾಗಿದೆ.ಅಧ್ಯಕ್ಷರಾಗಿ ಚುನಾಯಿತರಾಗಿರುವ ಡೊನಾಲ್ಡ್, ಟ್ರಂಪ್ ಅವರು ಜನವರಿ 20, ರಂದು ಅಧಿಕಾರ ಸ್ವೀಕಾರ ಮಾಡುವ ತನಕ ಸಾಮಾನ್ಯ ನಾಗರಿಕರಾಗಿಯೇ ಇರುತ್ತಾರೆ ಎಂದು ಹೇಳಲಾಗಿದೆ.

ಟ್ವಿಟ್ಟರ್ ನಲ್ಲಿ ಒಬ್ಬ ಬಳಕೆದಾರರು ಸಮವಸ್ತ್ರದಲ್ಲಿಲ್ಲದ ಎಲ್ಲಾ ವ್ಯಕ್ತಿಗಳು ಗಮನದಲ್ಲಿ ನಿಲ್ಲಬೇಕು, ಧ್ವಜವನ್ನು ಎದುರಿಸಬೇಕು ಮತ್ತು ತಮ್ಮ ಬಲಗೈಯನ್ನು ತಮ್ಮ ಹೃದಯದ ಮೇಲೆ ಇಡಬೇಕು. ಡೊನಾಲ್ಡ್

**ಮತ್ತೊಬ್ಬ ಬಳಕೆದಾರರು ವ್ಯಂಗ್ಯವಾಡಿದರು, ಜೋ ಬಿಡನ್ ಎಂದಿಗೂ ಹೋಗಲಿಲ್ಲ ಎಂದು ನನಗೆ ಆಶ್ಚರ್ಯವಾಗಿದೆ. ಅವರ ಭಾಷಣಗಳ ಪ್ರಕಾರ, ಅವರು ಬಹುಶಃ ಒಂದೇ ಆಟದಲ್ಲಿ ಸೇನೆ ಮತ್ತು ನೌಕಾಪಡೆಗಾಗಿ ಆಡಿದ್ದಾರೆ ಎಂದು ಹೇಳಿದ್ದಾರೆ.**

ಟ್ರಂಪ್ ಸಮವಸ್ತ್ರದಲ್ಲಿಲ್ಲ ಎಂದು ಟೀಕಿಸಿದ್ದಾರೆ.ಪ್ರಸ್ತುತ ಕಮಾಂಡರ್–ಇನ್–ಚೀಫ್ ಆಗಿರುವ ಅಧ್ಯಕ್ಷ ಜೋ ಬಿಡೆನ್ ಅವರು ಮಿಲಿಟರಿಗೆ ಸೆಲ್ಯೂಟ್ ಮಾಡುವ ಅಧಿಕಾರವನ್ನು ಹೊಂದಿದ್ದಾರೆ ಎಂದು ಮತ್ತೊಬ್ಬರು ಗಮನಸೆಳೆದರು, ಟ್ರಂಪ್ ಅವರ ಕ್ರಮ ನಾಗರಿಕ ಮತ್ತು ಮಿಲಿಟರಿ ಪಾತ್ರಗಳ ನಡುವೆ ಚರ್ಚೆ ಹುಟ್ಟು ಹಾಕಿದೆ.

ಬಳಕೆದಾರರೊಬ್ಬರು ಹಂಚಿಕೊಂಡ ವಿಡಿಯೋದಲ್ಲಿ, ಡೊನಾಲ್ಡ್ ಟ್ರಂಪ್ ರಾಷ್ಟ್ರಗೀತೆಯ ಸಮಯದಲ್ಲಿ ಸೆಲ್ಯೂಟ್ ಮಾಡುತ್ತಾರೆ. ಜೋ ಬಿಡೆನ್ ಕಳೆದ ನಾಲ್ಕು ವರ್ಷಗಳಿಂದ ಹೋಗಲಿಲ್ಲ. ಅಧ್ಯಕ್ಷರನ್ನು ಆರ್ಮಿ–ನೌಕಾಪಡೆಗೆ ಹಿಂತಿರುಗಿಸಿರುವುದು ಅದ್ಭುತವಾಗಿದೆ ಎಂದಿದ್ದಾರೆ.

# ತಬಲಾವನ್ನು ಜಾಗತಿಕ ಮಟ್ಟಕ್ಕೆ ಕೊಂಡೊಯ್ದ ಮಾಂತ್ರಿಕ ಜಾಕೀರ್ ಹುಸೇನ್

## ಪ್ರಸಿದ್ಧ ತಬಲಾ ವಾದಕ ಅಲ್ಲಾ ರಖಾ ಅವರ ಹಿರಿಯ ಪುತ್ರರಾಗಿದ್ದ ಜಾಕಿರ್ ಹುಸೇನ್ ತಮ್ಮ ತಂದೆಯ ಹಾದಿಯಲ್ಲಿ ಸಾಗುವ ಮೂಲಕ ವಿಶ್ವ ವಿಖ್ಯಾತಿ

**ವಾಷಿಂಗ್ಟನ್:** ಕಳೆದ ಹಲವು ತಿಂಗಳಿನಿಂದ ತೀವ್ರ ಹೃದಯ ಸಂಬಂಧಿ ಸಮಸ್ಯೆಗಳಿಂದ ಬಳಲುತ್ತಿದ್ದ ಭಾರತದ ಹೆಸರಾಂತ ತಬಲಾ ಮಾಂತ್ರಿಕ ಜಾಕೀರ್ ಹುಸೇನ್‌ರವರು (73) ನಿಧನರಾಗಿದ್ದಾರೆ.



**ಸಂಗೀತಗಾರನಿಗೆ ರಕ್ತದೊತ್ತಡ ಸಮಸ್ಯೆ**

73 ವಯಸ್ಸಿನ ಜಾಕಿರ್ ಅವರಿಗೆ ಕಳೆದ ಎರ ಡು ವಾರಗಳಿಂದ ಹೃದಯ ಸಂಬಂಧಿ ಸಮಸ್ಯೆ ಕಾಣಿಸಿಕೊಂಡಿದ್ದು, ಹೀಗಾಗಿ ಅಮೆರಿಕದ ಸ್ಯಾನ್ ಫ್ರಾನ್ಸಿಸ್ಕೋ ಆಸ್ಪತ್ರೆಯೊಂದಕ್ಕೆ ದಾಖಲಿಸಲಾಗಿತ್ತು. ಆದರೆ ತಬಲಾ ಮಾಂತ್ರಿಕ ಜಾಕಿರ್ ಹುಸೇನ್ ಅವರು ಸ್ಯಾನ್ ಫ್ರಾನ್ಸಿಸ್ಕೋದ ಆಸ್ಪತ್ರೆಯಲ್ಲಿ ನಿಧನರಾಗಿದ್ದಾರೆ ಎಂದು ಅವರ ಕುಟುಂಬ ದೃಢಪಡಿಸಿದೆ. ಅವರು ಫೆಬ್ರವರಿ 2024 ರಲ್ಲಿ ಮೂರು ಗ್ರ್ಯಾಮಿ ಪ್ರಶಸ್ತಿಗಳನ್ನು ಪಡೆದಿದ್ದರು. ಜಾಕಿರ್ ಹುಸೇನ್ ಕಥಕ್ ನೃತ್ಯಗಾರ್ತಿ ಮತ್ತು ಶಿಕ್ಷಕಿ ಆಂಟೋನಿಯಾ ಮಿನ್ನೆಕೋಲಾ ಅವರನ್ನು ವಿವಾಹವಾಗಿದ್ದ ಅವರು, ಅವರ ಮ್ಯಾನೇಜರ್ ಕೂಡ ಆಗಿದ್ದರು. ಅವರಿಗೆ ಅನಿಸಾ ಖುರೇಷಿ ಮತ್ತು ಇಸಾಬೆಲ್ಲಾ ಖುರೇಷಿ ಎಂಬ ಇಬ್ಬರು ಹೆಣ್ಣುಮಕ್ಕಳಿದ್ದಾರೆ. ಜಾಕಿರ್ ಹುಸೇನ್ ನಿಧನಕ್ಕೆ ಹಲವು ಗಣ್ಯರು ಕಂಬನಿ ಮಿಡಿದಿದ್ದಾರೆ.

ಈ ಮೊದಲು ಅವರ ಪಿಆರ್‌ಒ ಮೃತಪಟ್ಟಿಲ್ಲ, ಐಸಿ ಯುನಲ್ಲಿ ಚಿಕಿತ್ಸೆ ಮುಂದುವರೆದಿದೆ ಎಂದು ಭಾನು ವಾರ ತಿಳಿಸಿದ್ದರು. ಅಂತಿಮವಾಗಿ ಅವರ ಕುಟುಂಬ ವರ್ಗ ಹುಸೇನ್ ನಿಧನರಾಗಿದ್ದಾರೆ ಎಂದು ದೃಢಪಡಿಸಿದೆ. ಕಳೆದ ಎರಡು ವಾರಗಳಿಂದ ಹೃದಯ ಸಂಬಂಧಿ ಸಮಸ್ಯೆಯಿಂದ ಬಳಲುತ್ತಿದ್ದರು.

ನಂತರ ಅವರು ಅಸ್ವಸ್ಥರಾಗಿದ್ದು, ಐಸಿಯುನಲ್ಲಿ ದಾಖಲಾಗಿದ್ದರು. ನಾವೆಲ್ಲರೂ ಅವರ ಪರಿಸ್ಥಿತಿಯ ಬಗ್ಗೆ ಚಿಂತಿತರಾಗಿದ್ದೇವೆ ಎಂದು ಅವರ ಸ್ನೇಹಿತ ಮತ್ತು ಕೊಳಲು ವಾದಕ ರಾಕೇಶ್ ಚೌರಾಸಿಯಾ ಮಾಧ್ಯಮಗಳಿಗೆ ಹೇಳಿಕೆ ನೀಡಿದ್ದರು. ಇದರ ಬೆನ್ನಲ್ಲೇ ಅವರು ಇಹಲೋಕ ತ್ಯಜಿಸಿದ್ದಾರೆ. ತಬಲಾವನ್ನು ಜಾಗತಿಕ ಮಟ್ಟಕ್ಕೆ ಕೊಂಡೊಯ್ದ 73 ವರ್ಷದ ಸಂಗೀತಗಾರನಿಗೆ ರಕ್ತದೊತ್ತಡ ಸಮಸ್ಯೆ ಉಂಟಾಗಿತ್ತು

### ಸಾಧಕ ದೈತ್ಯನ ಸಾಧನೆಯ ಹಾದಿ

**ಪ್ರಸಿದ್ಧ ತಬಲಾ ವಾದಕ ಅಲ್ಲಾ ರಖಾ ಅವರ ಹಿರಿಯ ಮಗನಾಗಿರುವ ಜಾಕಿರ್ ಹುಸೇನ್ ಅವರು ತಮ ತಂದೆಯ ಹೆಜ್ಜೆಗಳನ್ನು ಅನುಸರಿಸಿದರು. ಭಾರತ ಸೇರಿದಂತೆ ವಿಶ್ವದಲ್ಲಿಯೇ ತಬಲಾ ವಾದನವನ್ನು ಪ್ರಖ್ಯಾತಿಗೆ ತಂದರು. ಹುಸೇನ್ ತಮ ವೃತ್ತಿಜೀವನದಲ್ಲಿ ಐದು ಗ್ರ್ಯಾಮಿ ಪ್ರಶಸ್ತಿಗಳನ್ನು ಪಡೆದಿದ್ದಾರೆ. ಈ ವರ್ಷದ ಆರಂಭದಲ್ಲಿ ನಡೆದ 66ನೇ ಗ್ರ್ಯಾಮಿ ಪ್ರಶಸ್ತಿ ಸಮಾರಂಭದಲ್ಲಿ ಮೂರು ಪ್ರಶಸ್ತಿ ಗೆದ್ದಿದ್ದರು.**

ಎಂದು ಹುಸೇನ್ ಅವರ ಮ್ಯಾನೇಜರ್ ನಿರ್ಮಲಾ ಬಚಾನಿ ಹೇಳಿದ್ದಾರೆ. ಪ್ರಸಿದ್ಧ ತಬಲಾ ವಾದಕ ಅಲ್ಲಾ ರಖಾ ಅವರ ಹಿರಿಯ ಪುತ್ರರಾಗಿದ್ದ ಜಾಕಿರ್ ಹುಸೇನ್ ತಮ ತಂದೆಯ ಹಾದಿಯಲ್ಲಿ ಸಾಗುವ ಮೂಲಕ ವಿಶ್ವ ವಿಖ್ಯಾತಿಯನ್ನು ಪಡೆದಿದ್ದರು. ತಮ ವೃತ್ತಿ ಜೀವನದಲ್ಲಿ ಅವರು ಐದು ಗ್ರ್ಯಾಮಿ ಪ್ರಶಸ್ತಿಗಳನ್ನು ಗೆಲ್ಲುವ ಮೂಲಕ ಅಂತಾರಾ ಷ್ಟ್ರೀಯ ಮಟ್ಟದಲ್ಲಿ ಭಾರತದ ಕೀರ್ತಿಯನ್ನು ಬೆಳಗಿದ್ದರು.

### ಸಿಎಂ ಸಿದ್ದರಾಮಯ್ಯ ಸಂತಾಪ

**ಜಾಕೀರ್ ಹುಸೇನ್ ವಿಧಿವಶಕ್ಕೆ ಸಿಎಂ ಸಿದ್ದರಾಮಯ್ಯ ಕೂಡ ಸಂತಾಪ ಸೂಚಿಸಿದ್ದು, ಅವರ ಸಾವಿನ ಸುದ್ದಿ ತಿಳಿದು ತುಂಬಾ ನೋವಾಗಿದೆ. ತಬಲಾ ಅವರ ಲಯದಿಂದಲೇ ಗಡಿಯಾಚೆಗಿನ ಹೃದಯ ಒಂದುಗೂಡಿಸುತ್ತಿದ್ದರು. ಭಾರತೀಯ ಶಾಸ್ತ್ರೀಯ ಸಂಗೀತಕ್ಕೆ ಅವರ ಕೊಡುಗೆ ಅಪಾರ ಎಂದಿದ್ದಾರೆ.**

ಅವರು ದಿ ಪರ್ಫೆಕ್ಟ್ ಮರ್ಡರ್, ಮಿಸ್ ಬೀಟೀಸ್ ಚಿಲ್ಡ್ರನ್, ಸಾಜ್, ಮಂಟೋ ಮುಂತಾದ ಚಿತ್ರಗಳಿಗೂ ಕೆಲಸ ಮಾಡಿದ್ದಾರೆ. ಅವರೊಬ್ಬ ಸಮರ್ಥ ನಟ ಕೂಡ. ಅವರು ಮೊದಲು 1983 ರ ಚಲನಚಿತ್ರ, ಹೀಟ್ ಅಂಡ್ ಡಸ್ಟ್‌ನಲ್ಲಿ ನಟರಾಗಿ ಕಾಣಿಸಿಕೊಂಡರು, ಇದರಲ್ಲಿ ಶಶಿ ಕಪೂರ್ ಪ್ರಮುಖ ಪಾತ್ರದಲ್ಲಿದ್ದರು. ಜಾಕಿರ್ ಹುಸೇನ್ ನಟನೆಯಲ್ಲಿ ಕೂಡಾ ಮೆಚ್ಚುಗೆ ಗಳಿಸಲು ಆರಂಭಿಸಿದಾಗ 1998 ರ ಸಾಜ್ ಚಿತ್ರದಲ್ಲಿ ಶಬಾನಾ ಅಜಿಯೊಂದಿಗೆ ಜಾಕಿರ್ ಹುಸೇನ್ ಪ್ರಮುಖ ಪಾತ್ರವನ್ನು ನಿರ್ವಹಿಸಿದರು. ಇದು ಅದರ ಕಂಟೆಂಟ್ ಕಾರಣದಿಂದ ಸಾಕಷ್ಟು ವಿವಾದಗಳಿಗೆ ಒಳಗಾಗಿತ್ತು. ಶಬಾನಾ ಅಜಿಯ ಪ್ರೇಮಿಯ ಪಾತ್ರದಲ್ಲಿ ಅವರ ನಟನೆಯು ಹೆಚ್ಚು ಮೆಚ್ಚುಗೆ ಗಳಿಸಿತ್ತು. ಚಿತ್ರದ ಕಥೆಯು ಲತಾ ಮಂಗೇಶ್ಕರ್ ಮತ್ತು ಆಶಾ ಭೋಂಸ್ಲೆ ಅವರ ವೈಯಕ್ತಿಕ ಜೀವನದಿಂದ ಪ್ರೇರಿತವಾ ಗಿದೆ ಎಂದು ಹೇಳಲಾಗುತ್ತದೆ. ಲತಾ ಮಂಗೇಶ್ಕರ್ ಚಿತ್ರದ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ್ದರು ಎನ್ನಲಾಗಿದೆ. ಜಾಕಿರ್ ಹುಸೇನ್ ಅವರು ತಮ 3 ನೇ ವಯಸ್ಸಿನಲ್ಲಿ ತಮ ತಂದೆ ಅಲ್ಲಾ ರಖಾ ಅವರಿಂದ ಸಂಗೀತ ತರಬೇತಿಯನ್ನು ಪಡೆಯಲು ಪ್ರಾರಂಭಿಸಿದರು. ಜಾಕಿರ್ ಹುಸೇನ್ ಅವರ ಕುಟುಂಬವು ಸಂಗೀತದೊಂದಿಗೆ ಬಹಳ ಹಳೆಯ ಸಂಬಂಧವನ್ನು ಹೊಂದಿದೆ. ರವಿಶಂಕರ್ ಮತ್ತು ಅಲಿ ಅಕ್ಬರ್ ಖಾನ್ ಅವರಂತಹ ಪ್ರಸಿದ್ಧ ಸಂಗೀತಗಾರರೊಂದಿಗೆ ಕೆಲಸ ಮಾಡಿದ್ದಾರೆ.

ಅವರು ತಮ ಆರಂಭಿಕ ಶಾಲಾ ಶಿಕ್ಷಣವನ್ನು ಮುಂಬೈನ ಮಾಹಿಮ್‌ನಲ್ಲಿರುವ ಸೇಂಟ್ ಮೈಕೆಲ್ಸ್ ಹೈಸ್ಕೂಲ್‌ನಲ್ಲಿ ಮಾಡಿದರು ಮತ್ತು ಮುಂಬೈನ ಸೇಂಟ್ ಕ್ಸೇವಿಯರ್ ಕಾಲೇಜಿನಲ್ಲಿ ಪದವಿ ಪಡೆದರು. ಜಾಕಿರ್ ಹುಸೇನ್ ಅವರಿಗೆ ಭಾರತ ಸರ್ಕಾರವು 1988 ರಲ್ಲಿ ಪದಶ್ರೀ, 2002 ರಲ್ಲಿ ಪದಭೂಷಣ ಮತ್ತು 2023 ರಲ್ಲಿ ಪದವಿಭೂಷಣ ಪ್ರಶಸ್ತಿಗಳನ್ನು ನೀಡಿ ಗೌರವಿಸಿದೆ. ಅವರು 1990 ರಲ್ಲಿ ಸಂಗೀತ ನಾಟಕ ಅಕಾಡೆಮಿ ಪ್ರಶಸ್ತಿ, ಸಂಗೀತ ನಾಟಕ ಅಕಾಡೆಮಿ ಫೆಲೋಶಿಪ್ ಮತ್ತು 2018 ರಲ್ಲಿ ರತ್ನ ಸದಸ್ಯ ಪ್ರಶಸ್ತಿಗಳನ್ನು ಪಡೆದರು.

# ಮಿನಿ ನ್ಯೂಸ್

## ರಜೌರಿ ಜಿಲ್ಲೆಯ ಗಡಿಯಲ್ಲಿ 5.5 ಕೆಜಿ ಹೆರಾಯಿನ್ ವಶ

**ರಜೌರಿ:** ಜಮ್ಮು ಮತ್ತು ಕಾಶ್ಮೀರದ ರಜೌರಿ ಜಿಲ್ಲೆಯ ಗಡಿ ನಿಯಂತ್ರಣ ರೇಖೆ ಬಳಿ ಇಬ್ಬರು ಶಂಕಿತ ಮಾದಕವಸ್ತು ಕಳ್ಳಸಾಗಣೆದಾರರನ್ನು ಬಂಧಿಸಿ ಅವರಿಂದ 5.50 ಕೆಜಿ ಹೆರಾಯಿನ್ ವಶಪಡಿಸಿಕೊಳ್ಳಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ನೌಶೇರಾ ಸೆಕ್ಟರ್‌ನಿಂದ ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕೋಟ್ಯಂತರ ರೂಪಾಯಿ ಮೌಲ್ಯದ ಭಾರೀ ಪ್ರಮಾಣದ ಹೆರಾಯಿನ್ ವಶಪಡಿಸಿಕೊಂಡಿದ್ದು, ಗಡಿಯಾಚೆಯಿಂದ ಅಕ್ರಮವಾಗಿ ಕಳ್ಳಸಾಗಣೆ ಮಾಡುವ ಡ್ರಗ್ ಪೆಡ್ಲರ್ಗಳ ಪ್ರಯತ್ನವನ್ನು ವಿಫಲಗೊಳಿಸಲಾಗಿದೆ ಎಂದು ಅವರು ಹೇಳಿದರು. ಆರೋಪಿಗಳಾದ ಸಜನ್ ಕುಮಾರ್ (25) ಮತ್ತು ಸುಭಾಷ್ ಚಂದರ್ (36) ಅವರನ್ನು ಸೇನೆ ಮತ್ತು ಪೊಲೀಸರು ತಡರಾತ್ರಿ ಶೇರ್ ಮತ್ತು ಕನೇಟಿ ಗ್ರಾಮಗಳಲ್ಲಿ ಜಂಟಿ ಕಾರ್ಯಾಚರಣೆ ನಡೆಸಿ ಬಂಧಿಸಿದ್ದಾರೆ. ಜಮುವಿನ ಅರ್ನಿಯಾ ಸೆಕ್ಟರ್ನ ಅಂತರಾಷ್ಟ್ರೀಯ ಗಡಿಯಲ್ಲಿ ಗಡಿ ಭದ್ರತಾ ಪಡೆ (ಬಿಎಸ್‌ಎಫ್) ಪಾಕಿಸ್ತಾನದ ಡ್ರೋನ್ ಮತ್ತು ಸುಮಾರು ಅರ್ಧ ಕಿಲೋಗ್ರಾಂಗಳಷ್ಟು ಉನ್ನತ ದರ್ಜೆಯ ಮಾದಕ ದ್ರವ್ಯವನ್ನು ವಶಪಡಿಸಿಕೊಳ್ಳಲಾಗಿತ್ತು.

## ಶಬರಮಲೆಗೆ ಹರಿದು ಬಂದ ಕಾಣಿಕೆ 163.89ರೂ. ಕೋಟಿ ಸಂಗ್ರಹ

**ತಿರುವನಂತಪುರ:** ದಕ್ಷಿಣ ಭಾರತದ ಪ್ರಸಿದ್ಧ ಧಾರ್ಮಿಕ ಕ್ಷೇತ್ರವಾಗಿರುವ ಕೇರಳದ ಶಬರಿಮಲೆ ಅಯ್ಯಪ್ಪ ದೇವಾಯಲವು ಕೇವಲ 29 ದಿನಗಳಲ್ಲಿ 163.89 ಕೋಟಿ ರೂ. ಆದಾಯ ಗಳಿಸಿದೆ.

ಡಿಸೆಂಬರ್ 14ರವರೆಗೆ 22 ಲಕ್ಷ ಅಯ್ಯಪ್ಪನ ಭಕ್ತರು ದೇವಾಲಯಕ್ಕೆ ಭೇಟಿ ನೀಡಿದ್ದಾರೆ. ಇದು ಕಳೆದ ಬಾರಿಗೆ ಹೋಲಿಸಿದರೆ ಈ ಬಾರಿ 4.51 ಲಕ್ಷ ಅಧಿಕ ಭಕ್ತರು ಭೇಟಿ ನೀಡಿದ್ದಾರೆ. ಈ ಕುರಿತು ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ತಿರುವಾಂಕೂರು ದೇವಾ ಲಯ ಮಂಡಳಿಯ ಅಧ್ಯಕ್ಷ ಪಿ.ಎಸ್ ಪ್ರಶಾಂತ್, ದೇವಾಸ್ಥಾನದ ವರಮಾನವನ್ನು ಕಳೆದ ಬಾರಿಗೆ ಹೋಲಿಸಿದರೆ 22.76 ಕೋಟಿ ರೂ. ಹೆಚ್ಚಾಗಿದೆ. ಕೇವಲ 29 ದಿನಗಳಲ್ಲಿ ಒಟ್ಟು 22,67,956 ಭಕ್ತರು ಭೇಟಿ ನೀಡಿದ್ದಾರೆ ಎಂದು ತಿಳಿಸಿದ್ದಾರೆ. ಈ ಭಕ್ತರಿಂದ ಒಟ್ಟು 163.89 ಕೋಟಿ ಆದಾಯ ದೇವಾಲಯಕ್ಕೆ ಹರಿದುಬಂದಿದೆ. ಈ ಪೈಕಿ ಪ್ರಸಾದ ಮಾರಾಟದಿಂದಲೇ 82.67 ಕೋಟಿ ರೂ. ಆದಾಯ ಬಂದಿದೆ ಎಂದು ಅವರು ಹೇಳಿದ್ದಾರೆ.

## ಭಯೋತ್ಪಾದಕರ ಜಾಲಗಳ ವಿರುದ್ಧ ಪಾಕಿಸ್ತಾನ ಕ್ರಮ: ಅಮೆರಿಕ ಶ್ಲಾಘನೆ

**ಇಸ್ಲಾಮಾಬಾದ್:** ಭಯೋತ್ಪಾದಕರಿಗೆ ಹಣಕಾಸು ನೆರವು ನೀಡುವುದರ ಹಾಗೂ ಪ್ರಾದೇಶಿಕ ಭಯೋತ್ಪಾದಕರ ಜಾಲಗಳ ವಿರುದ್ಧ ಪಾಕಿಸ್ತಾನವು ಗಣನೀಯವಾಗಿ ಕ್ರಮಗಳನ್ನು ಕೈಗೊಳ್ಳುತ್ತಿದೆ ಎಂದು ಅಮೆರಿಕ ವಿದೇಶಾಂಗ ಇಲಾಖೆಯ ವರದಿಯೊಂದು ಹೇಳಿದೆ. 2023ರಲ್ಲಿ ಪಾಕಿಸ್ತಾನದಲ್ಲಿ ಭಯೋತ್ಪಾದಕ ದಾಳಿ ಪ್ರಕರಣಗಳು ತೀವ್ರ ಏರಿಕೆಯಾಗಿದ್ದು, ಗಂಭೀರ ಭದ್ರತಾ ಸವಾಲುಗಳನ್ನು ಎತ್ತಿ ತೋರಿಸುತ್ತದೆ.

ಪಾಕಿಸ್ತಾನದಲ್ಲಿ ಈಗ 41 ಭಯೋತ್ಪಾದಕ ಸಂಘಟನೆಗಳು ಸಕ್ರಿಯವಾಗಿವೆ ಎಂದೂ ಅದು ಹೇಳಿದೆ. ಈ ಕುರಿತು ವರದಿ ಮಾಡಿರುವ 'ಡಾನ್' ಪತ್ರಿಕೆಯು 'ಈ ವಾರದಲ್ಲಿ ಅಮೆರಿಕದ ವರದಿಯು ಬಿಡುಗಡೆಯಾಗಿದೆ. 2023ರಲ್ಲಿ ಹಣ ಅಕ್ರಮ ವರ್ಗಾವಣೆ ಹಾಗೂ ಹಾಗೂ ಭಯೋತ್ಪಾದಕರಿಗೆ ನಿಧಿ ಸಂಗ್ರಹ ವಿಚಾರದಲ್ಲಿ ವಿಶ್ವಸಂಸ್ಥೆಯ ನಿಯಮಗಳ ಅನುಸಾರವಾಗಿ ಪಾಕಿಸ್ತಾನ ಕೈಗೊಂಡ ಕ್ರಮಗಳನ್ನು ವರದಿಯಲ್ಲಿ ಶ್ಲಾಘಿಸಲಾಗಿದೆ' ಎಂದು ಹೇಳಿದೆ.

## ಸಂಭಲ್ ದೇಗುಲ: ಮೂರು ಭಗ್ನ ಮೂರ್ತಿಗಳು ಪತ್ತೆ

**ಸಂಭಲ್:** ಉತ್ತರ ಪ್ರದೇಶದ ಸಂಭಲ್‌ನಲ್ಲಿ 46 ವರ್ಷಗಳ ಬಳಿಕ ಬಾಗಿಲು ತೆರೆಯಲಾಗಿರುವ ಭಸ್ಮ ಶಂಕರ್ ದೇವಾಲಯದ ಬಾವಿಯೊಳಗೆ ದೇವರ ಮೂರು ಭಗ್ನ ಮೂರ್ತಿಗಳು ಪತ್ತೆಯಾಗಿವೆ. ಡಿ. 13ರಂದು ಕೈಗೊಂಡಿದ್ದ ಒತ್ತುವರಿ ತೆರವು ಕಾರ್ಯಾಚರಣೆ ವೇಳೆ 'ಶ್ರೀ ಕಾರ್ತೀಕ ಮಹಾದೇವ ದೇಗುಲ' (ಭಸ್ಮ ಶಂಕರ್ ದೇಗುಲ) ಮತ್ತು ಅದರ ಸಮೀಪ ಬಾವಿ ಪತ್ತೆಯಾಗಿತ್ತು. ದೇವಾಲಯದಲ್ಲಿ ಹನುಮ ಮೂರ್ತಿ ಮತ್ತು ಶಿವಲಿಂಗ ನೆಲೆಸಿವೆ. 1978ರಿಂದ ಈ ದೇಗುಲ ಬಾಗಿಲು ಮುಚ್ಚಿತ್ತು. 'ದೇವಾಲಯ ಮತ್ತು ಅದರ ಬಳಿಯ ಬಾವಿಯಲ್ಲಿ ಉತ್ಖನನ ನಡೆಸಲಾಗುತ್ತಿದೆ. ಈ ವೇಳೆ ಬಾವಿಯಲ್ಲಿ 10ರಿಂದ 12 ಅಡಿ ಅಗೆದ ಬಳಿಕ ಮೂರು ಮೂರ್ತಿಗಳು ಪತ್ತೆಯಾಗಿವೆ.

ಅದರಲ್ಲಿ ಮೊದಲಿಗೆ ರುಂಡ ಬೇರ್ಪಟ್ಟಿರುವ ಪಾರ್ವತಿ ಮೂರ್ತಿ, ಬಳಿಕ ಗಣೇಶ ಮತ್ತು ಲಕ್ಷ್ಮಿಮೂರ್ತಿಗಳು ಪತ್ತೆಯಾದವು ಎಂದು ಸಂಭಲ್‌ನ ಜಿಲ್ಲಾಧಿಕಾರಿ ರಾಜೇಂದರ್ ಪೆನ್ಸಿಯಾ ಸುದ್ದಿಗಾರರಿಗೆ ತಿಳಿಸಿದರು. 'ಈ ಮೂರ್ತಿಗಳು ಬಾವಿಯೊಳಗೆ ಹೇಗೆ ಬಂದವು. ಅವು ಯಾವ ಕಾಲದವು ಮತ್ತು ಹೇಗೆ ಭಗ್ನವಾದವು ಎಂಬುದು ತನಿಖೆಯ ಬಳಿಕ ಗೊತ್ತಾಗುತ್ತದೆ' ಎಂದು ಅವರು ಪ್ರತಿಕ್ರಿಯಿಸಿದರು. 'ದೇಗುಲದ ಸುತ್ತಮುತ್ತಲಿನ ಒತ್ತುವರಿಗಳನ್ನು ಕೆಲವರು ತಾವಾಗಿಯೇ ತೆರವುಗೊಳಿಸಿದ್ದಾರೆ. ಇನ್ನೂ ಕೆಲವರಿಗೆ ತೆರವುಗೊಳಿಸುವಂತೆ ಸೂಚಿಸಲಾಗಿದೆ. ಈ ಕುರಿತು ಮುಂದಿನ ಪ್ರಕ್ರಿಯೆಗಳನ್ನು ಪಾಲಿಕೆ ಮಾಡುತ್ತದೆ' ಎಂದು ಅವರು ಹೇಳಿದರು.

## ವಿಜಯ್ ದಿವಸ್ ಬಾಂಗ್ಲಾ ಮಾಜಿ ಸೈನಿಕರು ಭಾಗಿ

**ನವದೆಹಲಿ:** ಬಾಂಗ್ಲಾದೇಶದಲ್ಲಿ ಈಚೆಗೆ ನಡೆದ ಬೆಳವಣಿಗೆಗಳ ಬಗ್ಗೆ ಭಾರತವು ಕಳವಳ ವ್ಯಕ್ತಪಡಿಸಿರುವ ಹೊರತಾಗಿಯೂ, ಅಲ್ಲಿನ ಎಂಟು ಮಾಜಿ ಸೈನಿಕರು ಮತ್ತು ಸೇನೆಯ ಇಬ್ಬರು ಅಧಿಕಾರಿಗಳು 1971ರ ಬಾಂಗ್ಲಾ ವಿಮೋಚನಾ ಯುದ್ಧ'ದ ಸ್ಮರಣಾರ್ಥ ಆಯೋಜಿಸಿದ ಕಾರ್ಯಕ್ರಮದಲ್ಲಿ




ಪಾಲ್ಗೊಳ್ಳಲು ಕೋಲ್ಕತ್ತಕ್ಕೆ ಬಂದರು.


ಅದಕ್ಕೆ ಪ್ರತಿಯಾಗಿ ಭಾರತದ ಎಂಟು ಮಾಜಿ ಸೈನಿಕರು ಮತ್ತು ಇಬ್ಬರು ಅಧಿಕಾರಿಗಳು ಯುದ್ಧದ 53ನೇ ವರ್ಷಾಚರಣೆ ಪ್ರಯುಕ್ತ ಆಯೋಜಿಸಿರುವ ವಿಜಯ್ ದಿವಸ್ ಕಾರ್ಯಕ್ರಮದಲ್ಲಿ ಭಾಗಿಯಾಗಲು ಢಾಕಾ ತಲುಪಿದರು. ಬಾಂಗ್ಲಾದ ನಿಯೋಗವು ಭಾರತೀಯ ಸೇನೆಯ ಪೂರ್ವ ಕಮಾಂಡ್‌ನ ಕೇಂದ್ರ ಕಚೇರಿಯಾಗಿರುವ ಕೋಲ್ಕತ್ತದ ಫೋರ್ಟ್ ವಿಲಿಯಂನಲ್ಲಿ ಸೋಮವಾರ ಆಯೋಜಿಸಿದ ಕಾರ್ಯಕ್ರಮದಲ್ಲಿ ಪಾಲ್ಗೊಂಡಿತು. ಬಾಂಗ್ಲಾದೇಶವನ್ನು ಸಾರ್ವಭೌಮ ರಾಷ್ಟ್ರವನ್ನಾಗಿಸಲು ಕಾರಣವಾದ 1971ರ ಪಾಕಿಸ್ತಾನ ವಿರುದ್ಧದ ಯುದ್ಧದಲ್ಲಿ ಭಾರತವು ಜಯಗಳಿಸಿದ ನೆನಪಿಗಾಗಿ ಪ್ರತಿ ವರ್ಷ ಡಿಸೆಂಬರ್ 16ರಂದು 'ವಿಜಯ್ ದಿವಸ್' ಆಚರಿಸಲಾಗುತ್ತದೆ.

## ಸಂಗೀತ ಮಾಂತ್ರಿಕ ಇಳಯರಾಜ ಇದೆಂಥಾ ಅವಮಾನ ಮಾಡಿದ್ರು ಅರ್ಚಕರು.



ಇಳಯರಾಜ ಅವರು ದೇವಸ್ಥಾನದ ಗರ್ಭಗುಡಿಗೆ ಪ್ರವೇಶ ಮಾಡ್ತಿದ ವೇಳೆ ದೇಗುಲದ ಅರ್ಚಕರು ಅವರನ್ನು ತಡೆದು ಹೊರಗೆ ಕಳಿಸಿದ್ದಾರೆ.

ಖ್ಯಾತ ಸಂಗೀತ ಸಂಯೋಜಕ ಇಳಯರಾಜ ತಮಿಳು ನಾಡಿನ ಶ್ರೀವಿಲ್ಲಿಪುತೂರಿನ ಆಂಡಾಳ್ ದೇವಸ್ಥಾನಕ್ಕೆ ತೆರಳಿದ್ರು. ಅಲ್ಲಿದ್ದ ಅರ್ಚಕರು ಅವರನ್ನು ಒಳಗೆ ಬಿಡದೆ ಹೊರಗೆ ಕಳುಹಿಸುತ್ತಿರುವುದು ವಿಡಿಯೋ ಇದೀಗ ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗ್ತಿದ್ದು, ಭಾರೀ ಚರ್ಚೆಗೆ ಕಾರಣವಾಗಿದೆ. ಸಂಗೀತ ಲೋಕದ ಮಾಂತ್ರಿಕ ಎಂದೇ ಕರೆಸಿಕೊಳ್ಳುವ ಇಳಯರಾಜ ಅವರು ಸುಮಾರು 45 ವರ್ಷಗಳಿಂದ ತಮ್ಮ ಸಂಗೀತದಿಂದ ಅಭಿಮಾನಿಗಳನ್ನು ರಂಜಿಸುತ್ತಿದ್ದಾರೆ. ಇಳಯರಾಜ ಇತ್ತೀಚೆಗೆ ತಮಿಳುನಾಡಿನ ಶ್ರೀವಲ್ಲಿಪುತೂರಿನ ಆಂಡಾಳ್ ದೇವಸ್ಥಾನದಲ್ಲಿ ನಡೆಯುತ್ತಿರುವ ಕಾರ್ಯಕ್ರಮದಲ್ಲಿ ಭಾಗವಹಿಸಲು ತೆರಳಿದ್ದರು. ಆದಿ ತಿರುಪುರ್ ಪಂಥಲ್‌ನಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ನಾಟ್ಯಾಂಜಲಿ ಕಾರ್ಯಕ್ರಮ ಮತ್ತು ಇಳಯರಾಜಾ ಸಂಯೋಜಿಸಿದ ದಿವ್ಯ ಪಾಶುರಂ ಹಾಡು ಬಿಡುಗಡೆ ಹಿನ್ನೆಲೆ ದೇವರಿಗೆ ವಿಶೇಷ ಪೂಜೆ ಸಲ್ಲಿಸಲು ಒಳಗೆ ಹೋದ್ರು. ಸಂಗೀತ ಸಂಯೋಜಕ ಇಳಯರಾಜ ಅವರು ನಂದನವನಂ, ಆಂಡಾಳ್ ಕ್ಷೇತ್ರ ಹಾಗೂ ಪೆರಿಯ ಪೆರುಮಾಳ್ ದೇವಸ್ಥಾನಗಳಿಗೆ ತೆರಳಿ ಸ್ವಾಮಿಯ ದರ್ಶನ ಪಡೆದರು. ಆಂಡಾಳ್ ದೇವಸ್ಥಾನದ ಗರ್ಭಗುಡಿಯ ಮುಂಭಾಗದಲ್ಲಿರುವ ಅರ್ಥ ಮಂಟಪಕ್ಕೆ ಇಳಯರಾಜ ಆಂಡಾಳ್ ತೆರಳಲು ಯತ್ನಿಸಿದಾಗ ಅಲ್ಲಿದ್ದ ಅರ್ಚಕರು ಒಳ ಪ್ರವೇಶಿಸದಂತೆ ತಡೆದರು. ಆ ಬಳಿಕ ಇಳಯರಾಜ ಗರ್ಭಗುಡಿಯಿಂದ ಹೊರಟು ಹೋದ್ರು. ಶ್ರೀವಿಲ್ಲಿಪುತ್ತೂರಿನ ಆಂಡಾಳ್ ದೇವಸ್ಥಾನದ ಅರ್ಥ ಮಂಟಪದಿಂದ ಇಳಯರಾಜ ನಿರ್ಗಮಿಸಿರುವ ವಿಡಿಯೋ ಇದೀಗ ಸಂಚಲನ ಮೂಡಿಸುತ್ತಿದೆ. ಇದನ್ನು ನೋಡಿದ ನೆಟ್ಟಿಗರು ಅರ್ಚಕರ ನಡೆಯನ್ನು ತೀವ್ರವಾಗಿ ಖಂಡಿಸಿದ್ದು, ಟೀಕೆ ಮಾಡ್ತಿದ್ದಾರೆ. ಸಂಗೀತ ಮಾಂತ್ರಿಕ ಇಳಯರಾಜ ಅವರ ಸುಮಧುರ ಸಂಗೀತಾ ಕೇಳಲು ಸಂಗೀತ ಪ್ರಿಯರು ಕಾಯುತ್ತಿರುತ್ತಾರೆ.



## ಸಿನಿಮಾ ರಿಲೀಸ್ ಟೈಮಲ್ಲೇ ದುರಂತ


ನನ್ನ ಸಿನಿಮಾ ರಿಲೀಸ್ ಟೈಮಲ್ಲೇ ಕಟೌಟ್‌ನಿಂದ ಬಿದ್ದು ದುರಂತ ಆಗಿತ್ತು. ಇದೆಲ್ಲ ಕೈ ಮೀರಿ ನಡೆಯುವ ಸಂದರ್ಭಗಳು ಎಂದು ನಟ ಸುದೀಪ್ ಹೇಳಿದ್ದಾರೆ.

ಹೈದ್ರಾಬಾದ್‌ನ ಸಂಧ್ಯಾ ಥಿಯೇಟರ್‌ನಲ್ಲಿ ನಡೆದ ಅಲ್ಲು ಅರ್ಜುನ್ ಅಭಿಮಾನಿ ದುರಂತ ಸಾವು ಪ್ರಕರಣಕ್ಕೆ ಸಂಬಂಧಿಸಿದಂತೆ ಅವರು ಪ್ರತಿಕ್ರಿಯೆ ನೀಡಿದ್ದಾರೆ. ಈ ವೇಳೆ, ಫ್ಯಾನ್ಸ್‌ಗೆ ಯಾವ ಸ್ಟಾರ್ ಕೂಡ ಹೀಗೆ ಮಾಡಿ ಹಾಗೆ ಮಾಡಿ ಎಂದು ಹೇಳಿರಲ್ಲ. ಅವರು ಏನೇ ಮಾಡಿದ್ರೂ ಅವರವರ ಪ್ರೀತಿ. ಎಲ್ಲರ ಮನೆಗಳಲ್ಲೂ ಹುಷಾರು ಜೋಪಾನ ಎಂದು ಹೇಳುತ್ತಿರುತ್ತೇವೆ. ಆದರೂ ಕೈ ಮೀರಿ ಇಂತಹ ದುರಂತಗಳು ನಡೆಯುತ್ತವೆ ಎಂದಿದ್ದಾರೆ. ಇದರಲ್ಲಿ ಯಾರ ತಪ್ಪೂ ಇರೋದಿಲ್ಲ, ನಡೆದಿರುವ ಪರಿಸ್ಥಿತಿಯ ತಪ್ಪು. ನಾವು ಫ್ಯಾನ್ಸ್ ಬಳಿ ಹುಷಾರಾಗಿರಿ ಎಂದು ಹೇಳ್ತೀವಿ. ಕೆಲವೊಂದು ಸಿನಿಮಾ ನಮ್ಮ ಯೋಚನೆ ಮೀರಿ ಜನಜಂಗುಳಿ ಸೇರುತ್ತೆ. ಪುಷ್ಪ ಚಿತ್ರ ಗ್ಲೋಬಲಿ ಭಾರೀ ಸೌಂಡ್ ಮಾಡಿತ್ತು. ರಂಪ ಎಲ್ಲಾ ಕಡೆ ಇತ್ತು. ಕೆಲವು ಘಟನೆಗಳು ನಡೆದಾಗ ಹೀಗಾಗಬಾರದಿತ್ತು ಎಂದು ಖಂಡಿತ ಎನಿಸುತ್ತದೆ ಎಂದಿದ್ದಾರೆ. ಇಂತಹ ಘಟನೆಗಳಿಗೆ ಅಲ್ಲಿದ್ದವರು ಬೇಕಂತ ಮಾಡಿದ್ದಾರೆ ಎನ್ನುವುದು ಬರಲ್ಲ. ಪ್ರತಿಯೊಬ್ಬರು ಮನೆಯಿಂದ ಹೊರಡುವಾಗ ಒಬ್ಬರು, ಇಬ್ಬರು ಅಂತಾನೇ ಹೋಗೋದು. ಅಲ್ಲಿ ಹೋದ್ಮೇಲೆ ಗೊತ್ತಾಗುತ್ತೆ ಸಾವಿರಾರು ಜನ ಇದ್ದಾರೆ ಎಂದು ಅಲ್ವಾ ಏನ್ ಮಾಡೋದು, ಕೆಲವೊಮ್ಮೆ ನಡೆಯುತ್ತೆ. ಕೆಲವೊಂದು ಆಗಬಾರದಿರೋದು

## ಶೂಟಿಂಗ್ ವೇಳೆ ಗಾಯಗೊಂಡ ಪ್ರಭಾಸ್!

ಕಲ್ಕಿ ಚಿತ್ರದ ನಂತರ ಪ್ಯಾನ್ ಇಂಡಿಯಾ ಸ್ಟಾರ್ ಪ್ರಭಾಸ್ ಎರಡು ಸಿನಿಮಾಗಳ ಶೂಟಿಂಗ್ ನಲ್ಲಿ ಬ್ಯುಸಿಯಾಗಿದ್ದಾರೆ. ಆದ್ರೆ ಸಿನಿಮಾ ಶೂಟಿಂಗ್ ವೇಳೆ ನಟ ಪ್ರಭಾಸ್ ಗಾಯಗೊಂಡಿದ್ದಾರೆ ಎಂದು ವರದಿ ಆಗಿದೆ. ನಟ ಪ್ರಭಾಸ್‌ಗೆ ಏನಾಯ್ತು ಅಭಿಮಾನಿಗಳ ಬಳಿ ಕ್ಷಮೆ ಕೇಳಿದ್ದಾರೆ.

ಎರಡು ಸಿನಿಮಾ ಶೂಟಿಂಗ್ ಗಳ ಜೊತೆಗೆ ಯಂಗ್ ರೆಬೆಲ್ ಸ್ಟಾರ್ ಮತ್ತೆ ಮೂರು ಸಿನಿಮಾ ಪ್ರಾಜೆಕ್ಟ್‌ಗಳು ಸಹಿ ಹಾಕಿದ್ದಾರೆ ಎನ್ನಲಾಗ್ತಿದೆ. ಬ್ಯಾಕ್ ಟು ಬ್ಯಾಕ್ ಸಿನಿಮಾಗಳಲ್ಲಿ ಬ್ಯುಸಿ ಆಗಿರುವ ಪ್ರಭಾಸ್, ಶೂಟಿಂಗ್ ವೇಳೆ ಗಾಯಗೊಂಡಿದ್ದು, ಮನೆಯಲ್ಲೇ ವಿಶ್ರಾಂತಿ ಪಡೆಯುತ್ತಿದ್ದಾರೆ ಎನ್ನುವ ಸುದ್ದಿ ಟಾಲಿವುಡ್ ಅಂಗಳದಲ್ಲಿ ಹರಿದಾಡ್ತಿದೆ. ಎರಡು ಸಿನಿಮಾ ಶೂಟಿಂಗ್‌ಗಳ ಜೊತೆಗೆ ಯಂಗ್ ರೆಬೆಲ್ ಸ್ಟಾರ್ ಮತ್ತೆ ಮೂರು ಸಿನಿಮಾ ಪ್ರಾಜೆಕ್ಟ್‌ಗಳು ಸಹಿ ಹಾಕಿದ್ದಾರೆ ಎನ್ನಲಾಗ್ತಿದೆ. ಬ್ಯಾಕ್ ಟು ಬ್ಯಾಕ್ ಸಿನಿಮಾಗಳಲ್ಲಿ ಬ್ಯುಸಿ ಆಗಿರುವ ಪ್ರಭಾಸ್, ಶೂಟಿಂಗ್ ವೇಳೆ ಗಾಯಗೊಂಡಿದ್ದು, ಮನೆಯಲ್ಲೇ ವಿಶ್ರಾಂತಿ ಪಡೆಯುತ್ತಿದ್ದಾರೆ ಎನ್ನುವ ಸುದ್ದಿ ಟಾಲಿವುಡ್ ಅಂಗಳದಲ್ಲಿ ಹರಿದಾಡ್ತಿದೆ.



ಮಾರುತಿ ನಿರ್ದೇಶನದ ಪ್ರಭಾಸ್ ಅಭಿನಯದ 'ದಿ ರಾಜಾ ಸಾಬ್' ಸಿನಿಮಾ ಮುಂದಿನ ವರ್ಷ ಏಪ್ರಿಲ್ 10 ರಂದು ಬಿಡುಗಡೆಯಾಗಲಿದೆ ಎಂದು ಈಗಾಗಲೇ ಘೋಷಿಸಲಾಗಿದೆ. ಹೀಗಾಗಿ ಚಿತ್ರತಂಡ ಇತ್ತೀಚೆಗಷ್ಟೇ ಚಿತ್ರದ ಚಿತ್ರೀಕರಣವನ್ನು ಚುರುಕುಗೊಳಿಸಿದೆ. ಆದರೆ ಶೂಟಿಂಗ್ ವೇಳೆ ಪ್ರಭಾಸ್ ಕಾಲಿಗೆ ಗಾಯ ಮಾಡಿಕೊಂಡಿದ್ದಾರೆ. ಸದ್ಯ ವೈದ್ಯರ ಸಲಹೆಯಂತೆ ಪ್ರಭಾಸ್ ಮನೆಯಲ್ಲಿ ರೆಸ್ಟ್ ಮಾಡ್ತಿದ್ದಾರೆ.



## ಗ್ರಾಮೀಣ ಕ್ರೀಡೋತ್ಸವಕ್ಕೆ ಸಾಕ್ಷಿಯಾದ ಶ್ರೀನಿಧಿ ಶೆಟ್ಟಿ

ಇಲ್ಲಿನ ಆದಿಯೋಗಿ ಈಶಾ ಕೇಂದ್ರದಲ್ಲಿ ಆಯೋಜಿಸಲಾಗಿದ್ದ ಗ್ರಾಮೋತ್ಸವ ಕಾರ್ಯಕ್ರಮದಲ್ಲಿ ರಾಜ್ಯದ ನಾನಾ ಕಡೆಗಳಿಂದ ಆಗಮಿಸಿದ್ದ ಗ್ರಾಮೀಣ ಭಾಗದ ಮಹಿಳೆಯರು ವಿವಿಧ ಕ್ರೀಡೆಗಳಲ್ಲಿ ಪಾಲ್ಗೊಂಡು ಸಂಭ್ರಮಿಸಿದ್ದಾರೆ. ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಕೆಜಿಎಫ್ ನಟಿ ಶ್ರೀನಿಧಿ ಶೆಟ್ಟಿ, ಆಟಗಾರರಿಗೆ ಶುಭ ಹಾರೈಸಿದ್ದಾರೆ.

ಮಹಿಳೆಯರು ಹಾಗೂ ಯುವತಿಯರಿಗೆ ಥ್ರೋ ಬಾಲ್ ಹಾಗೂ ಹಗ್ಗ ಜಗ್ಗಾಟದ ಸ್ಪರ್ಧೆ ಆಯೋಜಿಸಲಾಗಿತ್ತು. ಪುರಷರಿಗೆ ವಾಲಿಬಾಲ್ ಸ್ಪರ್ಧೆ ಆಯೋಜನೆ ಮಾಡಲಾಗಿತ್ತು. ರಾಜ್ಯದ ನಾನಾ ಮೂಲೆಗಳಿಂದ ನೂರಾರು ತಂಡಗಳು ಆಗಮಿಸಿ ಗ್ರಾಮೋತ್ಸವದಲ್ಲಿ ಕ್ರೀಡೆಗಳನ್ನ ಆಡುವ ಮೂಲಕ ಎಲ್ಲರ ಗಮನ ಸೆಳೆದರು. ಭಾಗವಹಿಸಿದವರು ಯಾರೂ ಸಹ ವೃತ್ತಿಪರ ಆಟಗಾರರಲ್ಲ, ಬದಲಾಗಿ ಗ್ರಾಮೀಣ ಭಾಗದ ಹಳ್ಳಿಗಾಡಿನ ಮಹಿಳೆಯರು ಹಾಗೂ ಪುರುಷರು. ಯುವಕ-ಯುವತಿಯರಲ್ಲಿ ಕ್ರೀಡೆ ಹಾಗೂ ಯೋಗದ ಬಗ್ಗೆ ಆಸಕ್ತಿ ಮೂಡಿಸುವ ಉದ್ದೇಶದಿಂದ ಈ ಸ್ಪರ್ಧೆ ಆಯೋಜಿಸಲಾಗಿತ್ತು.

## ಬಾಕ್ ಆಫೀಸ್ ಕಲೆಕ್ಷನ್ ಮಾಹಿತಿ

## ಕನ್ನಡ ಚಿತ್ರರಂಗವನ್ನು ಎತ್ತಿ ಹಿಡಿದ ಉಪೇಂದ್ರ



'ಭೇಷ್...' ಎಂದ್ರು ಕನ್ನಡಿಗರು 'ರಿಯಲ್ ಸ್ಟಾರ್' ಉಪೇಂದ್ರ ಅವರು ಸದ್ಯ 'ಯುಐ' ಸಿನಿಮಾದ ಪ್ರಚಾರದಲ್ಲಿ ಸಕ್ರಿಯರಾಗಿದ್ದಾರೆ. ಯೆಸ್, 'ಯುಐ' ಪ್ಯಾನ್ ಇಂಡಿಯಾ ಸಿನಿಮಾವಾಗಿದ್ದು, ಕನ್ನಡದ ಜೊತೆಗೆ ಪರಭಾಷೆಯಲ್ಲೂ ದೊಡ್ಡಮಟ್ಟದಲ್ಲಿ ತೆರೆಗೆ ಬರಲಿದೆ. ಸದ್ಯ ಈ ಸಿನಿಮಾದ ಪ್ರಚಾರಕ್ಕಾಗಿ ಉಪೇಂದ್ರ ಹೈದರಾಬಾದ್‌ಗೆ ಹೋಗಿದ್ದರು. ಆ ವೇಳೆ ಅವರಿಗೆ ಎದುರಾದ ಒಂದು ಪ್ರಶ್ನೆಗೆ ಖಡಕ್ ಆಗಿಯೇ ಉತ್ತರಿಸಿದ್ದಾರೆ. ಅದೇನು ಪ್ರಶ್ನೆ ಮುಂದೆ ಓದಿ. ನಟ ಉಪೇಂದ್ರ ಸಖತ್ ಬ್ಯುಸಿ ಇದ್ದಾರೆ. ಅವರು ಬಹುವರ್ಷಗಳ ನಂತರ ನಿರ್ದೇಶನ ಮಾಡಿರುವ 'ಯುಐ' ಸಿನಿಮಾವನ್ನು ತೆರೆಗೆ ತರುವುದಕ್ಕೆ ಉಪೇಂದ್ರ ಭರ್ಜರಿ ಪ್ಲ್ಯಾನ್ ಮಾಡಿಕೊಂಡಿದ್ದಾರೆ. ಈ ಬಾರಿ ಯಾರು ಊಹೆ ಮಾಡಲೂ ಸಾಧ್ಯವಾಗದಂತಹ ಕಾನ್ಸೆಪ್ಟ್ ಜೊತೆಗೆ ಅಖಾಡಕ್ಕೆ ಇಳಿಯುತ್ತಿದ್ದಾರೆ ಉಪೇಂದ್ರ. ಎಲ್ಲಾ ಕಡೆ ಪ್ರಚಾರದಲ್ಲಿ ಬ್ಯುಸಿ ಆಗಿರುವ ಉಪ್ಪಿಗೆ ಈ ಮಧ್ಯೆ ಹೈದರಾಬಾದ್‌ನಲ್ಲಿ ಒಂದು ಪ್ರಶ್ನೆ ಎದುರಾಗಿದೆ. ಅದಕ್ಕೆ ಅವರು ಅಷ್ಟೇ ಖಡಕ್ ಆಗಿ ಉತ್ತರಿಸಿದ್ದಾರೆ. 'ಯುಐ' ಸಿನಿಮಾಕ್ಕಾಗಿ ಉಪೇಂದ್ರ ಹೈದರಾಬಾದ್‌ಗೆ ತೆರಳಿದ್ದರು. ಈ ವೇಳೆ ಅಲ್ಲಿನ ಪತ್ರಕರ್ತರೊಬ್ಬರು ಪ್ರಶ್ನೆಯೊಂದನ್ನು ಕೇಳಿದರು. ಕನ್ನಡ ಸಿನಿಮಾರಂಗದಲ್ಲಿ ನಿಮ್ಮ ರೀತಿಯಲ್ಲಿ ಹೊಸ ಆಲೋಚನೆ ಹೊಂದಿರುವ ಫಿಲ್ಮ್ ಮೇಕರ್ಸ್ ಈವರೆಗೂ ಬಂದಿಲ್ಲ. 'ಕೆಜಿಎಫ್' ಬರೋ ತನಕ ಯಾರೂ ಆ ದಿಸೆಯಲ್ಲಿ ಯೋಚಿಸಿರಲಿಲ್ಲ.. ಎಂದು ಅವರು ಪ್ರಶ್ನೆ ಕೇಳುತ್ತಿರುವಾಗಲೇ ಉಪೇಂದ್ರ ಅದಕ್ಕೆ ಸರಿಯಾದ ಉತ್ತರವನ್ನೇ ನೀಡಿದರು. ನೋಡಿ ಅದು ಹಾಗಲ್ಲ. ಈ ಚಿತ್ರರಂಗಕ್ಕೆ 100 ವರ್ಷ ಆಗಿದೆ ಎಂದರೆ, ಅಂದಿನಿಂದಲೂ ಹೊಸ ಹೊಸ ರೀತಿಯ ಫಿಲ್ಮ್ ಮೇಕರ್ಸ್ ಬರ್ತಾನೆ ಇದ್ದಾರೆ. ನಮಗೆ ಗೊತ್ತಿರುವುದಿಲ್ಲ ಅಷ್ಟೇ. ನಮಗೆ ಗೊತ್ತಿರುವುದನ್ನು ನಾವು ಮಾತಾಡ್ತೀವಿ ಅಷ್ಟೇ. ಸಾಕಷ್ಟು ಮಂದಿ ನಿರ್ದೇಶಕರು ಕನ್ನಡದಲ್ಲಿ ನೀವು ಊಹಿಸಲು ಸಾಧ್ಯವಾಗುವುದಿಲ್ಲ, ಅಂತಹ ಸಿನಿಮಾಗಳನ್ನು ಮಾಡಿದ್ದಾರೆ. ಭಿನ್ನ-ವಿಭಿನ್ನ ಸಿನಿಮಾಗಳನ್ನು ಮಾಡಿದ್ದಾರೆ, ಆದರೆ ನಮಗೆ ಗೊತ್ತಿರುವುದಿಲ್ಲ ಅಷ್ಟೇ ಎಂದು ಉಪೇಂದ್ರ ಹೇಳಿದ್ದಾರೆ.

## ರೋಹಿತ್ ಶರ್ಮಾ ವಿರುದ್ಧ ಮಾತ್ರ ಶತಕ ಸಿಡಿಸುವ ಟ್ರಾವಿಸ್ ಹೆಡ್..!

ಟ್ರಾವಿಸ್ ಹೆಡ್ ಟೆಸ್ಟ್ ಕ್ರಿಕೆಟ್‌ನಲ್ಲಿ ಈವರೆಗೆ 9 ಶತಕಗಳನ್ನು ಬಾರಿಸಿದ್ದಾರೆ. ಈ ಒಂಭತ್ತು ಸೆಂಚುರಿಗಳಲ್ಲಿ ಮೂರು ಶತಕಗಳು ಮೂಡಿಬಂದಿರುವುದು ಟೀಮ್ ಇಂಡಿಯಾ ವಿರುದ್ಧ ಎಂಬುದು ವಿಶೇಷ. ಅದರಲ್ಲೂ ರೋಹಿತ್ ಶರ್ಮಾ ನಾಯಕರಾಗಿ ಕಾಣಿಸಿಕೊಂಡ ಪಂದ್ಯಗಳಲ್ಲಿ ಹೆಡ್ ಅಬ್ಬರಿಸುತ್ತಿರುವುದೇ ಅಚ್ಚರಿ.

ಆಸ್ಟ್ರೇಲಿಯಾ ತಂಡದ ಸ್ಫೋಟಕ ದಾಂಡಿಗ ಟ್ರಾವಿಸ್ ಹೆಡ್ ಬಾರ್ಡರ್-ಗವಾಸ್ಕರ್ ಟೆಸ್ಟ್ ಸರಣಿಯಲ್ಲಿ ಭರ್ಜರಿ ಪ್ರದರ್ಶನ ಮುಂದುವರೆಸಿದ್ದಾರೆ. ಅಡಿಲೇಡ್‌ನ ಓವಲ್ ಮೈದಾನದಲ್ಲಿ ನಡೆದ ಪಿಂಕ್ ಬಾಲ್ ಟೆಸ್ಟ್‌ನಲ್ಲಿ 140 ರನ್ ಸಿಡಿಸಿ ಅಬ್ಬರಿಸಿದ್ದ ಹೆಡ್, ಇದೀಗ ಬ್ರಿಸ್ಬೇನ್ ಟೆಸ್ಟ್‌ನಲ್ಲೂ 152 ರನ್ ಚಚ್ಚಿದ್ದಾರೆ. ಈ ಮೂಲಕ ಟೀಮ್ ಇಂಡಿಯಾ ವಿರುದ್ಧ ಬ್ಯಾಕ್ ಟು ಬ್ಯಾಕ್ ಸೆಂಚುರಿ ಸಿಡಿಸಿ ಅಬ್ಬರಿಸಿದ್ದಾರೆ. ಟೀಮ್ ಇಂಡಿಯಾ ವಿರುದ್ಧ 31 ಅಂತಾರಾಷ್ಟ್ರೀಯ ಪಂದ್ಯಗಳನ್ನಾಡಿರುವ ಹೆಡ್ ಈವರೆಗೆ 4 ಶತಕಗಳನ್ನು ಬಾರಿಸಿದ್ದಾರೆ. ಈ ನಾಲ್ಕು ಸೆಂಚುರಿಗಳು ಮೂಡಿಬಂದಿರುವುದು ರೋಹಿತ್ ಶರ್ಮಾ ವಿರುದ್ಧ ಎಂಬುದು ವಿಶೇಷ. ಅಂದರೆ ಹಿಟ್‌ಮ್ಯಾನ್ ನಾಯಕತ್ವದಲ್ಲಿ ಮಾತ್ರ ಟ್ರಾವಿಸ್ ಹೆಡ್ ಅಬ್ಬರಿಸುತ್ತಿದ್ದಾರೆ. ರೋಹಿತ್ ಶರ್ಮಾ ನಾಯಕತ್ವದಲ್ಲಿ ಕಣಕ್ಕಿಳಿದ ಟೀಮ್ ಇಂಡಿಯಾ ವಿರುದ್ಧ ಟ್ರಾವಿಸ್ ಹೆಡ್ ಈವರೆಗೆ 6 ಇನಿಂಗ್ಸ್ ಆಡಿದ್ದಾರೆ. ಈ ಆರು ಇನಿಂಗ್ಸ್‌ಗಳಲ್ಲಿ 4 ಸೆಂಚುರಿ ಸಿಡಿಸಿರುವುದು ವಿಶೇಷ. ಅಲ್ಲದೆ ರೋಹಿತ್ ಶರ್ಮಾ ನಾಯಕನಾಗಿ ಇಲ್ಲದಿದ್ದಾಗ ಭಾರತದ ವಿರುದ್ಧ ಒಂದೇ ಒಂದು ಶತಕ ಬಾರಿಸಲು ಸಾಧ್ಯವಾಗಿಲ್ಲ ಎಂಬುದು ಇಲ್ಲಿ ಉಲ್ಲೇಖಾರ್ಹ. ಅಂದರೆ ಭಾರತ ತಂಡವನ್ನು ಇತರೆ ನಾಯಕರುಗಳು ಮುನ್ನಡೆಸಿದಾಗ ಟ್ರಾವಿಸ್ ಹೆಡ್ ಒಟ್ಟು 25 ಇನಿಂಗ್ಸ್ ಆಡಿದ್ದಾರೆ. ಈ ವೇಳೆ ಒಮ್ಮೆಯೂ ಮೂರಂಕಿ ಮೊತ್ತವನ್ನು ಕಲೆಹಾಕಲು ಸಾಧ್ಯವಾಗಿರಲಿಲ್ಲ. ಆದರೆ ರೋಹಿತ್ ಶರ್ಮಾ ನಾಯಕನಾಗಿ ಕಾಣಿಸಿಕೊಳ್ಳುವ ಪಂದ್ಯಗಳಲ್ಲಿ ಹೆಡ್ ಸಿಡಿಲಬ್ಬರದ ಪ್ರದರ್ಶಿಸುತ್ತಿರುವುದೇ ಅಚ್ಚರಿ. ರೋಹಿತ್ ಶರ್ಮಾ ನಾಯಕರಾಗಿ ಕಾಣಿಸಿಕೊಂಡ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ 2023 ಫೈನಲ್ ಪಂದ್ಯದಲ್ಲಿ ಟ್ರಾವಿಸ್ ಹೆಡ್ 163 ರನ್ ಬಾರಿಸಿದ್ದರು. ಇನ್ನು 2023ರ ಏಕದಿನ ವಿಶ್ವಕಪ್ ಫೈನಲ್ ಪಂದ್ಯದಲ್ಲಿ 137 ರನ್ ಚಚ್ಚಿದ್ದರು. ಇದೀಗ ಬಾರ್ಡರ್-ಗವಾಸ್ಕರ್ ಸರಣಿಯಲ್ಲಿ 140 ಹಾಗೂ 152 ರನ್‌ಗಳನ್ನು ಬಾರಿಸಿದ್ದಾರೆ. ಈ ಮೂಲಕ ರೋಹಿತ್ ಶರ್ಮಾ ಮುಂದಾಳತ್ವದ ಟೀಮ್ ಇಂಡಿಯಾ ವಿರುದ್ಧ ಟ್ರಾವಿಸ್ ಹೆಡ್ 6 ಪಂದ್ಯಗಳಲ್ಲಿ 4 ಸೆಂಚುರಿ ಸಿಡಿಸಿ ಅಬ್ಬರಿಸಿದ್ದಾರೆ



## ಕೊಹ್ಲಿ ಮತ್ತು ಆರ್‌ಸಿಬಿ ವಿರುದ್ಧದ ಪಂದ್ಯ ಆಡಲ್ಲ

ಮೊಹಮ್ಮದ್ ಸಿರಾಜ್ ಹೆಸರಿನಲ್ಲಿ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿರುವ ಹೇಳಿಕೆ ಹುಸಿಯಾಗಿದೆ. ವಾಸ್ತವವಾಗಿ ಸಿರಾಜ್ ಅಂತಹ ಯಾವುದೇ ಹೇಳಿಕೆ ನೀಡಿಲ್ಲ. ಮೊಹಮ್ಮದ್ ಸಿರಾಜ್ ಅವರು ರಾಯಲ್ ಚಾಲೆಂಜರ್ಸ್ ಬೆಂಗಳೂರು (ಆರ್‌ಸಿಬಿ) ಕುರಿತು ಭಾವನಾತ್ಮಕ ಪೋಸ್ಟ್ ಅನ್ನು ಹಂಚಿಕೊಂಡಿದ್ದಾರಷ್ಟೆ. ಮೊಹಮ್ಮದ್ ಸಿರಾಜ್ ಈ ಬಾರಿಯ ಇಂಡಿಯನ್ ಪ್ರೀಮಿಯರ್ ಲೀಗ್ 2025 ರಲ್ಲಿ ಗುಜರಾತ್ ಟೈಟಾನ್ಸ್ ಪರ ಆಡಲಿದ್ದಾರೆ. ಈ ಬಗ್ಗೆ ಮೊಹಮ್ಮದ್ ಸಿರಾಜ್ ಭಾವನಾತ್ಮಕ ಪೋಸ್ಟ್ ಅನ್ನು ಹಂಚಿಕೊಂಡಿದ್ದಾರೆ. ಈ ನಡುವೆ ವಿರಾಟ್ ಕೊಹ್ಲಿ ಎದುರು ಬೌಲಿಂಗ್ ಮಾಡಲು ಸಾಧ್ಯವಾಗದ ಕಾರಣ ಮೊಹಮ್ಮದ್ ಸಿರಾಜ್ ಆರ್‌ಸಿಬಿ ವಿರುದ್ಧದ ಐಪಿಎಲ್ ಪಂದ್ಯದಲ್ಲಿ ಆಡುವುದಿಲ್ಲ ಎಂದು ಹೇಳಿದ್ದಾರೆ ಎಂಬ ಪೋಸ್ಟ್ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದೆ. ಅನೇಕ ಬಳಕೆದಾರರು ಈ ಪೋಸ್ಟ್ ಅನ್ನು ಶೇರ್ ಮಾಡಿಕೊಳ್ಳುತ್ತಿದ್ದಾರೆ.

ಸಾಮಾಜಿಕ ಮಾಧ್ಯಮ ಬಳಕೆದಾರರು ಅವರು ವೈರಲ್ ಪೋಸ್ಟ್ ಅನ್ನು ಹಂಚಿಕೊಂಡು, ''ಐಪಿಎಲ್ 2025 ರಲ್ಲಿ ಆರ್‌ಸಿಬಿ ವಿರುದ್ಧ ಎರಡು ಪಂದ್ಯಗಳನ್ನು ಆಡಲು ನನಗೆ ಸಾಧ್ಯವಾಗುವುದಿಲ್ಲ. ಏಕೆಂದರೆ ಆ ಪಂದ್ಯದಲ್ಲಿ ನಾನು ವಿರಾಟ್ ಭಾಯ್ ಅವರ ಮುಂದೆ ಬೌಲಿಂಗ್ ಮಾಡಬೇಕಾಗುತ್ತದೆ. ನನಗೆ ಆ ರೀತಿ ಮಾಡಲು ಸಾಧ್ಯವಾಗುವುದಿಲ್ಲ ಎಂದು ಮೊಹಮ್ಮದ್ ಸಿರಾಜ್ ಹೇಳಿದ್ದಾರೆ'' ಎಂದು ಬರೆದುಕೊಂಡಿದ್ದಾರೆ. ಈ ಸುದ್ದಿಯ ಸತ್ಯಾಸತ್ಯತೆಯನ್ನು ಪರಿಶೋದಿಸಿದಾಗ ವೈರಲ್ ಹಕ್ಕು ಸುಳ್ಳು ಎಂದು ಕಂಡುಬಂದಿದೆ. ಮೊಹಮ್ಮದ್ ಸಿರಾಜ್ ಹೆಸರಿನಲ್ಲಿ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿರುವ ಹೇಳಿಕೆ ಹುಸಿಯಾಗಿದೆ. ವಾಸ್ತವವಾಗಿ ಸಿರಾಜ್ ಅಂತಹ ಯಾವುದೇ ಹೇಳಿಕೆ ನೀಡಿಲ್ಲ. ಮೊಹಮ್ಮದ್ ಸಿರಾಜ್ ಅವರು ರಾಯಲ್ ಚಾಲೆಂಜರ್ಸ್ ಬೆಂಗಳೂರು (ಆರ್‌ಸಿಬಿ) ಕುರಿತು ಭಾವನಾತ್ಮಕ ಪೋಸ್ಟ್ ಅನ್ನು ಹಂಚಿಕೊಂಡಿದ್ದಾರಷ್ಟೆ. ವೈರಲ್ ಕ್ಲೈಮ್‌ನ ಸತ್ಯವನ್ನು ತಿಳಿಯಲು, ನಾವು ಸಂಬಂಧಿತ ಕೀವರ್ಡ್‌ಗಳೊಂದಿಗೆ ಗೂಗಲ್ ನಲ್ಲಿ ಹುಡುಕಿದ್ದೇವೆ.

ಆದರೆ, ಸಿರಾಜ್ ಅವರ ಈ ಹೇಳಿಕೆಯನ್ನು ದೃಢೀಕರಿಸುವ ಯಾವುದೇ ವಿಶ್ವಾಸಾರ್ಹ ಮಾಧ್ಯಮ ವರದಿಯು ನಮಗೆ ಕಂಡುಬಂದಿಲ್ಲ. ಮೊಹಮ್ಮದ್ ಸಿರಾಜ್ ಅಂತಹ ಯಾವುದೇ ಹೇಳಿಕೆ ನೀಡಿದ್ದರೆ ಅದು ಹೆಡ್ ಲೈನ್ ಆಗುತ್ತಿತ್ತು. ಆದರೆ ಅಂತಹ ಯಾವುದೇ ಸುದ್ದಿ ಅಥವಾ ಪೋಸ್ಟ್ ನಮಗೆ ಕಂಡುಬಂದಿಲ್ಲ. ತನಿಖೆಯನ್ನು ಮುಂದಕ್ಕೆ ತೆಗೆದುಕೊಂಡು, ನಾವು ಮೊಹಮ್ಮದ್ ಸಿರಾಜ್ ಅವರ ಅಧಿಕೃತ ಸಾಮಾಜಿಕ ಮಾಧ್ಯಮ ಹ್ಯಾಂಡಲ್ ಅನ್ನು ಹುಡುಕಿದ್ದೇವೆ. ಇಲ್ಲಿಯೂ ನಮಗೆ ವೈರಲ್ ಕ್ಲೈಮ್‌ಗೆ ಸಂಬಂಧಿಸಿದ ಯಾವುದೇ ಪೋಸ್ಟ್ ಕಂಡುಬಂದಿಲ್ಲ.

## ಆರಂಭಿಕ ಆಘಾತಕ್ಕೀಡಾಗಿರುವ ಟೀಮ್ ಇಂಡಿಯಾಗೆ ಮಳೆಯೇ ಆಸರೆ..!

ಭಾರತ ಮತ್ತು ಆಸ್ಟ್ರೇಲಿಯಾ ನಡುವಣ ಬಾರ್ಡರ್-ಗವಾಸ್ಕರ್ ಟೆಸ್ಟ್ ಸರಣಿಯ ಮೂರನೇ ಪಂದ್ಯವು ಬ್ರಿಸ್ಬೇನ್‌ನಲ್ಲಿ ನಡೆಯುತ್ತಿದೆ. ಪರ್ತ್‌ನಲ್ಲಿ ನಡೆದ ಈ ಸರಣಿಯ ಮೊದಲ ಪಂದ್ಯದಲ್ಲಿ ಟೀಮ್ ಇಂಡಿಯಾ 295 ರನ್‌ಗಳ ಜಯ ಸಾಧಿಸಿದೆ. ಇನ್ನು ಅಡಿಲೇಡ್‌ನಲ್ಲಿ ನಡೆದ ದ್ವಿತೀಯ ಟೆಸ್ಟ್ ಪಂದ್ಯದಲ್ಲಿ ಆಸ್ಟ್ರೇಲಿಯಾ 10 ವಿಕೆಟ್‌ಗಳ ಗೆಲುವು ಭಾರತ ಮತ್ತು ಆಸ್ಟ್ರೇಲಿಯಾ ನಡುವಣ ಮೂರನೇ ಟೆಸ್ಟ್ ಪಂದ್ಯದ ಮೂರನೇ ದಿನದಾಟ ಅಂತ್ಯವಾಗಿದೆ. ಮಳೆಯೊಂದಿಗಿನ ಕಣ್ಣಾ ಮುಚ್ಚಾಲೆಯೊಂದಿಗೆ ಶುರುವಾದ ಮೂರನೇ ದಿನದಾಟದ ಆರಂಭದಲ್ಲೇ ಆಸ್ಟ್ರೇಲಿಯಾ ತಂಡವು ಮಿಚೆಲ್ ಸ್ಟಾರ್ಕ್ (18), ನಾಥನ್ ಲಿಯಾನ್ (2) ಹಾಗೂ ಅಲೆಕ್ಸ್ ಕ್ಯಾರಿ (70)ಯ ವಿಕೆಟ್ ಕಳೆದುಕೊಂಡಿತು. ಇದರೊಂದಿಗೆ ಆಸ್ಟ್ರೇಲಿಯಾ ತಂಡದ ಪ್ರಥಮ ಇನಿಂಗ್ಸ್ 445 ರನ್‌ಗಳಿಗೆ ಕೊನೆಗೊಂಡಿತು. ಇದರ ಬೆನ್ನಲ್ಲೇ ಪ್ರಥಮ ಇನಿಂಗ್ಸ್ ಆರಂಭಿಸಿದ ಭಾರತ ತಂಡಕ್ಕೆ ಮಿಚೆಲ್ ಸ್ಟಾರ್ಕ್ ಮೊದಲ ಓವರ್‌ನಲ್ಲೇ ಆಘಾತ ನೀಡಿದ್ದರು. ಮೊದಲ ಓವರ್‌ನ 2ನೇ ಎಸೆತದಲ್ಲಿ ಯಶಸ್ವಿ ಜೈಸ್ವಾಲ್ (4) ವಿಕೆಟ್ ಕಬಳಿಸಿ ಸ್ಟಾರ್ಕ್ ಆಸ್ಟ್ರೇಲಿಯಾಗೆ ಮೊದಲ ಯಶಸ್ಸು ತಂದುಕೊಟ್ಟರು. ಇದರ ಬೆನ್ನಲ್ಲೇ ಶುಭ್‌ಮನ್ ಗಿಲ್ (1) ಕೂಡ ಸ್ಟಾರ್ಕ್ ಎಸೆತದಲ್ಲಿ ವಿಕೆಟ್ ಒಪ್ಪಿಸಿದರು. ಇನ್ನು ನಾಲ್ಕನೇ ಕ್ರಮಾಂಕದಲ್ಲಿ ಕಣಕ್ಕಿಳಿದ ವಿರಾಟ್ ಕೊಹ್ಲಿ 3 ರನ್ ಗಳಿಸಿ ಜೋಶ್ ಹ್ಯಾಝುಲ್‌ವುಡ್ ಎಸೆತದಲ್ಲಿ ವಿಕೆಟ್ ಕೀಪರ್‌ಗೆ ಕ್ಯಾಚ್ ನೀಡಿದರು. ಆ ಬಳಿಕ ಬಂದ ರಿಷಭ್ ಪಂತ್ 9 ರನ್‌ಗಳಿಸಿ ಬಂದ ವೇಗದಲ್ಲೇ ಹಿಂತಿರುಗಿದರು. ಇದರ ನಡುವೆ ಹಲವು ಬಾರಿ ಪಂದ್ಯಕ್ಕೆ ಮಳೆಯ ಅಡಚಣೆಯನ್ನುಂಟು ಮಾಡಿತು.

ಇದಾಗ್ಯೂ ಉತ್ತಮ ದಾಳಿ ಸಂಘಟಿಸಿದ ಆಸ್ಟ್ರೇಲಿಯಾ ಬೌಲರ್‌ಗಳು 17 ಓವರ್‌ಗಳಲ್ಲಿ 51 ರನ್ ನೀಡಿ 4 ವಿಕೆಟ್ ಕಬಳಿಸಿದರು. 18ನೇ ಓವರ್ ಆರಂಭಕ್ಕೂ ಮುನ್ನ ಮತ್ತೆ ಮಳೆ ಬರಲಾರಂಭಿಸಿದರಿಂದ ಅಂಪೈರ್ ದಿನದಾಟವನ್ನು ಅಂತ್ಯಗೊಳಿಸಲು ನಿರ್ಧರಿಸಿದರು.

ಅದರಂತೆ ಮೂರನೇ ದಿನದಾಟದ ಅಂತ್ಯಕ್ಕೆ ಟೀಮ್ ಇಂಡಿಯಾ 4 ವಿಕೆಟ್ ಕಳೆದುಕೊಂಡು 51 ರನ್ ಕಲೆಹಾಕಿದೆ. ಕ್ರೀಸ್‌ನಲ್ಲಿ ಕೆಎಲ್ ರಾಹುಲ್ (33) ಹಾಗೂ ರೋಹಿತ್ ಶರ್ಮಾ (0) ಬ್ಯಾಟಿಂಗ್ ಕಾಯ್ದುಕೊಂಡಿದ್ದಾರೆ.



## ಯಾರಿಂದಲೂ ಸಾಧ್ಯವಾಗದ ವಿಶ್ವ ದಾಖಲೆ ನಿರ್ಮಿಸಿದ ಕೇನ್



ಇಂಗ್ಲೆಂಡ್ ವಿರುದ್ಧದ ಮೂರನೇ ಟೆಸ್ಟ್ ಪಂದ್ಯದ ದ್ವಿತೀಯ ಇನಿಂಗ್ಸ್‌ನಲ್ಲಿ ನ್ಯೂಝಿಲೆಂಡ್ ತಂಡ ಭರ್ಜರಿ ಬ್ಯಾಟಿಂಗ್ ಪ್ರದರ್ಶಿಸಿದೆ. ಈ ಪಂದ್ಯದ ದ್ವಿತೀಯ ಇನಿಂಗ್ಸ್‌ನಲ್ಲಿ ಕೇನ್ ವಿಲಿಯಮ್ಸನ್ ಶತಕ ಸಿಡಿಸಿದ್ದು, ಈ ಸೆಂಚುರಿ ನೆರವಿನಿಂದ ನ್ಯೂಝಿಲೆಂಡ್ ತಂಡವು 400 ಕ್ಕೂ ಅಧಿಕ ರನ್ ಕಲೆಹಾಕಿ ಬ್ಯಾಟಿಂಗ್ ಮುಂದುವರೆಸಿದೆ. 147 ವರ್ಷಗಳ ಟೆಸ್ಟ್ ಕ್ರಿಕೆಟ್ ಇತಿಹಾಸದಲ್ಲಿ ಕೇನ್ ವಿಲಿಯಮ್ಸನ್ ಹೊಸ ವಿಶ್ವ ದಾಖಲೆ ನಿರ್ಮಿಸಿದ್ದಾರೆ. ಅದು ಕೂಡ ಇಂಗ್ಲೆಂಡ್ ವಿರುದ್ಧ ಅತ್ಯಾಕರ್ಷಕ ಸೆಂಚುರಿ ಸಿಡಿಸುವ ಮೂಲಕ ಎಂಬುದು ವಿಶೇಷ. ಹ್ಯಾಮಿಲ್ಟನ್ ಸೆಡನ್ ಪಾರ್ಕ್ ಮೈದಾನದಲ್ಲಿ ನಡೆಯುತ್ತಿರುವ ಇಂಗ್ಲೆಂಡ್ ವಿರುದ್ಧದ 3ನೇ ಟೆಸ್ಟ್ ಪಂದ್ಯದಲ್ಲಿ ವಿಲಿಯಮ್ಸನ್ ಭರ್ಜರಿ ಶತಕ ಬಾರಿಸಿದ್ದಾರೆ. ಈ ಪಂದ್ಯದ ದ್ವಿತೀಯ ಇನಿಂಗ್ಸ್‌ನಲ್ಲಿ ಮೂರನೇ ಕ್ರಮಾಂಕದಲ್ಲಿ ಕಣಕ್ಕಿಳಿದ ವಿಲಿಯಮ್ಸನ್ 204 ಎಸೆತಗಳನ್ನು ಎದುರಿಸಿದರು. ಈ ವೇಳೆ 1 ಸಿಕ್ಸ್ ಹಾಗೂ 20 ಫೋರ್‌ಗಳೊಂದಿಗೆ 156 ರನ್ ಬಾರಿಸಿ ಮಿಂಚಿದರು. ಈ ಭರ್ಜರಿ ಶತಕದೊಂದಿಗೆ ಕೇನ್ ವಿಲಿಯಮ್ಸನ್ ಅಪರೂಪದ ದಾಖಲೆಯೊಂದನ್ನು ನಿರ್ಮಿಸಿದ್ದಾರೆ.

ಹೌದು, ಟೆಸ್ಟ್ ಕ್ರಿಕೆಟ್ ಇತಿಹಾಸದಲ್ಲಿ ಒಂದೇ ಮೈದಾನದಲ್ಲಿ ಸತತ 5 ಶತಕ ಸಿಡಿಸಿದ ವಿಶೇಷ ದಾಖಲೆಯೊಂದು ಕೇನ್ ವಿಲಿಯಮ್ಸನ್ ಪಾಲಾಗಿದೆ. ನ್ಯೂಝಿಲೆಂಡ್‌ನ ಸೆಡನ್ ಪಾರ್ಕ್ ಮೈದಾನದಲ್ಲಿ ಆಡಿದ ಕಳೆದ 5 ಪಂದ್ಯಗಳಲ್ಲೂ ವಿಲಿಯಮ್ಸನ್ ಬ್ಯಾಟ್‌ನಿಂದ ಸೆಂಚುರಿ ಮೂಡಿಬಂದಿವೆ. 2019 ರಲ್ಲಿ ಬಾಂಗ್ಲಾದೇಶ್ ವಿರುದ್ಧ ಈ ಮೈದಾನದಲ್ಲಿ ಆಡಿದ ಟೆಸ್ಟ್ ಪಂದ್ಯದಲ್ಲಿ ವಿಲಿಯಮ್ಸನ್ 200 ರನ್ ಬಾರಿಸಿದ್ದರು.

ಆ ಬಳಿಕ 2019 ರಲ್ಲೇ ಇದೇ ಮೈದಾನದಲ್ಲಿ ಇಂಗ್ಲೆಂಡ್ ವಿರುದ್ಧ 104 ರನ್ ಸಿಡಿಸಿದ್ದರು. ಇನ್ನು 2020 ರಲ್ಲಿ ವೆಸ್ಟ್ ಇಂಡೀಸ್ ವಿರುದ್ಧ 251 ರನ್ ಬಾರಿಸಿ ಮಿಂಚಿದ್ದರು. ಇನ್ನು 2024 ರಲ್ಲಿ ಸೆಡನ್ ಪಾರ್ಕ್ ಮೈದಾನದಲ್ಲಿ ಸೌತ್ ಆಫ್ರಿಕಾ ವಿರುದ್ಧ 133 ಬಾರಿಸಿದ್ದ ಕೇನ್ ವಿಲಿಯಮ್ಸನ್, ಇದೀಗ ಇಂಗ್ಲೆಂಡ್ ವಿರುದ್ಧ 156 ರನ್ ಸಿಡಿಸಿದ್ದಾರೆ. ಈ ಮೂಲಕ ಒಂದೇ ಮೈದಾನದಲ್ಲಿ ಸತತ 5 ಶತಕ ಸಿಡಿಸಿದ ವಿಶ್ವದ ಮೊದಲ ಬ್ಯಾಟರ್ ಎಂಬ ವಿಶ್ವ ದಾಖಲೆಯನ್ನು ಕೇನ್ ವಿಲಿಯಮ್ಸನ್ ತಮ್ಮದಾಗಿಸಿಕೊಂಡಿದ್ದಾರೆ.



Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966